ಸಂಪುಟ: 21, ಸಂಚಿಕೆ: 192, ಪುಟಗಳು: 8, ಭಾನುವಾರ, 21 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

**ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ**

। ಸೆಬೇಕಾ

### ಪಂಚಾಂಗ

(ಭಾನುವಾರ 21, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಶುಕ್ಲ ಪಕ್ಷ,
- ತೃತೀಯ, ಭಾನುವಾರ,
- ಪೂರ್ವ ಪಾಲ್ಗುಣಿ ನಕ್ಷತ್ರ
- ಉತ್ತರ ಪಾಲ್ಗುಣಿ ನಕ್ಷತ್ರ.
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

## ಬರಿದಾದ ಚೊಂಬನ್ನು ಅಕ್ಷಯ ಪಾತ್ರೆಯನ್ನಾಗಿ ಮಾಡ್ತೀವಿ

**ಬೆಂಗಳೂರು:** ಕಾಂಗ್ರೆಸ್‌ನವರ ಚೊಂಬು ಜಾಹೀರಾತಿನ ಕುರಿತು ಪ್ರಸ್ತಾಪಿಸಿ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ತಿರುಗೇಟು ಕೊಟ್ಟರು.

ಚಿಕ್ಕಬಳ್ಳಾಪುರದಲ್ಲಿ ನಡೆದ ವಿಜಯಸಂಕಲ್ಪ ಸಮಾವೇಶದಲ್ಲಿ ಮಾತನಾಡಿ, ನಾವು ಇಂದು ಸೇರಿರೋದು ಈ ರಾಜ್ಯದಲ್ಲಿ 28 ಸ್ಥಾನಗಳನ್ನ ಎನ್‌ಡಿಎ ಅಭ್ಯರ್ಥಿ ಗಳನ್ನ ಗೆಲ್ಲಿಸಬೇಕು. 10 ವರ್ಷ ಈ ದೇಶವನ್ನ ವಿಶ್ವದಲ್ಲಿ ಪ್ರಥಮ ಸ್ಥಾನಕ್ಕೆ ತೆಗೆದುಕೊಂಡು ನಮ್ಮ ಪ್ರಧಾನಿಗಳು ಹೋಗಿದ್ದಾರೆ ಎಂದರು.

ಇದೇ ವೇಳೆ ಕಾಂಗ್ರೆಸ್‌ನ ಚೊಂಬು ಜಾಹೀರಾತು ಪ್ರದರ್ಶನವನ್ನು ದೇವೇಗೌಡರು ಮಾಡಿದರು. ರಾಜ್ಯದ ಮುಖ್ಯಮಂತ್ರಿಗಳು ಚೆಂಬನ್ನ ಯಾರಿಗೆ ಕೊಟ್ಟರು? ಈ ಚೊಂಬನ್ನು 10 ವರ್ಷ ಮನಮೋಹನ್ ಸಿಂಗ್ ಕೊಟ್ಟಿದ್ದು . 2004-2014 ಅವಧಿಯಲ್ಲಿ ಈ ರಾಷ್ಟ್ರ ಆಳಿದರು, ಸೋನಿಯಾ ಗಾಂಧಿ ಯುಪಿಎ ಚೇರ್ ಮನ್ ಆಗಿದ್ರು. 2 ಜಿ ಸ್ಕ್ಯಾಮ್, ಕಲ್ಲಿದ್ದಲು ಹಗರಣ ಎಷ್ಟು ಭ್ರಷ್ಟಾಚಾರ ಹೀಗೆ ಎಷ್ಟು ಭ್ರಷ್ಟಾಚಾರಗಳು ನಡೆದಿವೆ. ಪುಟ 2



## ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಎಫ್‌ಐಆರ್ ದಾಖಲು

**ಬೆಂಗಳೂರು:** ಮತಯಾಚನೆ ವೇಳೆ ಬೆದರಿಕೆ ಆರೋಪದ ಹಿನ್ನಲೆ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಬೆಂಗಳೂರಿನ ಆರ್‌ಎಂಸಿ ಯಾರ್ಡ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಆರ್‌ಆರ್ ನಗರ ಅಪಾರ್ಟ್ಮೆಂಟ್ ವೊಂದರಲ್ಲಿ ಮತಯಾಚನೆ ವೇಳೆ ಡಿಕೆಶಿ ಬೆದರಿಕೆ ಹಾಕಿದ ಆರೋಪ ಕೇಳಿಬಂದಿತ್ತು. ಈ ಬಗ್ಗೆ ಚುನಾವಣಾ ಆಯೋಗಕ್ಕೆ ಬಿಜೆಪಿ ಮಾಹಿತಿ ನೀಡಿತ್ತು. ಇದರ ಬೆನ್ನಲ್ಲೇ ಮಾಹಿತಿ ಪಡೆದು ಪೊಲೀಸರು ಎಫ್‌ಐಆರ್ ದಾಖಲು ಮಾಡಿದ್ದಾರೆ.

ಬೆಂಗಳೂರು ಗ್ರಾಮಾಂತರ ಕಾಂಗ್ರೆಸ್ ಅಭ್ಯರ್ಥಿ ಡಿಕೆ ಸುರೇಶ್ ಪರ ಡಿಕೆ ಶಿವಕುಮಾರ್ ಮತಯಾಚನೆ ಮಾಡಿದ್ದರು. ಈ ವೇಳೆ ಬೆದರಿಕೆ ಹಾಕಿದ್ದ ಆರೋಪ ಕೇಳಿ ಬಂದಿತ್ತು. ಈ ಹಿನ್ನಲೆ ಲಂಚ ಮತ್ತು ಚುನಾವಣೆಯಲ್ಲಿ ಅನಗತ್ಯ ಪ್ರಭಾವ ಬಳಸಿರೋ ಆರೋಪದಡಿ ಪ್ರಕರಣ ದಾಖಲು ಮಾಡಲಾಗಿದೆ.

**ಚುನಾವಣಾ ಆಯೋಗಕ್ಕೆ ದೂರು ನೀಡಿದ್ದ ಬಿಜೆಪಿ:** ಡಿಕೆ ಶಿವಕುಮಾರ್ ಮತದಾರರನ್ನು ಬ್ಲ್ಯಾಕ್‌ಮೇಲ್ ಮಾಡಿದ್ದಾರೆ ಎಂದು ಬಿಜೆಪಿ ಕೆಲವು ದಿನಗಳ ಹಿಂದೆ ಟ್ವೀಟ್ ಮಾಡಿತ್ತು. ಅದರಲ್ಲಿ ಡಿಕೆಶಿ ಮಾತನಾಡುತ್ತಿರುವ




ವಿಡಿಯೋವನ್ನೂ ಕೂಡ ಹಂಚಿಕೊಂಡಿತ್ತು. 'ನಾನು ಇಲ್ಲಿಗೆ ವ್ಯವಹಾರಕ್ಕಾಗಿ ಬಂದಿದ್ದೇನೆ. ಈ ಅಪಾರ್ಟ್ಮೆಂಟ್ ನಲ್ಲಿ 2510 ಮನೆಗಳಿವೆ. 6424 ಮತಗಳಿವೆ. ನಿಮ್ಮ ಎರಡು ಸಮಸ್ಯೆಗಳೆಂದರೆ ಹಕ್ಕುಪತ್ರ ನಿಮಗೆ ಹಸ್ತಾಂತರವಾಗದಿರುವುದು. ಎರಡನೇಯದ್ದು ಕಾವೇರಿ ನೀರು ಸಂಪರ್ಕ ದೊರೆಯದೇ ಇರುವುದು. ಒಂದು ವೇಳೆ ಈ ಎರಡನ್ನೂ ನಾನು ನಿಮಗೆ ನೀಡಿದರೆ ನೀವು ನನಗೆ ಏನು ಕೊಡುತ್ತೀರಿ?, ನಿಮ್ಮ ಬೂತ್ ಆರ್‌ಆರ್ ನಗರದಲ್ಲಿದೆ. 2 ರಿಂದ 3 ಬೂತ್‌ನಲ್ಲಿ ನಮ್ಮ ಪರವಾದ ಮತಗಳಿವೆ. ಪ್ರಶ್ನಾರ್ಥಕವಾಗಿ ಉಳಿದಿರುವುದು ನಿಮ್ಮ ಬೂತ್ ಮಾತ್ರ. ಈಗ ಹೇಳಿ ಏನು ಮಾಡುತ್ತೀರಿ' ಎಂದು ಡಿಕೆಶಿ ಕೇಳುತ್ತಿರುವುದು ಬಿಜೆಪಿ ಟ್ವೀಟ್ ಮಾಡಿದ ವಿಡಿಯೋದಲ್ಲಿತ್ತು. ಈ ಹಿನ್ನಲೆ ದೂರು ನೀಡಲಾಗಿತ್ತು.

## ಸಂಕ್ಷಿಪ್ತ ಸುದ್ದಿ

### ಇಂದು ಭಾರಿ ಮಳೆ, ಆರೆಂಜ್, ಯೆಲ್ಲೋ ಅಲರ್ಟ್ ಘೋಷಣೆ



**ಬೆಂಗಳೂರು:** ಕರ್ನಾಟಕದ ಕರಾವಳಿ, ಉತ್ತರ ಹಾಗೂ ದಕ್ಷಿಣ ಒಳನಾಡಿನ ಬಹುತೇಕ ಕಡೆ ಇಂದು ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿಯಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಪುಟ 2

### ಗದಗ ಒಂದೇ ಕುಟುಂಬ ನಾಲ್ವರ ಕೊಲೆ ಪೂರ್ವ ನಿಯೋಜಿತ



**ಗದಗ:** ಒಂದೇ ಕುಟುಂಬದ ನಾಲ್ವರನ್ನು ಭೀಕರವಾಗಿ ಕೊಲೆ ಮಾಡಿರುವುದು ಪೂರ್ವನಿಯೋಜಿತ ಕೃತ್ಯವಾಗಿದೆ. ಮತ್ತು ಕೌಟುಂಬಿಕ ಹಾಗೂ ವ್ಯವಹಾರಿಕ ಹಿನ್ನೆಲೆಯಲ್ಲಿ ಕೊಲೆ ನಡೆದಿರುವ ಶಂಕೆ ವ್ಯಕ್ತವಾಗಿದೆ ಎಂದು ಎಸ್ ಪಿ ಬಿ.ಎಸ್.ನೇಮಗೌಡ ಹೇಳಿದ್ದಾರೆ. ಗದಗನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಏ.19ರ ಮುಂಜಾನೆ 3 ಗಂಟೆಗೆ ಐವರು ಮನೆಯೊಳಗೆ ನುಗ್ಗಿ ಕೊಲೆಗೈದು ಆರೋಪಿಗಳು ಪರಾರಿಯಾಗಿದ್ದಾರೆ. ಹಂತಕರ ಚಲನವಲನ ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗಿದೆ. ಆಸ್ತಿ ವಿಚಾರ, ವೈಯಕ್ತಿಕ ಕಾರಣಕ್ಕೆ ಕೊಲೆ ನಡೆದಿರುವ ಬಗ್ಗೆ ಸಂಶಯ ವ್ಯಕ್ತವಾಗಿದೆ. ಎಲ್ಲ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದೇವೆ. ಒಟ್ಟು ಐದು ತಂಡ ರಚಿಸಿ ಹಂತಕರಿಗಾಗಿ ಹುಡುಕಾಟ ನೆಡೆಸಿದ್ದೇವೆ. ಪುಟ 2

## ವಯನಾಡಿನಲ್ಲಿ ಮತದಾನ ಮುಗಿಯುತ್ತಿದ್ದಂತೆ ರಾಹುಲ್ ಇನ್ನೊಂದು ಕಡೆ ಸ್ಪರ್ಧಿಸ್ತಾರೆ

# ಕೈ ಸೋಲನ್ನು ಒಪ್ಪಿಕೊಂಡಿದೆ

**ನವದೆಹಲಿ:** ವಯನಾಡಿನಲ್ಲಿ ಏಪ್ರಿಲ್ 26ರಂದು ಮತದಾನ ಮುಗಿದ ಬಳಿಕ ರಾಹುಲ್ ಗಾಂಧಿ ಮತ್ತೊಂದು ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಘೋಷಿಸುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕಾಂಗ್ರೆಸ್ ಸೋಲನ್ನು ಒಪ್ಪಿಕೊಂಡಿದೆ, ಹಿರಿಯ ನಾಯಕರು ಲೋಕಸಭೆಗೆ ಸ್ಪರ್ಧಿಸುವ ಬದಲು ರಾಜ್ಯಸಭೆಗೆ ಹೋಗುತ್ತಿದ್ದಾರೆ ಎಂದರು. 2019ರಲ್ಲಿ ಅಮೇಥಿಯಿಂದ ಓಡಿಹೋದಂತೆ ಕೇರಳದ ವಯನಾಡಿನಲ್ಲೂ ಜನಬೆಂಬಲ ಪಡೆಯುವುದು ಕಷ್ಟವಾಗಿರುವುದರಿಂದ ಅಲ್ಲಿಂದಲೂ ಓಡಿಹೋಗುವುತ್ತಾರೆ ಎಂದು ಮೋದಿ ಟೀಕಿಸಿದ್ದಾರೆ.

ವಯನಾಡ್‌ನಿಂದ ಎರಡನೇ ಅವಧಿಗೆ ರಾಹುಲ್ ಗಾಂಧಿ ಅವರನ್ನು ಕಾಂಗ್ರೆಸ್ ಕಣಕ್ಕಿಳಿಸಿದೆ. 2019 ರಲ್ಲಿ, ಅವರು ತಮ್ಮ ಕುಟುಂಬದ ಭದ್ರಕೋಟೆಯಾದ ವಯನಾಡ್ ಮತ್ತು ಅಮೇಥಿಯಿಂದ ಸ್ಪರ್ಧಿಸಿದ್ದರು. ಅಮೇಥಿಯಲ್ಲಿ ಅವರು ಕೇಂದ್ರ ಸಚಿವೆ ಸ್ಮೃತಿ ಇರಾನಿ ವಿರುದ್ಧ ಸೋತರು. ಆದರೆ ಅವರು ವಯನಾಡಿನಲ್ಲಿ ಗೆಲುವು ಸಾಧಿಸುವಲ್ಲಿ ಯಶಸ್ವಿಯಾದರು.

ಇಂಡಿಯಾ ಒಕ್ಕೂಟದ ನಾಯಕರ್ಯಾರು ಎಂಬುದನ್ನು ಹೇಳಲು ಒಕ್ಕೂಟಕ್ಕೆ ಸಾಧ್ಯವಾಗುತ್ತಿಲ್ಲ. ಚುನಾವಣೆ ಘೋಷಣೆಗೂ ಮುನ್ನವೇ ಕಾಂಗ್ರೆಸ್ ನಾಯಕರು ಸೋಲನ್ನು ಒಪ್ಪಿಕೊಂಡಿದ್ದಾರೆ. ಮಹಾರಾಷ್ಟ್ರದ ಅಭಿವೃದ್ಧಿಗೆ ಕಾಂಗ್ರೆಸ್ ಅಡ್ಡಗಾಲು ಹಾಕುತ್ತಿದೆ.



ಮಹಾರಾಷ್ಟ್ರದ 48 ಲೋಕಸಭಾ ಸ್ಥಾನಗಳಿಗೆ ಏಪ್ರಿಲ್ 19 ರಿಂದ ಮೇ 20 ರವರೆಗೆ ಐದು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ಜೂನ್ 4 ರಂದು ಫಲಿತಾಂಶ ಪ್ರಕಟವಾಗಲಿದೆ. ನಾಂದೇಡ್‌ನಲ್ಲಿ ಎರಡನೇ ಹಂತದಲ್ಲಿ ಏಪ್ರಿಲ್ 26 ರಂದು ಮತದಾನ ನಡೆಯಲಿದೆ.

ಪ್ರತಿಪಕ್ಷಗಳ ಮೈತ್ರಿಕೂಟಕ್ಕೆ ಚುನಾವಣೆಗೆ ಸ್ಪರ್ಧಿಸಲು ಅಭ್ಯರ್ಥಿಗಳು ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಅವರ ಪಕ್ಷದ ನಾಯಕರು ಬಹುತೇಕ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರಕ್ಕೆ ಹೋಗುತ್ತಿಲ್ಲ. ಭಾರತದ ಪ್ರಜಾಸತ್ತಾತ್ಮಕ ಶಕ್ತಿ ಹೆಚ್ಚುತ್ತಿದೆ ಎಂಬುದನ್ನು ಹೆಚ್ಚಿನ ಮತದಾನದ ಶೇಕಡಾವಾರು ತೋರಿಸುತ್ತದೆ ಎಂದು ಮೋದಿ ಹೇಳಿದರು. ಪುಟ 2

## ಗುಂಡಿನ ದಾಳಿ, ಇವಿಎಂ ಧ್ವಂಸ

### ಏ.22ರಂದು ಮಣಿಪುರದ 11 ಮತಗಟ್ಟೆಗಳಲ್ಲಿ ಮರು ಮತದಾನ

**ಮಣಿಪುರ:** ಮಣಿಪುರದ ಇನ್ನರ್ ಮಣಿಪುರ ಲೋಕಸಭಾ ಕ್ಷೇತ್ರದ 11 ಮತಗಟ್ಟೆಗಳಲ್ಲಿ ಏಪ್ರಿಲ್ 22 ರಂದು ಮರು ಮತದಾನ ನಡೆಯಲಿದೆ. ಏಪ್ರಿಲ್ 19 ರಂದು ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನದ ವೇಳೆ ಈ ಬೂತ್ ಗಳಲ್ಲಿ ಬೆಂಕಿ, ಹಿಂಸಾಚಾರ ಮತ್ತು ವಿಧ್ವಂಸಕ ಕೃತ್ಯಗಳು ನಡೆದಿವೆ . ಈ ಸಂಬಂಧ ಚುನಾವಣಾ ಆಯೋಗ ಮರು ಮತದಾನಕ್ಕೆ ಆದೇಶಿಸಿದೆ.

ಮಾಧ್ಯಮ ವರದಿಗಳ ಪ್ರಕಾರ, ಮಣಿಪುರದ ಒಳ ಲೋಕಸಭೆ ಸ್ಥಾನಗಳ 11 ಬೂತ್‌ಗಳಲ್ಲಿ ಮರು ಮತದಾನ ನಡೆಯಲಿದೆ. ಇದು ಸಜೆಬ್, ಖುರೈ, ತೊಂಗಮ್, ಲೈಕೈ ಬಮನ್ ಕಂಪು (ಉತ್ತರ-ಎ), ಬಮನ್ ಕಂಪು (ಉತ್ತರ-ಬಿ), ಬಮನ್ ಕಂಪು (ಆಗ್ನೇಯ-ಪಶ್ಚಿಮ), ಬಮನ್ ಕಂಪು (ಆಗ್ನೇಯ), ಖೋಂಗ್‌ಮನ್ ವಲಯ-ವಿ



(ಎ), ಇರೊಯಿಶೆಂಬಾ, ಇರೊಯಿಶೆಂಬಾ ಮಾಮಾಂಗ್ ಲೈಕೈ, ಇರೊಯಿಶೆಂಬಾ ಮಾಯೈ ಲೈಕೈ ಮತ್ತು ಖೈದೆಮ್ ಮಖಾ. ಏಪ್ರಿಲ್ 19ರಂದು ಮಣಿಪುರದಲ್ಲಿ ಶೇ.72ರಷ್ಟು ಮತದಾನ ನಡೆದಿತ್ತು. ಬಿಷ್ಣುಪುರ್ ಜಿಲ್ಲೆಯ ಥಮನ್‌ಪೋಕ್ಪಿಯಲ್ಲಿರುವ ಮತಗಟ್ಟೆ ಕೇಂದ್ರದಲ್ಲಿ ಗುಂಡಿನ ದಾಳಿಯಲ್ಲಿ ಮೂವರು ಗಾಯಗೊಂಡಿದ್ದಾರೆ. ಪುಟ 2

## ಹೆಚ್ .ಡಿ. ಕುಮಾರಸ್ವಾಮಿ ವಿರುದ್ಧ ಎಫ್‌ಐಆರ್ ದಾಖಲು

**ತುಮಕೂರು:** ಲೋಕಸಭೆ ಚುನಾವಣೆ ಪ್ರಚಾರದ ವೇಳೆ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆರೋಪದಡಿ ಮಾಜಿ ಮುಖ್ಯಮಂತ್ರಿ ಹೆಚ್ . ಡಿ.ಕುಮಾರಸ್ವಾಮಿ ವಿರುದ್ಧ ಪ್ರಜಾಪ್ರತಿನಿಧಿ ಕಾಯ್ದೆ ಅಡಿಯಲ್ಲಿ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ. ಏ.13 ರಂದು ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಪರ ಪ್ರಚಾರದ ವೇಳೆ ''ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಅವರು ಕೊತ್ವಾಲ್ ರಾಮಚಂದ್ರನ ಗರಡಿಯಿಂದ ಬಂದವರು. ಡಿ.ಕೆ.ಸುರೇಶ್ ದೇಶ ಮತ್ತು ರಾಜ್ಯವನ್ನು ಉಳಿಸುತ್ತಾರಾ ಹಣದ ದಾಹಕ್ಕೆ ಏನು ಬೇಕಾದರೂ ಮಾಡುತ್ತಾರೆ'' ಎಂದು ಟೀಕಿಸಿದ್ದರು.

ಪ್ರಚಾರ ಸಭೆ ವೇಳೆ ಚುನಾವಣಾ



ಕರ್ತವ್ಯದಲ್ಲಿದ್ದ ಎಸ್‌ಎಫ್‌ಟಿ ಮಹೇಶ್ ದೂರು ಗುಬ್ಬಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಇದೀಗ ಬೆಂಗಳೂರಿನ ಘನ 42ನೇ ಅಡಿಷನಲ್ ಸಿಎಂಎಂ ನ್ಯಾಯಲಯ ಆದೇಶ ಆದೇಶದ ಮೇರೆಗೆ ಎಫ್ ಐಆರ್ ದಾಖಲಾಗಿದೆ. ಪುಟ 2

## ಪಾಕಿಸ್ತಾನದ ಕ್ಷಿಪಣಿ ಯೋಜನೆಗೆ ಸಹಾಯವಾದ ಚೀನಾ, ಬೆಲಾರಸ್‌ಗೆ ಅಮೆರಿಕದ ನಿಷೇಧ

**ನವದೆಹಲಿ:** ಪಾಕಿಸ್ತಾನದ ಬ್ಯಾಲಿಸ್ಟಿಕ್ ಕ್ಷಿಪಣಿ ಯೋಜನೆಗೆ ಬೇಕಾದ ಪ್ರಮುಖ ವಸ್ತುಗಳ ಪೂರೈಕೆ ಮಾಡುತ್ತಿದ್ದವೆನ್ನಲಾದ ಚೀನಾ ಮತ್ತು ಬೆಲಾರಸ್ ಕಂಪನಿಗಳಿಗೆ ಅಮೆರಿಕ ನಿಷೇಧ ಹೇರಿದೆ. ಇದರಲ್ಲಿ ಚೀನಾದ ಮೂರು ಕಂಪನಿಗಳು ಒಳಗೊಂಡಿವೆ. ಲಾಂಗ್ಡೆ ಟೆಕ್ನಾಲಜಿ ಡೆವಲಪ್ಮೆಂಟ್, ಟಿಯಾಂಜಿನ್ ಕ್ರಿಯೇಟಿವ್ ಸೋರ್ಸ್ ಇಂಟರ್ನ್ಯಾಷನಲ್ ಟ್ರೇಡ್ ಮತ್ತು ಗ್ರೆನ್ ಪೆಕ್ಟ್ ಕೋ ಇವು ನಿಷೇಧಿತವಾಗಿರುವ ಮೂರು ಚೀನೀ ಕಂಪನಿಗಳಾಗಿವೆ. ಇನ್ನು, ಬೆಲಾರಸ್ ದೇಶದ ಮಿನ್ಸ್ಕ್ ವ್ಹೀಲ್ ಟ್ರಾಕ್ಟರ್ ಪ್ಲಾಂಟ್ ಕಂಪನಿಯೂ ಅಮೆರಿಕದಿಂದ ನಿಷೇಧಿತವಾಗಿದೆ.



ಭಾರೀ ಹಾನಿ ಮಾಡುವ ಶಸ್ತ್ರಾಸ್ತ್ರಗಳ ತಯಾರಿಕೆಗೆ ಬೇಕಾದ ವಸ್ತುಗಳನ್ನು ಪೂರೈಸಬಾರದು ಎನ್ನುವ ನೀತಿಯನ್ನು ಅಮೆರಿಕ ಅನುಸರಿಸುತ್ತದೆ. ಈ ಹಿನ್ನೆಲೆಯಲ್ಲಿ ಪಾಕಿಸ್ತಾನದ ಕ್ಷಿಪಣಿ ತಯಾರಿಕೆಯ ಯೋಜನೆಗೆ ನೆರವಾದ ಈ ನಾಲ್ಕು ಕಂಪನಿಗಳು ಅಮೆರಿಕದ ಕೆಂಗಣ್ಣಿಗೆ ಗುರಿಯಾಗಿವೆ.

## ಜಂಟಿ ಪ್ರಣಾಳಿಕೆಗಾಗಿ ಇಂಡಿಯಾ ಒಕ್ಕೂಟದಿಂದ ಟಿಎಂಸಿ ಮನವೊಲಿಕೆ

**ನವದೆಹಲಿ:** ಲೋಕಸಭಾ ಚುನಾವಣೆಗೆ ಜಂಟಿ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲು ಟಿಎಂಸಿ ಮನವೊಲಿಸುವ ಪ್ರಯತ್ನವನ್ನು ಇಂಡಿಯಾ ಒಕ್ಕೂಟ ಮಾಡುತ್ತಿದೆ. ಲೋಕಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ದಿನಗಳಲ್ಲಿ ಭಾರತ ಒಕ್ಕೂಟವು ಜಂಟಿ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಿದೆ. ಜಂಟಿ ಪ್ರಣಾಳಿಕೆಯಲ್ಲಿ 7 ದೊಡ್ಡ ಭರವಸೆಗಳಿರುತ್ತವೆ. ಮೂಲಗಳ ಪ್ರಕಾರ, ಯುವಕರು, ಮಹಿಳೆಯರು, ರೈತರು, ಬಡವರು ಸೇರಿದಂತೆ 7 ವಿಭಾಗಗಳಿಗೆ ಇಂಡಿಯಾ ಅಲಯನ್ಸ್ ಸಾಮೂಹಿಕವಾಗಿ 7 ಅಂಶಗಳ ಭರವಸೆಗಳನ್ನು ಪ್ರಕಟಿಸಲಿದೆ.



ಈ ಏಳು ಅಂಶಗಳ ಭರವಸೆಗಳಲ್ಲಿ, ಇಂಡಿಯಾ ಮೈತ್ರಿಕೂಟದ ಎಲ್ಲಾ ಪಕ್ಷಗಳ ಪ್ರಣಾಳಿಕೆಯ ಪ್ರಮುಖ ಭರವಸೆಗಳನ್ನು ಸೇರಿಸಲಾಗಿದೆ. 30 ಲಕ್ಷ ಖಾಲಿ ಹುದ್ದೆಗಳ ನೇಮಕಾತಿ, ಜಾತಿ ಗಣತಿ ಮತ್ತು ಮೀಸಲಾತಿ ಮಿತಿ ಹೆಚ್ಚಳ, ಎಂಎಸ್‌ಪಿ ಖಾತರಿ ಸೇರಿದಂತೆ ಹಲವು ವಿಷಯಗಳು ಇರುತ್ತವೆ. ಪುಟ 2

## ರಾಜಕೀಯ ಪಕ್ಷಗಳಲ್ಲಿ ಮರೆಯಾಗುತ್ತಿದೆ ಆಂತರಿಕ ಪ್ರಜಾಪ್ರಭುತ್ವ

**ಬೆಂಗಳೂರು:** ಏಕಚಕ್ರಾಧಿಪತ್ಯದ ನಾಯಕತ್ವದಿಂದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗುತ್ತದೆಯೇ ಹೊರತು, ಪೂರಕವಾಗುವುದಿಲ್ಲ ಎಂದು ಹಿರಿಯ ಪತ್ರಕರ್ತ ಸಾಮಾಜಿಕ ಚಿಂತಕ ಸುಧೀಂದ್ರ ಕುಲಕರ್ಣಿ ಎಚ್ಚರಿಸಿದರು.

ಬೆಂಗಳೂರು ನಗರ ವಿಶ್ವವಿದ್ಯಾಲಯದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಿದ್ದ ಜನತಂತ್ರ ವ್ಯವಸ್ಥೆಯಲ್ಲಿ ಮಾಧ್ಯಮ ಮತ್ತು ಪತ್ರಕರ್ತರು ಎಂಬ ವಿಶೇಷ ಉಪನ್ಯಾಸ ಹಾಗೂ ಸಂವಾದದಲ್ಲಿ ಅವರು ಮಾತನಾಡಿದರು.

ಇಂದಿರಾಗಾಂಧಿ ಕಾಲದಲ್ಲಿ ಏಕಚಕ್ರಧಿಪತ್ಯದ ಹಿನ್ನೆಲೆಯಲ್ಲಿ ಜಾರಿಯಾದ ತುರ್ತು ಪರಿಸ್ಥಿಯ ದಿನಗಳನ್ನು ನೆನಪು ಮಾಡಿದ ಅವರು, ಈಗಲೂ ಎಲ್ಲದಕ್ಕೂ ಮೋದಿ, ಮೋದಿ ಎನ್ನುವ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದು ಒಳ್ಳೆಯ ಲಕ್ಷಣವಲ್ಲ



ಎಂದರು.

ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಬಹಳ ಮುಖ್ಯವಾದದ್ದು. ಕಾಂಗ್ರೆಸ್‌ನಲ್ಲಿ ಹಿಂದೆ ಕಾಣೆಯಾಗಿದ್ದ ಆಂತರಿಕೆ ಪ್ರಜಾಪ್ರಭತ್ವ ಈಗ ಸ್ವಲ್ಪ ಕಾಣಿಸುತ್ತಿದೆ. ಆದರೆ, ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವ ಮಾಯವಾಗಿದ್ದು, ಏಕವ್ಯಕ್ತಿ ನಿರ್ಧಾರಗಳೇ ಪ್ರಾಮುಖ್ಯತೆ ಪಡೆಯುತ್ತಿವೆ.

ಲೋಕಸಭಾ ಚುನಾವಣೆಯಲ್ಲಿ ಭಾರೀ ಬಹುಮತದಿಂದ ಆಳುವ ಪಕ್ಷಕ್ಕೆ ಅಧಿಕಾರ ಸಿಕ್ಕರೆ ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಯುವುದಿಲ್ಲ ಎಂದು ಎಚ್ಚರಿಸಿದರು.

ತುರ್ತು ಪರಿಸ್ಥಿತಿ ಕಾಲದಲ್ಲಿ ದೊಡ್ಡ ಆದರ್ಶವನ್ನು ಮುಂದಿಟ್ಟುಕೊಂಡು ಜನಸಂಘವು ಸಾಕಷ್ಟು ಕೆಲಸವನ್ನು ಮಾಡಿದೆ. ಪುಟ 2

## ಅಂಬೇಡ್ಕರ್ ಜಯಂತಿ ಮೆರವಣಿಗೆಯಲ್ಲಿ ಯುವಕನ ಹತ್ಯೆ ಪ್ರಕರಣ!

# 3 ಆರೋಪಿಗಳ ಬಂಧನ

ಕಲಬುರಗಿ: ಸಂವಿಧಾನ ಕೊಟ್ಟ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ರವರು ಜನ್ಮತಾಳಿದ ದಿನ. ಈ ದಿನವನ್ನ ಇಡೀ ದೇಶದ್ಯಾಂತ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತದೆ. ಅದರಂತೆ ಅಂದು ಕೂಡ ಕಲಬುರಗಿ ನಗರದ ಅಶೋಕ್ ನಗರ ಬಡಾವಣೆಯ ಜನ, ಅಂಬೇಡ್ಕರ್ ಅವರ ಮೂರ್ತಿ ಮೆರವಣಿಗೆ ಮಾಡುತ್ತಿದ್ದರು. ಮೆರವಣಿಗೆಯಲ್ಲಿ ನೂರಾರು ಜನ ಭಾಗಿಯಾಗಿದ್ದರು. ಈ ವೇಳೆ ಅದೇ ಬಡಾವಣೆಯ 21 ವರ್ಷದ ಆಕಾಶ್ ಮತ್ತು ನವೀನ್ ಎಂಬಾತನ ಮಧ್ಯೆ ಮೆರವಣಿಗೆಯಲ್ಲಿ ಡಿಜೆ ಮೇಲೆ ಕುಣಿತುಕೊಳ್ಳುವ ವಿಚಾರಕ್ಕೆ ಗಲಾಟೆ ಆಗಿ ಮಾರಾಮಾರಿ ಆಗಿದೆ. ಇದರಿಂದ ಕೆರಳಿದ ನವೀನ್,



ಅಲ್ಲಿಂದ ತೆರಳಿ ಚಾಕುವಿನೊಂದಿಗೆ ಜೇವರ್ಗಿ ಕ್ರಾಸ್ ಬಳಿ ಬಂದಿದ್ದಾನೆ. ಬಂದಿದ್ದೆ ತಡ ಏಕಾಏಕಿ ಆಕಾಶ್‌ಜಿಗೆ ಚಾಕುವಿನಿಂದ ಮನಬಂದಂತೆ ದೇಹದ ತುಂಬೆಲ್ಲ ಚುಚ್ಚಿ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿದ್ದನು. ಪ್ರಕರಣ ದಾಖಲಿಸಿಕೊಂಡಿದ್ದ ಅಶೋಕ್ ನಗರ ಠಾಣೆ ಪೊಲೀಸರು ಪ್ರಮುಖ ಆರೋಪಿ ನವೀನ್ ಮತ್ತು ಆದರ್ಶ್ ಹಾಗೂ ಅಂಬರೀಶ್ ಸೇರಿದಂತೆ ಮೂವರನ್ನ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಇನ್ನು ಕೊಲೆಯಾಗಿದ್ದ ಆಕಾಶ್ ಎಸ್‌ಎಸ್‌ಎಲ್‌ಸಿ ಮುಗಿಸಿ ಕಾಲೇಜು ಮೆಟ್ಟಿಲು ಹತ್ತದೇ ಗಲ್ಲಿಯಲ್ಲಿ ಓಡಾಡಿಕೊಂಡು ಇದ್ದನು. ಕೊಲೆ ಮಾಡಿದ ನವೀನ್ ಮತ್ತು ಕೊಲೆಯಾದ ಆಕಾಶ್ ಒಂದೇ ಬಡಾವಣೆಯ ನಿವಾಸಿಗಳು ಮತ್ತು ಸ್ನೇಹಿತರು. ಇಬ್ಬರ ಮಧ್ಯೆ ಮೇಲಿಂದ ಮೇಲೆ ಸಣ್ಣಪುಟ್ಟ ಕಾರಣಕ್ಕಾಗಿ ಜಗಳ ನಡಿತಾನೇ ಇತ್ತು. ಸಣ್ಣ ಜಗಳ ಇದೀಗ ಬಾಳಿಬದುಕಬೇಕಾಗಿದ್ದ ಯುವಕನ ಕೊಲೆಯಲ್ಲಿ ಅಂತ್ಯವಾಗಿದೆ. ಪುಟ 2

## ನನ್ನ ಹೇಳಿಕೆಯಿಂದ ನೇಹಾ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ

**ಬೆಂಗಳೂರು:**ನೇಹಾ ಹತ್ಯೆಯ ಕುರಿತು ನನ್ನ ಹೇಳಿಕೆಯಿಂದ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದಾರೆ.



ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹತ್ಯೆ ವೈಯಕ್ತಿಕ ಕಾರಣಕ್ಕೆ ನಡೆದಿದೆ ಎಂಬ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ನೇಹಾ ಹತ್ಯೆ ಹೇಳಿಕೆಯಿಂದ ಅವರ ಪೋಷಕರಿಗೆ ಬೇಸರವಾಗಿದ್ದರೆ ವಿಷಾದವಿರಲಿ. ಆದರೆ ಸತ್ಯವನ್ನು ಯಾವತ್ತೂ ಮುಚ್ಚಿಡೋಕೆ ಆಗಲ್ಲ. ತನಿಖೆ ಬಳಿಕ ಎಲ್ಲಾ ವಿಷಯ ಹೊರಬರುತ್ತೆ. ನಮಗೆ ಬಂದಿರೋ ವರದಿ ಪ್ರಕಾರ ಮಾತಾಡಿದ್ದೇವೆ. ಎಬಿವಿಪಿಯಾಗಲಿ ಮತ್ತೊಬ್ಬರಾಗಲಿ ಅವರಿಗೆ ಸತ್ಯಾಂಶ ಗೊತ್ತಿಲ್ಲ ಎಂದರು.

ಎಬಿವಿಪಿ ಕಾರ್ಯಕರ್ತರ ಮುತ್ತಿಗೆ ವಿಚಾರವಾಗಿ ಮಾತನಾಡಿದ ಅವರು, ಅವರಿಗೆ ಸತ್ಯಾಸತ್ಯತೆ ಗೊತ್ತಿಲ್ಲ. ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ. ನಮಗೆ ಜವಾಬ್ದಾರಿ ಇದೆ. ಅದರ ಬಗ್ಗೆ ತನಿಖೆ ಆಗುತ್ತೆ ಅಲ್ವಾ. ತನಿಖೆಯಲ್ಲಿ ಎಲ್ಲಾ ಸತ್ಯ ಹೊರಬೀಳುತ್ತೆ ಎಂದು ಹೇಳಿದರು.

## ಮಂಡ್ಯ-ಮೈಸೂರು ಭಾಗಕ್ಕೆ ಜೆಡಿಎಸ್ ಕೊಡುಗೆ ಏನೂ ಇಲ್ಲ

**ಮೈಸೂರು:** ಕೊಟ್ಟ ಕುದುರೆಯನೇರಲರಿಯದೆ ಮತ್ತೊಂದು ಕುದುರೆಯನೇರ ಬಯಸುವವನು ವೀರನೂ ಅಲ್ಲ ಶೂರನೂ ಅಲ್ಲ- ಅಲ್ಲಮ ಪ್ರಭು ಅವರ ವಚನಗಳನ್ನು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಮ್ಮ ಕಟ್ಟಾ ಎದುರಾಳಿ ಹೆಚ್.ಡಿ.ಕುಮಾರಸ್ವಾಮಿ ಅವರ ವಿಷಯದಲ್ಲಿ ಬಳಸಿ ಮಾತಾಡಿದರು.



ನಿನ್ನೆ ಮೈಸೂರು ಲೋಕಸಭಾ ಕ್ಷೇತ್ರದ ಕೆಆರ್ ನಗರಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಪ್ರಚಾರ ಮಾಡಿದ ಶಿವಕುಮಾರ್ ಮಂಡ್ಯದಿಂದ ಸ್ಪರ್ಧಿಸಿರುವ ಕುಮಾರಸ್ವಾಮಿ ವಿರುದ್ಧ ಹರಿಹಾಯ್ದರು. ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಿಗೆ ಕುಮಾರಸ್ವಾಮಿ ಕೊಡುಗೆ ಏನು ಎಂದು ಪ್ರಶ್ನಿಸಿದ ಶಿವಕುಮಾರ್ 2018ರಲ್ಲಿ ಕಾಂಗ್ರೆಸ್ ಪಕ್ಷ ಅವರನ್ನು ಮುಖ್ಯಮಂತ್ರಿ ಮಾಡಿದ್ದಾಗ ಎರಡು ಜಿಲ್ಲೆಗಳಿಂದ ಮೂರು ಎಂಎಲ್ ಸಿ, ಮೂರು ಶಾಸಕರ ಜೊತೆಗೆ ಡಿಸಿ ತಮ್ಮಣ್ಣ, ಪುಟ್ಟರಾಜು ಮತ್ತು ಸಾರಾ ಮಹೇಶ್-ಮಂತ್ರಿಗಳಿದ್ದರು. ಆದರೆ, ಅಷ್ಟಾಗಿಯೂ ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಿಗೆ ಕುಮಾರಸ್ವಾಮಿ ಏನನ್ನೂ ನೀಡಲಿಲ್ಲ.

ಈ ಭಾಗದ ಜನ ಎಸ್ ಎಂ ಕೃಷ್ಣ, ಶಂಕರೇಗೌಡ, ಮಾದೇಗೌಡ, ದೇವರಾಜ ಅರಸು ಮತ್ತು ಸಿದ್ದರಾಮಯ್ಯರನ್ನು ನೆನಪಿಸಿಕೊಳ್ಳುತ್ತಾರೆ. ಆದರೆ ಕಾಂಗ್ರೆಸ್ ನೆರವಿನಿಂದ ಪ್ರಧಾನಿಯಾದ ದೇವೇಗೌಡರಾಗಲೀ, ಎರಡೆರಡು ಬಾರಿ ಮುಖ್ಯಮಂತ್ರಿಯಾಗಿದ್ದ ಕುಮಾರಸ್ವಾಮಿಯಾಗಲಿ ಒಂದೇ ಒಂದು ನೀರಾವರಿ ಯೋಜನೆ ಬೇರೆ ಯಾವುದೇ ಕಾರ್ಯಕ್ರಮ ಜನರಿಗೆ ನೀಡಲಿಲ್ಲ, ಹಾಗಾಗಿ ಜನರು ಅವರನ್ನು ನೆನಪಿಸಿಕೊಳ್ಳಲ್ಲ ಎಂದು ಶಿವಕುಮಾರ್ ಹೇಳಿದರು.

# ಬಿಜೆಪಿ ಪರ ಮತಯಾಚನೆ

## ಗಿರಿಗೌಡನ ದೊಡ್ಡಿಯಲ್ಲಿ ವ್ಯಕ್ತಿ ಮೇಲೆ ಹಲ್ಲೆ

**ರಾಮನಗರ:** ಲೋಕಸಭೆ ಚುನಾವಣೆಗೆ ಬಿಜೆಪಿ ಪರ ಮತಯಾಚನೆ ಮಾಡಿದ್ದಕ್ಕೆ ರಾಮನಗರ ಜಿಲ್ಲೆ ಕಗ್ಗಲಿಪುರ ಪೊಲೀಸ್ ಠಾಣಾ ವ್ಯಾಪ್ತಿಯ ಗಿರಿಗೌಡನ ದೊಡ್ಡಿಯಲ್ಲಿ ಮಹಾದೇವ್ (32) ಎಂಬುವರ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದೆ. ಬಿಜೆಪಿ ಪರ ಮತಯಾಚನೆ ಮಾಡಿದ್ದಕ್ಕೆ ಮಹಾದೇವ್ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಅವರ ಕುಟುಂಬದವರು ಆರೋಪಿಸಿದ್ದಾರೆ. ಶುಕ್ರವಾರ ರಾತ್ರಿ ಮಹಾದೇವ್ ಅವರನ್ನು ಗುಂಪೊಂದು ಥಳಿಸುತ್ತಿರುವ ವಿಡಿಯೋ ಮೊಬೈಲ್ ನಲ್ಲಿ ಸೆರೆಯಾಗಿದೆ.



ಸ್ಥಳೀಯ ಪಂಚಾಯ್ತಿ ಮುಖಂಡರು ಥಳಿಸಿದ್ದಾರೆ ಎಂದು ಆರೋಪ ಮಾಡಲಾಗಿದೆ. ಈ ಮಧ್ಯೆ ರೌಡಿ ಚಟುವಟಿಕೆ ಮಾಡುತ್ತಿದ್ದುದಕ್ಕೆ ಅವರ ಮೇಲೆ ಹಲ್ಲೆ ಮಾಡಲಾಗಿದೆ ಎಂದು ಇನ್ನು ಕೆಲವು ದೂರಿದ್ದಾರೆ. ಸದ್ಯ ಮಹಾದೇವ್‌ರನ್ನು ಹಾರೋಹಳ್ಳಿಯ ದಯಾನಂದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಕಗ್ಗಲಿಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಘಟನೆ ನಡೆದಿದೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಡಾ. ಸಿಎನ್ ಮಂಜುನಾಥ್ ಪರ ಪ್ರಚಾರ ಮಾಡಿದ್ದಕ್ಕೆ ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಅಂಚೆಪಾಳ್ಯದಲ್ಲಿ ಕೆಂಪನಹಳ್ಳಿ ಗ್ರಾಮ ಪಂಚಾಯತಿ ಜೆಡಿಎಸ್ ಬೆಂಬಲಿತ ಸದಸ್ಯ ಮಂಜುನಾಥ್ ಎಂಬವರ ಮೇಲೆ ಇತ್ತೀಚೆಗೆ ಹಲ್ಲೆ ಮಾಡಲಾಗಿತ್ತು. ಮಂಜುನಾಥ್ ಪರ ಪ್ರಚಾರ ಮಾಡಿದ್ದ ಬಿಜೆಪಿ ಕಾರ್ಯಕರ್ತ ನವೀನ್ ಮೇಲೆ ಕೂಡ ಹಲ್ಲೆ ನಡೆಸಲಾಗಿತ್ತು. ಕಾಂಗ್ರೆಸ್ಸಿನ ಗೂಂಡಾಗಳು ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದರು.

ಮತ್ತೊಂದೆಡೆ, ಕುಶಾಲನಗರದಲ್ಲಿ ಬಿಜೆಪಿಯ ಮೈಸೂರು ಕೊಡಗು ಅಭ್ಯರ್ಥಿ ಯದುವೀರ್ ಒಡೆಯರ್ ಪರ ಚುನಾವಣಾ ಪ್ರಚಾರ ನಡೆಸಿದ್ದ ಬಿಜೆಪಿ ಕಾರ್ಯಕರ್ತರೊಬ್ಬರು ಹಿಟ್ ಅಂಡ್ ರನ್ ಗೆ ಬಲಿಯಾಗಿದ್ದರು. ಇದೊಂದು ಉದ್ದೇಶಪೂರ್ವಕ ಕೃತ್ಯ ಎಂದು ಆರೋಪಿಸಿದ್ದ ಬಿಜೆಪಿ ಪ್ರತಿಭಟನೆ ನಡೆಸಿತ್ತು.

## ಮಗಳಿಗೆ ರಕ್ಷಣೆ ಕೊಟ್ಟಿದ್ದಕ್ಕೆ ಯುವತಿ ತಾಯಿಯ ಸೀರೆ ಎಳೆದಾಡಿ ದುರ್ವರ್ತನೆಗೈದ ಪುಂಡ!

**ರಾಯಚೂರು:** ಹುಬ್ಬಳ್ಳಿಯ ನೇಹಾ ಕೊಲೆ ಪ್ರಕರಣದ ಬೆನ್ನಲ್ಲೇ ರಾಯಚೂರಿನಲ್ಲೊಂದು ಅಮಾನವೀಯ ಘಟನೆ ನಡೆದಿದೆ. ನಿತ್ಯ ಪೀಡಿಸುತ್ತಿದ್ದ ಯುವಕನಿಂದ ಮಗಳಿಗೆ ರಕ್ಷಣೆ ಕೊಟ್ಟಿದ್ದಕ್ಕೆ ಹೆತ್ತವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಲಾಗಿದೆ.



ರಾಯಚೂರಿನ ಸಿಂಧನೂರು ತಾಲೂಕಿನ ಆರ್ ಎಚ್ ಕ್ಯಾಂಪ್ 3 ರಲ್ಲಿ ಘಟನೆ ನಡೆದಿದೆ. ಯುವಕನ ಕಾಟ ತಪ್ಪಿಸಲು ಮಗಳನ್ನ ಊರು ಬಿಡಿಸಿ ಸಂಬಂಧಿಕರ ಮನೆಯಲ್ಲಿರಿಸಿದ್ದಕ್ಕೆ, ಆರೋಪಿ ಪ್ರಣವ್ ಹಾಗೂ ಆತನ ಕಡೆಯವರು ಯುವತಿ ತಂದೆ ಹೀರಾ ಮಹಾನ್, ತಾಯಿ ಶೃತಿ ಮಂಡಲ್, ಸಹೋದರ ಹೀಮಂತು ಸಂಬಂಧಿ ಶುಬ್ರತೋ ಮೇಲೆ ಹಲ್ಲೆ ಮಾಡಿದ್ದಾರೆ.

ಯುವತಿ ಸಂಪರ್ಕಕ್ಕೆ ಸಿಗದೇ ಇದ್ದಾಗ ರೊಚ್ಚಿಗೆದ್ದು, ಆಕೆಯನ್ನ ಯಾಕೆ ಬೇರೆಡೆ ಕಳುಹಿಸಿದ್ರಿ, ಆಕೆಯನ್ನ ಮತ್ತೆ ಕರೆತನ್ನಿ ಅಂತ ಕಿರುಕುಳ ನೀಡಿ ಹಲ್ಲೆ ಮಾಡಿದ್ದಾರೆ. ಯುವತಿ ತಂದೆ ಕಾಲು ಮುರಿದಿದ್ದು, ಕಣ್ಣಿಗೆ ಗಂಭೀರ ಗಾಯವಾಗಿದೆ. ಯುವತಿ ತಾಯಿ ಸೀರೆ ಎಳೆದಾಡಿ ಅಮಾನವೀಯವಾಗಿ ವರ್ತನೆ ಮಾಡಿದ್ದಾರೆ ಅಂತ ಆರೋಪಿಸಲಾಗಿದೆ. ಆರೋಪಿ ಪ್ರಣವ್ ಪ್ರೀತಿ-ಪ್ರೇಮ ಅಂತ ಟಾರ್ಚರ್ ಕೊಡ್ತಿದ್ದ ಎನ್ನಲಾಗಿದೆ.

ಆರೋಪಿಗಳಾದ ಪ್ರಣವ್ ಬಿಸ್ವಾಸ್, ಪಿಯೂಸ್ ಬಿಸ್ವಾಸ್, ಮಧು ಬಿಸ್ವಾಸ್ ವಿರುದ್ದ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯುವತಿ ತಂದೆ ಸಿಂಧನೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

### ನಟ ಹರ್ಷಿಕಾ-ಭುವನ್ ಮೇಲೆ ಹಲ್ಲೆ

## ದೂರು ದಾಖಲಿಸಿದ ದಂಪತಿ

**ಬೆಂಗಳೂರು:** ನಟಿ ಹರ್ಷಿಕಾ ಪೂಣಚ್ಚ ದಂಪತಿಗೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪತಿ ಭುವನ್ ಜೊತೆ ನಗರ ಪೊಲೀಸ್ ಆಯುಕ್ತರ ಕಚೇರಿಗೆ ಬಂದ ಹರ್ಷಿಕಾ ದಂಪತಿ ಅಂದು ನಡೆದು ಘಟನೆಯ ಕುರಿತಂತೆ ದೂರು ದಾಖಲಿಸಿದ್ದಾರೆ. ಪೊಲೀಸರು ಕರೆ ಮಾಡಿದ ಬೆನ್ನಲ್ಲೇ ನಡೆದ ಘಟನೆಯ ಬಗ್ಗೆ ವಿವರಣೆಯನ್ನೂ ಅವರು ಕೊಟ್ಟಿದ್ದಾರೆ.



ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಹರ್ಷಿಕಾ, ನಿನ್ನೆ ಸಂಬಂಧಿಕರೆಲ್ಲ ಇದ್ರು ಆಗ ಪೊಲೀಸರು ಕರೆ ಮಾಡಿದ್ರು. ನಿನ್ನೆಯಿಂದ ಎಸಿಪಿ ಟಚ್ ಲ್ಲಿ ಇದ್ರು. ಆ ಟ್ವೀಟನ್ನ ನಾನೆ ಬರೆದಿದ್ದು. ದೂರು ಕೊಟ್ಟಿದ್ದೆ ತಪ್ಪಾ ಹಾಗಾದ್ರೆ. ನಾವು ಯಾವುದೇ ಪಕ್ಷದಲ್ಲಿ ಗುರುತಿಸಿಕೊಂಡಿಲ್ಲ. ನಮ್ಮ ಹಿತೈಷಿಗಳು ಕರೆ ಮಾಡಿ ದೂರು ಕೊಡುವಂತೆ ಹೇಳಿದ್ರು. ಎಸಿಪಿ ಗೀತಾ ಅವರನ್ನು ಇಂದು ಭೇಟಿಯಾಗಬೇಕಿತ್ತು. ಆದ್ರೆ ಅಲ್ಲಿ ಯಾವುದೋ ಪ್ರೊಟೆಸ್ಟ್ ಇದೆ ಅಂತ ಹೇಳಿದ್ರು. ಹೀಗಾಗಿ ಕಮಿಷನರ್ ಕಚೇರಿಗೆ ದೂರು ಕೊಡಲು ಬಂದ್ವಿ. ಈ ತರಹದ ಘಟನೆಗಳು ಬೆಂಗಳೂರಿನಲ್ಲಿ ಹಲವಾರು ನಡೆದಿದೆ. ಕರ್ನಾಟಕದಲ್ಲಿ ನಾವೆಲ್ಲ ಒಂದೆ. ಯಾವುದೇ ಏರಿಯಾಗೆ ಹೋದ್ರು ಭಯವಿಲ್ಲದೇ ಹೋಗಬೇಕು. ಅಂದು ಕರಾಮ ಹೋಟೆಲ್ ಹೋಗಿದ್ವಿ. ಊಟ ಮುಗಿಸಿ ಹೊರಬಂದಿದ್ವಿ. ಕಾರಿನಲ್ಲಿ ಕುಳಿತ 2 ಸೆಕೆಂಡಲ್ಲಿ ಇಬ್ಬರು ಬಂದ್ರು. ಇಬ್ಬರು ದೊಡ್ಡ ಗಾಡಿ ನೋಡ್ಕಂಡು ತೆಗೀರಿ ಅಂದ್ರು. ನಾನು ಫ್ಯೂಚರ್ ಮಾತನಾಡಬೇಡ ತೆಗೀತಿನಿ ಬಿಡಿ ಅಂತ ಹೇಳ್ದೆ. ಕನ್ನಡದವರಿಗೆ ಬುದ್ದಿ ಕಲಿಸಬೇಕು ಅಂತ ಅವರ ಭಾಷೆಯಲ್ಲಿ ಮಾತನಾಡಿದ್ರು. ಏಕಾಏಕಿ 20 ಜನ ಅಟ್ಯಾಕ್ ಮಾಡಿದ್ರು. ಈ ವೇಳೆ ಆರ್ ಆರ್ ನಗರ ಇನ್ಸ್ ಪೆಕ್ಟರ್ ಗೆ ಕರೆಮಾಡಿದ್ವಿ. ಅವರು ಏರು ದನಿಯಲ್ಲಿ ಮಾತನಾಡಿದ್ದಕ್ಕೆ ಅಲ್ಲಿಂದ ಪರಾರಿಯಾದ್ರು ಅಂದಿದ್ದಾರೆ.

ಕಮಿಷನರ್ ಕಚೇರಿಗೆ ದೂರು ಕೊಟ್ಟ ಬಳಿಕ ಮಾತನಾಡಿದ ನಟ ಭುವನ್, ನಾವು ಕಮಿಷನರ್ ಭೇಟಿಗೆ ಬಂದಿದ್ದೆವು. ಅವರ ಇಲ್ಲದ ಕಾರಣ ಪೂರ್ವ ವಿಭಾಗದ ಹೆಚ್ಚುವರಿ ಆಯುಕ್ತರನ್ನ ಭೇಟಿಯಾದ್ವಿ. ಎಫ್ ಐ ಆರ್ ಮಾಡಿ ಕ್ರಮ ತೆಗೆದುಕೊಳ್ತಿವಿ ಅಂತ ಹೇಳಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಬೇರೆ ರೂಪ ತೆಗೆದುಕೊಳ್ಳುತ್ತದೆ ಅಂತ ದೂರು ಕೊಟ್ಟಿಲ್ಲ. ಅಂದು ಆ ಸಂದರ್ಭದಲ್ಲಿ ಹೊಯ್ಸಳ ಇತ್ತು. ಅಲ್ಲಿ ಹೋಗಿ ಅವರ ಬಳಿ ಮಾತನಾಡಿದ್ವಿ. ಆವತ್ತಿನ ಪರಿಸ್ಥಿತಿಯಲ್ಲಿ ಕಂಪ್ಲೆಂಟ್ ಕೊಡುವ ಪರಿಸ್ಥಿತಿಯಲ್ಲಿರಲಿಲ್ಲ. ತುಂಬಾ ಜನ ಫೋನ್ ಮಾಡಿ ದೂರು ಕೊಡದಿದ್ರೆ ತಪ್ಪಾಗುತ್ತೆ ಅಂತ ಹೇಳ್ತಿದ್ದಾರೆ. ಹಾಗಾಗಿ ಕಾನೂನು ಕ್ರಮ ತಗೆದುಕೊಳ್ಳಿ ಎಂದು ಕೇಳುತ್ತಿದ್ದೆವೆ ಎಂದರು.

# ನನ್ನ ಮಗ ತಪ್ಪು ಮಾಡಿದ್ದಾನೆ.. ಅವನಿಗೆ ಶಿಕ್ಷೆ ಆಗಲೇಬೇಕು

**ಧಾರವಾಡ:** ನನ್ನ ಮಗ ಮಾಡಿರುವ ತಪ್ಪಿಗೆ ಕರ್ನಾಟಕದ ಸಮಸ್ತ ಜನತೆಗೆ ಕೈಮುಗಿದು ಕ್ಷಮೆ ಯಾಚಿಸುತ್ತೇನೆ ಎಂದು ನೇಹಾ ಹತ್ಯೆಗೈದ ಫಯಾಜ್ ತಾಯಿ ಮುಮ್ತಾಜ್ ಕಣ್ಣೀರಿಟ್ಟಿದ್ದಾರೆ.

ಮಗನ ಕೃತ್ಯಕ್ಕೆ ಬೇಸರ ವ್ಯಕ್ತಪಡಿಸಿದ ಅವರು, ನೇಹಾಳ ತಂದೆ-ತಾಯಿಯವರಲ್ಲೂ ನಾನು ಕ್ಷಮೆ ಕೇಳುತ್ತೇನೆ. ನೇಹಾ ಕೂಡ ನನ್ನ ಮಗಳು ಇದ್ದಂತೆ. ನೇಹಾ ಬೇರೆಯಲ್ಲ, ನನ್ನ ಮಗಳು ಬೇರೆಯಲ್ಲ, ನೇಹಾ ತಂದೆ-ತಾಯಿಗೆ ಆಗಿರುವಷ್ಟೇ ದುಃಖ ಆಗಿದೆ ಎಂದು ಅಳಲು ತೋಡಿಕೊಂಡರು.



ನನ್ನ ಮಗ ಮಾಡಿರುವುದು ತಪ್ಪು. ಯಾವ ಮಕ್ಕಳು ಮಾಡಿದರು ತಪ್ಪು ತಪ್ಪೇ. ಈ ನೆಲದ ಕಾನೂನು ಏನು ಹೇಳುತ್ತೋ ಅದರ ಪ್ರಕಾರವೇ ಶಿಕ್ಷೆ ಆಗಲಿ ಎಂದು ಹೇಳಿದರು.

ನನ್ನ ಮಗನನ್ನ ಐಎಎಸ್ ಅಧಿಕಾರಿ ಮಾಡುವ ಆಸೆ ಇತ್ತು. ತುಂಬಾ ಬುದ್ಧಿವಂತ ಇದ್ದ. ಎಲ್‌ಕೆಜಿ, ಯುಕೆಜಿ ಯಿಂದ 90% ಜಾಸ್ತಿ ಮಾರ್ಕ್ಸ್ ತೆಗೆಯುತ್ತಿದ್ದ ಎಂದು ಮಗನ ಬಗ್ಗೆ ಹೇಳಿಕೊಂಡರು.

ಅವನು ತಪ್ಪು ಮಾಡಿದ್ದಾನೆ. ಶಿಕ್ಷೆ ಆಗಲೇಬೇಕು. ನಾನು ಕೂಡ ನೂರಾರು ಮಕ್ಕಳಿಗೆ ಶಿಕ್ಷೆ ಕೊಟ್ಟಿದ್ದೇನೆ. ಈಗ ನನ್ನ ಮಗ ತಪ್ಪು ಮಾಡಿದ್ದಾನೆ ಅಂದ್ಮೇಲೆ ಶಿಕ್ಷೆ ಆಗಬೇಕು. ಶಿಕ್ಷೆಯನ್ನು ಅವನು ಅನುಭವಿಸಲಿ. ಮಗನ ತಪ್ಪಿಗೆ ನಾವು ತಲೆ ತಗ್ಗಿಸುವಂತಾಗಿದೆ ಎಂದು ಕಣ್ಣೀರಿಟ್ಟರು.

## ಏನು ಅಕ್ಷಯ ಪಾತ್ರೆ ಅಂತಾ ಹೆಚ್‌ಡಿಡಿ ಬಿಡಿಸಿ ಹೇಳಲಿ

**ಮಂಡ್ಯ:** ಏನು ಅಕ್ಷಯ ಪಾತ್ರೆ ಅಂತಾ ಹೆಚ್‌ಡಿಡಿ ಬಿಡಿಸಿ ಹೇಳಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿರುಗೇಟು ನೀಡಿದರು. ಕೆಆರ್ ಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅವರು ಕೊಟ್ಟ ಖಾಲಿ ಚೊಂಬನ್ನ ಜನರ ಮುಂದಿಟ್ಟಿದ್ದೇವೆ. ಏನು ಅಕ್ಷಯ ಪಾತ್ರೆ, ಎಂದು ಬಿಡಿಸಿ ಹೇಳಲಿ. ಹೊಟ್ಟೆ ತುಂಬಿತಾ? ಜೇಬು ತುಂಬಿತಾ? ಹೇಳಲಿ. ಇದೇ ದೇವೇಗೌಡರು ಬಿಜೆಪಿ ಬಗ್ಗೆ ಏನು ಹೇಳಿದ್ರು, ಎಂದು ಪ್ರಶ್ನಿಸಿದರು. ಕುಮಾರಸ್ವಾಮಿ ಬಿಜೆಪಿ ಬಗ್ಗೆ ಏನೇನು ಮಾತನಾಡಿದ್ರು? ಯಡಿಯೂರಪ್ಪ ಜೆಡಿಎಸ್ ಬಗ್ಗೆ ಏನು ಹೇಳಿದ್ರು. ಎಲ್ಲವನ್ನೂ ರೀ ಕಾಲ್ ಮಾಡಲಿ ಎಂದು ತಿಳಿಸಿದರು.

**ಹೆಚ್‌ಡಿಡಿ ಹೇಳಿದ್ದೇನು?:** ರಾಜ್ಯದ ಮುಖ್ಯಮಂತ್ರಿಗಳು ಚೆಂಬನ್ನ ಯಾರಿಗೆ ಕೊಟ್ಟರು? ಈ ಚೊಂಬನ್ನು 10 ವರ್ಷ ಮನಮೋಹನ್ ಸಿಂಗ್ ಕೊಟ್ಟಿದ್ದು. 2004-2014 ಅವಧಿಯಲ್ಲಿ ಈ ರಾಷ್ಟ್ರ ಆಳಿದರು, ಸೋನಿಯಾ ಗಾಂಧಿ ಯುಪಿಎ ಚೇರ್ ಮನ್ ಆಗಿದ್ರು. 2 ಜಿ ಸ್ಕ್ಯಾಮ್, ಕಲ್ಲಿದ್ದಲು ಹಗರಣ ಎಷ್ಟು ಭ್ರಷ್ಟಾಚಾರ ಹೀಗೆ ಎಷ್ಟು ಭ್ರಷ್ಟಾಚಾರಗಳು ನಡೆದಿವೆ. ಈ ರಾಷ್ಟದ ಸಂಪತ್ತನ್ನ ಸೂರೆ ಮಾಡಿ ಚೆಂಬು ಬರಿದಾಗಿತ್ತು. ಈ ಕಾಂಗ್ರೆಸ್‌ನವರು ಬರೀ ಚೆಂಬನ್ನ ಯಾರ್ ಕೈಗೆ ಕೊಟ್ರು. ಕಾಂಗ್ರೆಸ್ ಕೊಟ್ಟ ಖಾಲಿ ಚೊಂಬನ್ನು ಮೋದಿ ಅಕ್ಷಯ ಪಾತ್ರೆ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

## ಪಾತ್ರೆಯನ್ನಾಗಿ ಮಾಡ್ತೀವಿ

ಈ ರಾಷ್ಟ್ರದ ಸಂಪತ್ತನ್ನ ಸೂರೆ ಮಾಡಿ ಚೆಂಬು ಬರಿದಾಗಿತ್ತು. ಆ ಬರೀ ಚೆಂಬನ್ನ ಯಾರ್ ಕೈಗೆ ಕೊಟ್ರು. ಈ ಕಾಂಗ್ರೆಸ್ ಅವರು ಎಂದು ವಾಗ್ದಾಳಿ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಈ ರಾಷ್ಟ್ರದ ಸಂಪತ್ತು ಲೂಟಿ ಮಾಡಿ ನರೇಂದ್ರ ಮೋದಿಯವರಿಗೆ 2014 ರಲ್ಲಿ ಚೆಂಬು ಕೊಟ್ರು. ಮೋದಿ ಅವರು ಬರೀ ಚೆಂಬನ್ನ 10 ವರ್ಷ ದೇಶವನ್ನ ಆಳಿ ಅಕ್ಷಯ ಪಾತ್ರೆಯನ್ನಾಗಿ ಮಾಡುತ್ತಾರೆ ಎಂದು ಹೇಳುತ್ತಾ ಹೆಚ್‌ಡಿಯವರು ಮೋದಿ ಕೈ ಎತ್ತಿ ತೋರಿಸಿದರು. ಎಲ್ಲಾ ವರ್ಗದ ಜನರನ್ನ ಕಾಪಾಡಿದ ಮಹಾನುಭಾವ ಮೋದಿ. ಅವರ ಬಗ್ಗೆ ಇವರು ಮಾತಾಡೋದಾ?. ಮುಖ್ಯಮಂತ್ರಿಗಳೇ, ಡಿಸಿಎಂ ಅವರೇ ಮೋದಿ ಬಗ್ಗೆ ಕ್ಷುಲ್ಲಕ ರಾಜಕಾರಣ ಮಾಡ್ತೀರಾ? ಇವತ್ತು ಜಾಹೀರಾತು ಬರೀ ಚೆಂಬು ಕೊಡ್ತಾರೆ. ನಾಚಿಕೆ ಆಗಬೇಕು ನಿಮಗೆ ಎಂದು ಕಾಂಗ್ರೆಸ್‌ನವರ ವಿರುದ್ಧ ಹೆಚ್‌ಡಿಡಿ ಗುಡುಗಿದರು.

## ಕೈ ಸೋಲನ್ನು ಒಪ್ಪಿಕೊಂಡಿದೆ

ಕಾಂಗ್ರೆಸ್ ತನ್ನನ್ನು ಬೆಂಬಲಿಸುವವನನ್ನೇ ಬಾಡಿಸುವ ಬಳ್ಳಿ ಕಾಂಗ್ರೆಸ್ ಅನ್ನು ಗುರಿಯಾಗಿಟ್ಟುಕೊಂಡ ಪ್ರಧಾನಿ ಮೋದಿ, 'ಕಾಂಗ್ರೆಸ್ ಅಂತಹ ಬಳ್ಳಿಯಾಗಿದ್ದು, ಅದು ಬೇರುಗಳಿಲ್ಲ, ಸ್ವಂತ ಭೂಮಿ ಇಲ್ಲ ಮತ್ತು ಬೆಂಬಲಿಸುವವರನ್ನು ಒಣಗಿಸುತ್ತದೆ. ಸ್ವಾತಂತ್ರ್ಯದ ಸಮಯದಲ್ಲಿ ಕಾಂಗ್ರೆಸ್ ದೇಶವನ್ನು ವಿಭಜಿಸಿತು, ಸ್ವಾತಂತ್ರ್ಯದ ನಂತರ ಕಾಶ್ಮೀರದ ಸಮಸ್ಯೆಯನ್ನು ಸೃಷ್ಟಿಸಿತು. 370ರ ನೆಪದಲ್ಲಿ ಕಾಶ್ಮೀರದಲ್ಲಿ ಬಾಬಾ ಸಾಹೇಬರ ಸಂವಿಧಾನವನ್ನು ಜಾರಿಗೆ ತರಲು ಕಾಂಗ್ರೆಸ್ ಅವಕಾಶ ನೀಡಲಿಲ್ಲ.

ಕಳೆದ ಅವಧಿಯಲ್ಲಿ ನಾವು ಚಂದ್ರಯಾನದ ಯಶಸ್ಸನ್ನು ನೋಡಿದ್ದೇವೆ, ಮುಂದಿನ ಅವಧಿಯಲ್ಲಿ ದೇಶದ ಜನರು ಗಗನಯಾನದ ಯಶಸ್ಸನ್ನು ಕಾಣುತ್ತಾರೆ. ಕೇವಲ 10 ವರ್ಷಗಳಲ್ಲಿ ದೇಶ ಅಭಿವೃದ್ಧಿಯಲ್ಲಿ ಬಹಳ ದೂರ ಕ್ರಮಿಸಿದೆ. ನಿಮ್ಮ ಕನಸುಗಳೇ ನನ್ನ ಸಂಕಲ್ಪ ಎಂದು ಪ್ರಧಾನಿ ಹೇಳಿದರು.

## ಇವಿಎಂ ಧ್ವಂಸ

ಆದರೆ, ಈ ದಾಳಿ ನಡೆಸಿದವರು ಯಾರು ಎಂಬುದನ್ನು ಪತ್ತೆ ಹಚ್ಚಲು ಪೊಲೀಸರಿಗೆ ಸಾಧ್ಯವಾಗಿಲ್ಲ. ಹಿಂಸಾಚಾರದ ಘಟನೆಗಳಿಂದಾಗಿ ಚುನಾವಣಾ ಆಯೋಗವು 11 ಬೂತ್‌ಗಳಲ್ಲಿ ಮತದಾನ ಅಸಿಂಧು ಎಂದು ಘೋಷಿಸಿತ್ತು.

ರಾಜ್ಯದ 47 ಮತಗಟ್ಟೆಗಳಲ್ಲಿ ಮರು ಮತದಾನ ಮಾಡುವಂತೆ ಕಾಂಗ್ರೆಸ್ ಒತ್ತಾಯಿಸಿದ್ದು, ಬೂತ್‌ಗಳನ್ನು ವಶಪಡಿಸಿಕೊಂಡು ಚುನಾವಣೆಯಲ್ಲಿ ಅಕ್ರಮವೆಸಗಿದ್ದಾರೆ ಎಂದು ಆರೋಪಿಸಿದರು.

ಮಣಿಪುರದಲ್ಲಿ ಬಿಜೆಪಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಇಲ್ಲಿ ಬಿಜೆಪಿ ರಾಜ್ಯದ ನ್ಯಾಷನಲ್ ಪೀಪಲ್ಸ್ ಪಾರ್ಟಿ ಮತ್ತು ನಾಗಾ ಪೀಪಲ್ಸ್ ಫ್ರಂಟ್ ಜೊತೆ ಮೈತ್ರಿ ಮಾಡಿಕೊಂಡಿದೆ. ಆದರೆ, ಬಿಜೆಪಿ ಇನ್ನರ್ ಮಣಿಪುರದಿಂದ ಮಾತ್ರ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಆದರೆ, ಮಣಿಪುರದ ಹೊರಭಾಗದಲ್ಲಿ ಬಿಜೆಪಿ ನಾಗಾ ಪೀಪಲ್ಸ್ ಫ್ರಂಟ್‌ಗೆ ಬೆಂಬಲ ನೀಡುತ್ತಿದೆ.

## ಎಫ್‌ಐಆರ್ ದಾಖಲು

**ಮಹಿಳೆಯರ ಬಗ್ಗೆ ಅವಹೇಳಕಾರಿ ಮಾತಾಡಿ ಪೇಚಿಗೆ ಸಿಲುಕಿದ್ದ ಹೆಚ್ ಡಿಕೆ:** ತುರುವೇಕೆರೆಯಲ್ಲಿ ಲೋಕಸಭೆ ಚುನಾವಣಾ ಪ್ರಚಾರ ಭಾಷಣ ಮಾಡುವ ಸಂದರ್ಭದಲ್ಲಿ, ''ಕಾಂಗ್ರೆಸ್ ಸರಕಾರ ಕೊಟ್ಟಿರುವ ಗ್ಯಾರಂಟಿ ಯೋಜನೆಗಳಿಂದ ಹಳ್ಳಿಯ ತಾಯಂದಿರು ಸ್ವಲ್ಪ ದಾರಿ ತಪ್ಪಿದ್ದು, ಹಳ್ಳಿಯ ಹೆಣ್ಣು ಮಕ್ಕಳ ಬದುಕು ಏನಾಗಬೇಕು ಎಂಬುದರ ಕುರಿತು ಯೋಚನೆ ಮಾಡಬೇಕಾಗಿದೆ,'' ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ ನೀಡಿದ್ದರು. ಇದು ಭಾರೀ ವಿವಾದಕ್ಕೀಡಾಗಿತ್ತು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಆದಿಯಾಗಿ ಕಾಂಗ್ರೆಸ್ ನಾಯಕರು ಕುಮಾರಸ್ವಾಮಿ ವಿರುದ್ಧ ಮುಗಿಬಿದ್ದಿದ್ದರು. ಅಲ್ಲದೇ ರಾಜ್ಯದೆಲ್ಲೆಡೆ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ಮಾಡಿ ಕುಮಾರಸ್ವಾಮಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು.

ಇನ್ನು ಈ ಪ್ರಕರಣ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆಯೇ ರಾಜ್ಯ ಮಹಿಳಾ ಆಯೋಗ ಗಂಭೀರವಾಗಿ ಇದನ್ನು ಪರಿಗಣಿಸಿ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡಿತ್ತು. ಅಲ್ಲದೇ ಈ ಬಗ್ಗೆ ಒಂದು ವಾರದೊಳಗೆ ಸ್ಪಷ್ಟನೆ ನೀಡುವಂತೆ ನೋಟಿಸ್ ನೀಡಿತ್ತು. ಈ ನೋಟಿಸ್ ವಿರುದ್ಧ ಕುಮಾರಸ್ವಾಮಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಹೈಕೋರ್ಟ್ ರಾಜ್ಯ ಮಹಿಳಾ ಆಯೋಗದ ನೋಟಿಸ್ ಗೆ ತಡೆ ನೀಡಿದೆ.

''ಹೆಣ್ಣು ಮಕ್ಕಳ ಬಗ್ಗೆ ಅಪಾರ ಕಾಳಜಿ ಹೊಂದಿರಬೇಕಾದವರು ಈ ರೀತಿ ಬಹಿರಂಗವಾಗಿ ಹೆಣ್ಣುಮಕ್ಕಳನ್ನು ಅವಮಾನಿಸಿರುವುದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧಿನಿಯಮ- 1995 ಪರಿಚ್ಛೇದ 10 (ಎ)ರ ಮೇರೆಗೆ ತಾವು ನೋಟಿಸ್ ತಲುಪಿದ ಏಳು ದಿನಗಳೊಳಗೆ ಆಯೋಗಕ್ಕೆ ಖುದ್ದು ಹಾಜರಾಗಿ ಹೇಳಿಕೆ ಸಂಬಂಧ ಸ್ಪಷ್ಟೀಕರಣ ನೀಡಬೇಕು'', ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಹೇಳಿದ್ದರು.

## ಅಮೆರಿಕದ ನಿಷೇಧ

ಪಾಕಿಸ್ತಾನಕ್ಕೆ ಚೀನಾ ಅನೇಕ ರೀತಿಯಲ್ಲಿ ಬೆಂಬಲ ನೀಡುತ್ತದೆ. ಪಾಕಿಸ್ತಾನದ ಮಿಲಿಟರಿ ಉನ್ನತೀಕರಣ ಯೋಜನೆಯಲ್ಲಿ ಚೀನಾ ಪಾತ್ರ ಮಹತ್ವದ್ದು. ಬಹಳಷ್ಟು ಶಸ್ತ್ರಾಸ್ತ್ರಗಳನ್ನು ಚೀನಾ ಸರಬರಾಜು ಮಾಡುತ್ತದೆ.

ಬೆಲಾರಸ್ ದೇಶದ ಮಿನ್ಸ್ಕ್ ವ್ಹೀಲ್ ಟ್ರಾಕ್ಟರ್ ಪ್ಲಾಂಟ್ ನಿಂದ ಪಾಕಿಸ್ತಾನಕ್ಕೆ ಸ್ಪೆಷಲ್ ವೆಹಿಕಲ್ ಚಾಸಿ ಪೂರೈಕೆ ಆಗುತ್ತಿತ್ತು. ಈ ಚಾಸಿಗಳು ದೂರ ಶ್ರೇಣಿಯ ಬ್ಯಾಲಿಸ್ಟಿಕ್ ಮಿಸೈಲ್ ಯೋಜನೆಯಲ್ಲಿ ಬಳಕೆ ಆಗುತ್ತದೆ. ಚೀನಾದ ಕ್ಸಿಯಾನ್ ಲಾಂಗ್ಡೆ ಟೆಕ್ನಾಲಜಿ ಡೆವಲಪ್ಮೆಂಟ್ ಕಂಪನಿ ಫಿಲಾಮೆಂಟ್ ವೈಂಡಿಂಗ್ ಮೆಷೀನ್ ಮೊದಲಾದ ಉಪಕರಣಗಳನ್ನು ಪಾಕಿಸ್ತಾನಕ್ಕೆ ಪೂರೈಸಿದೆ. ಈ ವೈಂಡಿಂಗ್ ಯಂತ್ರಗಳು ರಾಕೆಟ್ ಮೋಟಾರ್ ಕೇಸ್ ಗಳನ್ನು ತಯಾರಿಸಲು ಬಳಕೆ ಆಗುತ್ತದೆ.

ಟಿಯಾಂಜಿನ್ ಕ್ರಿಯೇಟಿವ್ ಸೋರ್ಸ್ ಇಂಟರ್ ನ್ಯಾಷನಲ್ ಟ್ರೇಡ್ ಕೋ ಲಿ ಸಂಸ್ಥೆಯು ಸ್ಟಿರ್ ವೆಲ್ಡಿಂಗ್ ಸಲಕರಣೆ ಸೇರಿದಂತೆ ಕ್ಷಿಪಣಿ ಸಂಬಂಧಿತ ಉಪಕರಣಗಳನ್ನು ಪಾಕಿಸ್ತಾನಕ್ಕೆ ಪೂರೈಸುತ್ತಿದೆ ಎನ್ನುವುದು ಅಮೆರಿಕದ ಆರೋಪ. ಈ ಸ್ಟಿರ್ ವೆಲ್ಡಿಂಗ್ ಉಪಕರಣವು ಸ್ಪೇಸ್ ಲಾಂಚ್ ವಾಹನಗಳಲ್ಲಿ ಬಳಸಲಾಗುವ ಪ್ರೊಪೆಲೆಂಟ್ ಟ್ಯಾಂಕ್ ಗಳನ್ನು ತಯಾರಿಸಲು ಬಳಕೆ ಆಗುತ್ತದೆ.

## ಟಿಎಂಸಿ ಮನವೊಲಿಕೆ

ಎಲ್ಲಾ ಬಿಪಿಎಲ್ ಕುಟುಂಬಗಳಿಗೆ ಅವರ ಮನೆ ಬಾಗಿಲಿಗೆ ಉಚಿತವಾಗಿ ಪಡಿತರ ವಿತರಣೆ ಬಡ ಕುಟುಂಬಗಳಿಗೆ ವರ್ಷದಲ್ಲಿ 6 ಉಚಿತ ಸಿಲಿಂಡರ್ ನೀಡಲಾಗುವುದು. ಎಲ್ಲರಿಗೂ 200 ಯೂನಿಟ್ ವಿದ್ಯುತ್ ಉಚಿತ. ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣಕ್ಕಾಗಿ ಒಟ್ಟು 50 ಸಾವಿರ ರೂ. ರಾಜ್ಯವಾರು ಒಪಿಎಸ್ ಯೋಜನೆ ಜಾರಿಗೊಳಿಸಲಾಗುವುದು.

ಜಾತಿ ಗಣತಿಯನ್ನು ಟಿಎಂಸಿ ಒಪ್ಪುವುದಿಲ್ಲ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಸೇರಿಸಿರುವ ವಿದ್ಯಾರ್ಥಿ ಸಾಲ ಮನ್ನಾ ಪ್ರತಿಯೊಬ್ಬರಿಗೂ ತಲುಪುವಂತೆ ಮಾಡುವುದು, ಕ್ಷಮಾದಾನದ ಹೊರೆ ಬ್ಯಾಂಕ್ ಗಳ ಮೇಲೆ ಬೀಳದಂತೆ ಸರ್ಕಾರ ಬ್ಯಾಂಕ್ ಗಳಿಗೆ ಪರಿಹಾರ ನೀಡಲಿದೆ. ಇದು ಯುವಕರ ಪಾಲಿಗೆ ಚೇಂಜರ್ ಆಗಲಿದೆ ಎಂಬುದು ಎಲ್ಲಾ ಪಕ್ಷಗಳ ನಂಬಿಕೆ. ಇಂಡಿಯಾ ಒಕ್ಕೂಟದ 7 ಅಂಶಗಳ ಅಜೆಂಡಾದ ಎಲ್ಲ ಅಂಶಗಳ ಮೇಲೆ ಪರಸ್ಪರ ಒಪ್ಪಂದವಿದೆ, ಜಾತಿ ಗಣತಿಯನ್ನು ಹೊರತುಪಡಿಸಿ. ತೃಣಮೂಲ ಕಾಂಗ್ರೆಸ್ 7 ಅಂಶಗಳ ಭರವಸೆಗಳಲ್ಲಿ (ಸಾಮಾನ್ಯ ಪ್ರಣಾಳಿಕೆ) ಜಾತಿ ಗಣತಿಯನ್ನು ಸೇರಿಸಲು ಬಯಸುವುದಿಲ್ಲ.

ಲೋಕಸಭೆ ಚುನಾವಣೆಗೆ ಬಿಡುಗಡೆ ಮಾಡಿದ ತನ್ನ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಐದು ನ್ಯಾಯಗಳ ಬಗ್ಗೆ ಮಾತನಾಡಿದೆ. ಇವುಗಳಲ್ಲಿ ಸಮಾನ ನ್ಯಾಯ, ರೈತ ನ್ಯಾಯ, ಕಾರ್ಮಿಕ ನ್ಯಾಯ, ಮಹಿಳಾ ನ್ಯಾಯ ಮತ್ತು ಯುವ ನ್ಯಾಯ ಸೇರಿವೆ. ಇದಲ್ಲದೇ ಪ್ರಥಮ ಬಾರಿಗೆ ಮತದಾರರಿಗೆ ಕಾಂಗ್ರೆಸ್ ವಿಶೇಷ ಕಾಳಜಿ ವಹಿಸಿದೆ. 30 ಲಕ್ಷ ಸರ್ಕಾರಿ ಉದ್ಯೋಗಗಳು, ಪ್ರತಿ ವಿದ್ಯಾವಂತ ಯುವಕರಿಗೆ

ಮೊದಲನೇ ಪುಟದಿಂದ...

ರೂ 1 ಲಕ್ಷ ಶಿಷ್ಯವೇತನದ ಹಕ್ಕು, ಹೊಸ ಕೇಂದ್ರ ಸರ್ಕಾರಿ ಉದ್ಯೋಗಗಳಲ್ಲಿ 50% ಮಹಿಳಾ ಮೀಸಲಾತಿ, ಯುವಕರಿಗೆ 5000 ಕೋಟಿ ರೂ ಹೊಸ ಸ್ಟಾರ್ಟಪ್ ನಿಧಿ, ವಿದ್ಯಾರ್ಥಿಗಳಿಗೆ ಶಿಕ್ಷಣ ಸಾಲ ಮನ್ನಾ ಮುಂತಾದ ಭರವಸೆಗಳನ್ನು ಒಳಗೊಂಡಿದೆ.

ಇದೇ ವೇಳೆ ಸಮಾಜವಾದಿ ಪಕ್ಷ ಬಿಡುಗಡೆ ಮಾಡಿರುವ ಪ್ರಣಾಳಿಕೆಯಲ್ಲಿನ ಹಲವು ವಿಷಯಗಳು ಕಾಂಗ್ರೆಸ್‌ನ ಪ್ರಣಾಳಿಕೆಯಂತೆಯೇ ಇವೆ. ಕಾಂಗ್ರೆಸ್‌ನಂತೆ ಸಮಾಜವಾದಿ ಪಕ್ಷ ಕೂಡ ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸುವ ಭರವಸೆ ನೀಡಿದೆ. ಎರಡೂ ಪಕ್ಷಗಳ ಪ್ರಣಾಳಿಕೆಯಲ್ಲಿ ಜಾತಿ ಗಣತಿ ನಡೆಸುವ ಬಗ್ಗೆ ಮಾತನಾಡಲಾಗಿದೆ. ಎರಡೂ ಪಕ್ಷಗಳ ಗಮನ ಸರ್ಕಾರಿ ಉದ್ಯೋಗಗಳ ಮೇಲಿದೆ. ಕಾಂಗ್ರೆಸ್ ಮತ್ತು ಎಸ್‌ಪಿ ಕೂಡ ಮಹಿಳೆಯರಿಗೆ ಹಲವು ಭರವಸೆಗಳನ್ನು ನೀಡಿವೆ. ಸರ್ಕಾರಿ ಉದ್ಯೋಗಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ನೀಡುವ ಕುರಿತು ಎಸ್‌ಪಿ ಮಾತನಾಡಿದೆ.

## ಆಂತರಿಕ ಪ್ರಜಾಪ್ರಭುತ್ವ

ಬಳಿಕ ಅದು ರಾಜಕೀಯ ಪಕ್ಷವಾಗಿ ರೂಪಾಂತರವಾದ ಮೇಲೆ, ಅಟಲ್ ಬಿಹಾರಿ ವಾಜಪೇಯಿ ಅವರು ಆ ಪಕ್ಷವನ್ನು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮರ್ಥವಾಗಿ ಮುನ್ನಡೆಸಿದ್ದಾರೆ. ಆಗಿನ ಕಾಲ ಘಟ್ಟಕ್ಕೂ ಈಗಿನ ಬಿಜೆಪಿಗೂ ಸಾಕಷ್ಟು ಬದಲಾವಣೆಗಳಾಗಿವೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗಿವೆ ಎನ್ನುವುದನ್ನು ಯಾರೂ ಅಲ್ಲಗಳೆಯಲಾರರು. ಆದರೆ, ಸಾಕಷ್ಟು ಲೋಪದೋಷಗಳು ಆಗಿರುವುದನ್ನು ಗಮನಿಸಬೇಕು. ಕಳೆದ 10 ವರ್ಷಗಳಲ್ಲಿ ವ್ಯಕ್ತಿ ಕೇಂದ್ರಿತ ರಾಜಕೀಯವು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ಪ್ರಜಾಪ್ರಭುತ್ವ, ಸಂವಿಧಾನದ ಆಶಯಗಳನ್ನು ಗಾಳಿಗೆ ತೂರುತ್ತಿರುವ ಆತಂಕ ಎದುರಾಗಿದೆ ಎಂದು ಹೇಳಿದರು.

**ವ್ಯಕ್ತಿ ಕೇಂದ್ರಿತ ರಾಜಕಾರಣ ಮಾರಕ:** ವ್ಯಕ್ತಿ ಕೇಂದ್ರಿತ ಮತ್ತು ಪರಿವಾರ ಕೇಂದ್ರಿತ ರಾಜಕಾರಣ ಮತ್ತು ಭ್ರಷ್ಟಾಚಾರದಿಂದ ಕಾಂಗ್ರೆಸ್ ಜನ ಮಾನ್ನಣೆ ಕಳೆದುಕೊಂಡಿದೆ. ಅಲ್ಲದೆ, ಆತ್ಮವಲೋಕನ ಮಾಡಿಕೊಳ್ಳದಿರುವುದು ಕೂಡ ಕಾಂಗ್ರೆಸ್ ಅವನತಿಗೆ ಕಾರಣವಾಗಿದೆ ಎಂದರು.

ಐಟಿ, ಇಡಿ, ಸಿಬಿಐ ಗಳನ್ನು ಈ ಹಿಂದಿನ ಸರ್ಕಾರಗಳು ಕೂಡ ದುರುಪಯೋಗ ಮಾಡಿಕೊಂಡಿವೆ. ಅದರೆ ಈಗ ಆ ದುರುಪಯೋಗ ಪ್ರಮಾಣ ಇಂದು ಹೆಚ್ಚಳವಾಗಿದೆ. ಜನರೇ ಆಯ್ಕೆ ಮಾಡಿದ ಸರ್ಕಾರದ ಮುಖ್ಯಮಂತ್ರಿಗಳನ್ನು ಜೈಲಿಗೆ ಹಾಕುವ ಹಂತಕ್ಕೆ ಇದು ಬಂದು ನಿಂತಿರುವುದು ಆತಂಕ ತಂದಿದೆ ಎಂದರು. ಈ ಹಿಂದೆ ಕಾಂಗ್ರೆಸ್ ಮಾಡಿದ ಕೆಲಸವನ್ನೇ ಇಂದು ಬಿಜೆಪಿ ಮಾಡುತ್ತಿದೆ. ಎಲ್ಲವೂ ಹೀಗೆ ಮುಂದುವರಿಸಿದರೆ ಇಂದಿನ ಕಾಂಗ್ರೆಸ್ ಪರಿಸ್ಥಿತಿಯೇ ಬಿಜೆಪಿಗೂ ಬರುವ ದಿನಗಳು ದೂರವಿಲ್ಲ ಎಂದರು.

**ಹಿಂದೂ ಧರ್ಮ ದೂಷಿಸಿ ಪ್ರಯೋಜನವಿಲ್ಲ:** ಹಿಂದು ಧರ್ಮವನ್ನು ಧೂಷಿಸಿಕೊಂಡು ತಿರುಗಿದರೆ ಯಾವ ಸುಧಾರಣೆಯನ್ನು ತರಲು ಆಗುವುದಿಲ್ಲ. ಹಿಂಧೂ ಧರ್ಮದಲ್ಲಿ ಒಂದಷ್ಟು ಸುಧಾರಣೆ ಆಗಬೇಕು ಎನ್ನುವುದರ ಬಗ್ಗೆ ಚರ್ಚೆಯಾಗಬೇಕು. ನಿಜವಾದ ಹಿಂದು ಧರ್ಮ ಏನೆಂದು ತಿಳಿಸುವ ಕೆಲಸವಾಗಲಿ. ಇಂದಿನ ಪ್ರಮುಖ ರಾಜಕೀಯ ಪಕ್ಷವೊಂದು ಹಿಂದು ಧರ್ಮದ ರಾಜಕೀಯ ಲಾಭ ಪಡೆದುಕೊಳ್ಳುತ್ತಿದೆ. ಆದ್ದರಿಂದ ಸ್ವಾಮೀಜಿಗಳು, ಧರ್ಮಗುರುಗಳು ನಿಜವಾದ ಹಿಂದು ಧರ್ಮವೇನೆಂದು ತಿಳಿಸುವ ಕೆಲಸವನ್ನು ಮಾಡಬೇಕು ಎಂದು ಕರೆ ನೀಡಿದರು.

**ಒಕ್ಕೂಟ ವ್ಯವಸ್ಥೆ ಶಿಥಿಲ:** ಪ್ರಧಾನಿಯಾಗಿದ್ದ ಸಂಧರ್ಭದಲ್ಲಿ ಅವರೊಟ್ಟಿಗೆ ಕೆಲಸ ಮಾಡಿದ ಅನುಭವ ನನಗಿದೆ. ಆದಷ್ಟು ಪ್ರಜಾಪ್ರಭುತ್ವಾತ್ಮಕವಾಗಿ ನಡೆದುಕೊಳ್ಳುತ್ತಿದ್ದರು. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ನಡೆಸಲು ಆಗಿನ ಸಿಎಂ ಎಸ್.ಎಂ.ಕೃಷ್ಣ ಒಪ್ಪಿಕೊಂಡು ಬಂದಿದ್ದರು. ಬಳಿಕ ಹೈಕಮಾಂಡ್ ವಿರೋಧಿಸಿದ್ದರಿಂದ ಕೃಷ್ಣ ಅವರು ಕೈಚೆಲ್ಲಿದರು. ಈ ಅಸಹಾಯಕತೆಯನ್ನು ಕೃಷ್ಣ ಅವರು ವಾಜಪೇಯಿಗೆ ಮನದಟ್ಟು ಮಾಡಿಕೊಟ್ಟಿದ್ದರು. ವಾಜಪೇಯಿ ಅವರು ಕೊನೇ ಪಕ್ಷ ಎಲ್ಲರನ್ನು ಒಳಗೊಳ್ಳುವಿಕೆಯ ಪ್ರಯತ್ನ ಮಾಡಿದ್ದರು. ಆದರೆ, ಇಂದಿನ ಪ್ರಧಾನಿ ಮೋದಿ ಅವರು ರಾಜ್ಯಗಳ ಮುಖ್ಯಮಂತ್ರಿಗಳಿಗೇ ಸಿಗುತ್ತಿಲ್ಲ. ಇದರಿಂದಾಗಿ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರದ ಜೊತೆಗಿನ ರಾಜ್ಯಗಳ ಸಂಬಂದ ಶಿಥಿಲವಾಗುತ್ತಿದೆ ಎಂದರು.

**ವಸ್ತು ನಿಷ್ಠತೆ ಕಡಿಮೆಯಾಗುತ್ತಿದೆ:** ಹಿರಿಯ ಪತ್ರಕರ್ತ ಅನಂತ ಚಿನಿವಾರ ಮಾತನಾಡಿ, ಮಾಧ್ಯಮ ಮತ್ತು ಪತ್ರಕರ್ತರನ್ನು ಪ್ರತ್ಯೇಕವಾಗಿ ನೋಡಬೇಕಿದೆ. ಹೆಚ್ಚಿನ ಪತ್ರಕರ್ತರು ನಿಜವಾಗಿ ಮಾಡಬೇಕು ಎಂದುಕೊಂಡಿರುವ ಸುದ್ದಿ ಮತ್ತು ಮಾಡಬೇಕಾದ ಸುದ್ದಿಯ ನಡುವೆ ಇಬ್ಬಂದಿತನ ಅನುಭವಿಸುತ್ತಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ ಮಾಧ್ಯಮಗಳು ಸಾಗುತ್ತಿರುವ ದಿಕ್ಕು ಕೂಡ ಆತಂಕ ತಂದಿದೆ ಎಂದರು.

ಮಾಧ್ಯಮಗಳು ತಮ್ಮ ಇಷ್ಟದ, ಅನುಕೂಲ ಮತ್ತು ಯಾವುದೋ ಒತ್ತಡಕ್ಕೆ ಸಿಲುಕಿ ಬೇಕಾದ ಧ್ರುವವನ್ನು ಆಯ್ಕೆ ಮಾಡಿಕೊಂಡು ಅತ್ತ ಸಾಗಿದೆ. ಇದರಿಂದ ವಸ್ತುನಿಷ್ಠ ಮಾಧ್ಯಮ ಕಡಿಮೆಯಾಗುತ್ತಿದೆ ಎಂದು ಅನಿಸಿಕೆ ವ್ಯಕ್ತಪಡಿಸಿದರು.

**ಎಲ್ಲ ಆಯಾಮಗಳಲ್ಲಿ ಚರ್ಚೆಯಾಗಲಿ:** ಅಧ್ಯಕ್ಷತೆ ವಹಿಸಿದ್ದ ಕರ್ನಾಟ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಚುನಾವಣೆಯ ಹೊತ್ತಿನಲ್ಲಿ ಮಾಧ್ಯಮದ ಜವಬ್ದಾರಿ ಮತ್ತು ಪತ್ರಕರ್ತರ ಹೊಣೆಗಾರಿಕೆ ಮಹತ್ವದ್ದಾಗಿದ್ದು, ಈ ಹಿನ್ನೆಲೆಯಲ್ಲಿಯೇ ಎಲ್ಲಾ ಆಯಾಮಗಳಲ್ಲಿ ವಿಚಾರಗಳು ಮಂಥನವಾಗಲಿ ಎಂದು ಈ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಬೆಂ.ನಗರ ವಿವಿ ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಮಾತನಾಡಿ, ಚುನಾವಣೆಗಳು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುತ್ತವೆ. ಈ ವಿಷಯದಲ್ಲಿ ಇನ್ನಷ್ಟು ಸುಧಾರಣೆಗಳನ್ನು ಜನರು ಮತ್ತು ಸಮಾಜ ನಿರೀಕ್ಷಿಸಿದೆ ಎಂದು ಹೇಳಿದರು.

ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಪ್ರೊ. ಎನ್.ನರಸಿಂಹಮೂರ್ತಿ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ್ ವೇದಿಕೆಯಲ್ಲಿದ್ದರು. ಇದೇ ಸಂದರ್ಭದಲ್ಲಿ ಸುಧೀಂದ್ರ ಕುಲಕರ್ಣಿ ಮತ್ತು ಪ್ರೊ.ಲಿಂಗರಾಜ ಗಾಂಧಿ ಅವರನ್ನು ಸಂಘದಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಬಿ.ವಿ.ಮಲ್ಲಿಕಾರ್ಜುನಯ್ಯ, ಡಿ.ಉಮಾಪತಿ, ಎಸ್.ಆರ್. ಆರಾಧ್ಯ, ವೆಂಕಟೇಶ್, ಮಾಲತಿ ಭಟ್, ಶಮಂತ, ಬಸವರಾಜು, ಎನ್.ರವಿಕುಮಾರ್, ಧ್ಯಾನ್ ಪೂಣಚ್ಚ, ಶ್ರೀಜಾ, ರೈತ ಸಂಘದ ಕೋಡಿಹಳ್ಳಿ ಚಂದ್ರಶೇಖರ್ ಮತ್ತಿತರರು ಹಾಜರಿದ್ದರು.

## ಘೋಷಣೆ

ಬಳ್ಳಾರಿ,ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮೈಸೂರು, ರಾಮನಗರ, ಶಿವಮೊಗ್ಗ,ತುಮಕೂರು, ವಿಜಯನಗರ ಜಿಲ್ಲೆಗಳಿಗೆ ಆರೆಂಜ್ ಹಾಗೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕುಮಟಾದಲ್ಲಿ ಅತಿ ಹೆಚ್ಚು ಮಳೆಯಾಗಿದೆ. ಗೋಕರ್ಣ, ಕೊಪ್ಪ, ಕಮ್ಮರಡಿಯಲ್ಲೂ ಅಧಿಕ ಮಳೆಯಾಗಿದೆ. ಮಂಕಿ,ಬೆಂಗಳೂರು,ಕುಂದಾಪುರ, ಜಯಪುರ, ಬಾಳೆಹೊನ್ನೂರು, ಚಿಕ್ಕಮಗಳೂರು, ಕೋಟ, ಧರ್ಮಸ್ಥಳ, ಕೊಟ್ಟಿಗೆಹಾರ, ಸಿದ್ದಾಪುರ, ಬೀದರ್, ಕಳಸ, ಕುಶಾಲನಗರ, ಕಡೂರು, ಎನ್ ಆರ್ ಪುರ, ಸಕಲೇಶಪುರ, ಹೊನ್ನಾಳಿ, ತ್ಯಾಗರ್ತಿ, ಹೊನಕೆರೆ, ಕುಣಿಗಲ್, ಮುಂಡಗೋಡು, ಶಿವಮೊಗ್ಗ, ಸುಳ್ಯ, ಯಲ್ಲಾಪುರ, ಬೈಲಹೊಂಗಲ, ಸವಣೂರು, ಚನ್ನಪಟ್ಟಣ, ರಾಣೆಬೆನ್ನೂರು, ಮಾಗಡಿ, ಹೊಸದುರ್ಗದಲ್ಲಿ ಮಳೆಯಾಗಿದೆ.

ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಸಂಜೆ ವೇಳೆಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಚಿಕ್ಕನಹಳ್ಳಿಯಲ್ಲಿ 40.7 ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಎಚ್ ಎಎಲ್ ನಲ್ಲಿ 36.9ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 36.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್ ನಲ್ಲಿ 37.1 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 35.2ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಹೊನ್ನಾವರದಲ್ಲಿ 34.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ. ಕಾರವಾರದಲ್ಲಿ 37.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 28.8 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ವಿಜಯಪುರದಲ್ಲಿ 37.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಗದಗದಲ್ಲಿ 36.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹಾವೇರಿಯಲ್ಲಿ 35.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ನಿಯೋಜಿತ

ಆದಷ್ಟು ಬೇಗ ಆರೋಪಿಗಳನ್ನು ಬಂಧಿಸುತ್ತೇವೆ ಎಂದರು.

**ಏನಿದು ಘಟನೆ:** ಗದಗ ನಗರದ ದಾಸರ ಓಣಿಯಲ್ಲಿ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಕುಟುಂಬ ವಾಸವಾಗಿದೆ. ಸುನಂದಾ ಬಾಕಳೆ ಪುತ್ರ ಕಾರ್ತಿಕ ಬಾಕಳೆಯ (28) ನಿಶ್ಚಿತಾರ್ಥ ಕಾರ್ಯ ಹಿನ್ನೆಲೆಯಲ್ಲಿ ಸಂಬಂಧಿಕರಾದ ಪರಶುರಾಮ ಕುಟುಂಬ ಕೊಪ್ಪಳದಿಂದ ಬಂದಿದ್ದ ಸುನಂದಾ ಬಾಕಳೆ ಮನೆಗೆ ಬಂದಿದ್ದರು. ಪರಶುರಾಮ, ಸುನಂದಾ ಬಾಕಳೆ ಪತಿ ಪ್ರಕಾಶ್ ಬಾಕಳೆ ಅವರ ಮೊದಲನೇ ಹೆಂಡತಿ ಸಹೋದರ. ಪರಶುರಾಮ ಹಾದಿಮನಿ (55) ಪತ್ನಿ ಲಕ್ಷ್ಮೀ (45) ಮತ್ತು ಪುತ್ರಿ ಆಕಾಂಕ್ಷಾ (16) ಸುನಂದಾ ಬಾಕಳೆ ಮನೆಯಲ್ಲಿ ತಂಗಿದ್ದರು.

ಏಪ್ರಿಲ್ 19ರ ರಾತ್ರಿ ಪರಶುರಾಮ ಹಾದಿಮನಿ ಪುತ್ರಿ, ಆಕಾಂಕ್ಷಾ ಹುಟ್ಟಿದ ಹಬ್ಬವನ್ನು ಸುನಂದಾ ಬಾಕಳೆ ಮನೆಯಲ್ಲಿ ಆಚರಿಸಲಾಗಿತ್ತು. ರಾತ್ರಿ ಎಲ್ಲರೂ ಮಲಗಿದ್ದಾರೆ. ಪರಶುರಾಮ ಕುಟುಂಬ ಮೊದಲನೇ ಮಹಡಿಯ ಕೋಣೆಯಲ್ಲಿ ಮಲಗಿದ್ದರು.

ಪರಶುರಾಮ ಕುಟುಂಬ ಮಲಗಿದ್ದ ಕೋಣೆಯ ಗಾಜಿನ ಕಿಟಕಿಯನ್ನು ಒಡೆದು ಒಳ ನುಗ್ಗಿದ ದುಷ್ಕರ್ಮಿಗಳು ಮೂವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದರು. ಕಿಟಕಿ ಒಡೆದ ಮತ್ತು ಕಿರಿಚಾಟದ ಸದ್ದು ಕೇಳಿ ಏನಾಯಿತೆಂದು ಕೆಳಗಿನ ಕೋಣೆಯಲ್ಲಿ ಮಲಗಿದ್ದ ಕಾರ್ತಿಕ್ ಬಾಕಳೆ ನೋಡಲು ಮೇಲೆ ಹೋಗಿದ್ದಾರೆ. ಆಗ ದುಷ್ಕರ್ಮಿಗಳು ಕಾರ್ತಿಕ್ ನನ್ನೂ ಕೊಲೆ ಮಾಡಿದ್ದರು. ಬಳಿಕ ದುಷ್ಕರ್ಮಿಗಳು ಮನೆಯ ಮಾಲಿಕ ಪ್ರಕಾಶ್ ಬಾಕಳೆ ಮತ್ತು ಪತ್ನಿ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಅವರು ಮಲಗಿದ್ದ ಕೋಣೆಯ ಬಾಗಲಿ ತಟ್ಟಿದ್ದರು.

ಆದರೆ ದಂಪತಿ ಬಾಗಿಲು ತೆಗೆಯದೆ ಪೊಲೀಸರಿಗೆ ಫೋನ್ ಮಾಡಿದ್ದರು. ಪೊಲೀಸರಿಗೆ ಫೋನ್ ಮಾಡುತ್ತಿದ್ದಂತೆ ದುಷ್ಕರ್ಮಿಗಳು ಹಿಂಬಾಗಿಲಿನಿಂದ ಪರಾರಿಯಾಗಿದ್ದರು. ಕೃತ್ಯಕ್ಕೆ ಬಳಸಿದ ಮಾರಕಾಸ್ತ್ರಗಳನ್ನು ದುಷ್ಕರ್ಮಿಗಳು ಚರಂಡಿಯಲ್ಲಿ ಬಿಸಾಡಿದ್ದರು.

## 3 ಆರೋಪಿಗಳ ಬಂಧನ

ಆಕಾಶ್ ಕೊಲೆಗೆ ಸಂಬಂಧಿಸಿದಂತೆ ಅಶೋಕ್ ನಗರ ಠಾಣೆ ಪೊಲೀಸರು ಮೂವರನ್ನು ಬಂಧಿಸಿ ತೀವ್ರ ವಿಚಾರಣೆ ಒಳಪಡಿಸಿದ್ದಾರೆ. ಆಕಾಶ್ ಕೊಲೆಗೆ ಬೇರೆ ಏನಾದರೂ ಕಾರಣ ಇದೆಯಾ ಅನ್ನೋದರ ಬಗ್ಗೆ ಪೊಲೀಸರು ಇಂಚಿಂಚು ಮಾಹಿತಿ ಕಲೆ ಹಾಕುತ್ತಿದ್ದಾರೆ. ಅದೇನೇ ಇರಲಿ ಡಾ.ಅಂಬೇಡ್ಕರ್ ಮೆರವಣಿಗೆಯಲ್ಲಿ ಯುವಕನ ನೆತ್ತರು ಹರಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಮೂವರನ್ನ ಪೊಲೀಸರು ಬಂಧಿಸಿದ್ದಾರೆ. ಆದರೆ ಕ್ಷುಲ್ಲಕ ಕಾರಣಕ್ಕೆ ಶುರುವಾದ ಜಗಳ ಓರ್ವ ಯುವಕನ ಕೊಲೆಯಲ್ಲಿ ಅಂತ್ಯವಾಗಿದ್ದು ಮಾತ್ರ ದುರಂತವೇ ಸರಿ.

# ಗೋಪಿನಾಥಂನಲ್ಲಿ ಗಮನ ಸೆಳೆದ ಮತದಾನ ಜಾಗೃತಿ

**ಚಾಮರಾಜನಗರ:** ಇದೇ ಏಪ್ರಿಲ್ 26ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಅಂಗವಾಗಿ ಜಿಲ್ಲೆಯ ಗಡಿ ಭಾಗದಲ್ಲಿರುವ ಗೋಪಿನಾಥಂ ಗ್ರಾಮದ ಶಕ್ತಿ ಮಾರಿಯಮ್ಮ ದೇವಸ್ಥಾನದ ಆವರಣದಲ್ಲಿ ತಾಲೂಕು ಪಂಚಾಯತ್ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ವಿಶಿಷ್ಟವಾಗಿ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ದೀಪನಡಿಗೆ ನಾಗರಿಕರ ಕಣ್ಮನ ಸೆಳೆಯಿತು.

ಗ್ರಾಮದ ಶಕ್ತಿ ಮಾರಿಯಮ್ಮ ದೇವಾಲಯದ ಪ್ರವೇಶದ್ವಾರದಲ್ಲಿ ಭಾರತ ನಕ್ಷೆಯ ಸುತ್ತಲು ದೀಪಗಳನ್ನು ಹಚ್ಚುವ ಮೂಲಕ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮೀ ಅವರು ದೀಪನಡಿಗೆ ಕಾರ್ಯಕ್ರಮಕ್ಕೆ ನಗಾರಿ ಬಾರಿಸುವ ಮೂಲಕ ಚಾಲನೆ ನೀಡಿದರು.

ದೀಪನಡಿಗೆ ಮೆರವಣಿಗೆಯಲ್ಲಿ ಸ್ವೀಪ್ ತಂಡದ ಅಧಿಕಾರಿಗಳು, ಪೂರ್ಣಕುಂಭ ಹೊತ್ತ ಹೆಂಗೆಳೆಯರು ಸೇರಿದಂತೆ ಗ್ರಾಮದ ಸಾರ್ವಜನಿಕರು ಚುನಾವಣಾ ಘೋಷವಾಕ್ಯಗಳಾದ ಚುನಾವಣಾ ಪರ್ವ-ದೇಶದ ಗರ್ವ, ಮತದಾನ ನಮ್ಮ ಹಕ್ಕು, ಎಲ್ಲರೂ ನೈತಿಕ ಮತದಾನ ಬೆಂಬಲಿಸಿ, ಕಡ್ಡಾಯವಾಗಿ ಮತದಾನ ಮಾಡಿ, ಇನ್ನಿತರೆ ಮೈನವಿರೇಳಿಸುವ




ಜಾಗೃತಿ ಘೋಷವಾಕ್ಯಗಳನ್ನು ಮೊಳಗಿಸಿ ನಾಗರಿಕರಿಗೆ ಮತದಾನದ ಅರಿವು ಮೂಡಿಸಿದರು.

ಇದೇ ತಿಂಗಳ 26ರಂದು ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಮತದಾನ ನಡೆಯಲಿದೆ. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಯಾರು ಸಹ ಮತದಾನದಿಂದ ವಂಚಿತರಾಗಬೇಡಿ. ಗ್ರಾಮದ ಪ್ರತಿಯೊಬ್ಬ ನಾಗರಿಕರು ಮತಗಟ್ಟೆಗೆ ತೆರಳಿ ನೈತಿಕ ಮತದಾನ ಮಾಡಬೇಕು ಎಂದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಬಳಿಕ ನೆರೆದಿದ್ದ ಗ್ರಾಮಸ್ಥರಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಹನೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಅವರು ಮಾತನಾಡಿ ಮತದಾನ ಮಾಡುವುದು ನಮ್ಮ ಹಕ್ಕು, ಯಾರು ಸಹ ಮತದಾನದಿಂದ ದೂರ ಉಳಿಯಬಾರದು. ಪ್ರತಿಯೊಬ್ಬರು ತಪ್ಪದೇ ಮತಚಲಾಯಿಸಿ ಪ್ರಜಾಪ್ರಭುತ್ವದ ಹಬ್ಬವನ್ನು ಎಲ್ಲರೂ ಆಚರಿಸಿ ಎಂದರು.ಸಹಾಯಕ ನಿರ್ದೇಶಕರು, ತಾಲೂಕಿನ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ನರೇಗಾ ತಾಂತ್ರಿಕ ಸಹಾಯಕ ಎಂಜಿನಿಯರ್, ಬಿ.ಎಫ್.ಟಿ ಮತ್ತು ಎನ್.ಆರ್.ಎಲ್.ಎಂ ಸದಸ್ಯರು ಈ ಸಂಧರ್ಭದಲ್ಲಿ ಹಾಜರಿದ್ದರು.

## ಶ್ರೀಕಂಠೇಶ್ವರನ ಭಕ್ತರಿಗೆ ಮತದಾನ ಅರಿವು

**ಮೈಸೂರು:** ನಂಜನಗೂಡಿನ ಶ್ರೀಕಂಠೇಶ್ವರ ದೇವಸ್ಥಾನದ ಮುಂಭಾಗ ಬೃಹತ್ ರಂಗೊಲಿ ಬಿಡಿಸಿ ಸುತ್ತಲೂ ಮಣ್ಣಿನ ಹಣತೆ, ಕ್ಯಾಂಡಲ್ ಬೆಳಗುವ ಮೂಲಕ ನಂಜನಗೂಡು ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿಯು ಅಪಾರ ಭಕ್ತರಿಗೆ ಮತದಾನ ಜಾಗೃತಿ ಮೂಡಿಸಲಾಯಿತು.ಎನ್ ಆರ್ ಎಲ್ ಎಂ ಸಂಘದ ಮಹಿಯರು ದೇಗುಲದ ಮುಂಭಾಗ ರಂಗೋಲಿಯಲ್ಲಿ ಬಿಡಿಸಿದ್ದ ಇ.ವಿ.ಎಂ ಯಂತ್ರ, ತೋರು ಬೆರಳಿಗೆ ಶಾಹಿ ಗುರುತು, ಮತದಾನ ಕುರಿತ ಘೋಷವಾಕ್ಯಗಳು ನೆರದಿದ್ದ ಭಕ್ತರ ಗಮನ ಸೆಳೆಯಿತು. ರಂಗೋಲಿ ಸುತ್ತಲೂ ಮಣ್ಣಿನ ಹಣತೆ, ಕ್ಯಾಂಡಲ್ ಬೆಳಗಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಜಗನಾಥ್ ಮೂರ್ತಿ, ಸದೃಢ ಸಮಾಜ ನಿರ್ಮಿಸಲು ಪ್ರತಿಯೊಬ್ಬರ ಮತವು ಅತ್ಯಗತ್ಯ. ಸಂವಿಧಾನಿಕ ಮತದಾನದ ಹಕ್ಕನ್ನು ಯಾರೊಬ್ಬ ಅರ್ಹರು ಬಿಟ್ಟುಕೊಡಬಾರದು. ಏಪ್ರಿಲ್ 26 ರಂದು ನಿಮ್ಮ ನಿಮ್ಮ ಮತಗಟ್ಟೆಗಳತ್ತ ಹೆಜ್ಜೆ ಹಾಕಿ ಎಂದರು. ಬಳಿಕ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಮಾತನಾಡಿ, ಚುನಾವಣೆಯು ಒಂದು ಹಬ್ಬವಿದ್ದಂತೆ, ಪ್ರತಿಯೊಬ್ಬರು ಹಕ್ಕು ಚಲಾಯಿಸಲು ಉತ್ಸುಕತೆ ತೋರಬೇಕು. ಮತಹಾಕುವ ಮೂಲಕ ಹಬ್ಬ ಆಚರಿಸಬೇಕು ಎಂದು ಕರೆ ನೀಡಿದರು. ಬಳಿಕ ವಿವಿಧೆಡೆಯಿಂದ ಆಗಮಿಸಿದ್ದ ಭಕ್ತರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು.



## ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಚುನಾವಣೆ ಪ್ರಕ್ರಿಯೆ ಯಶಸ್ವಿಗೊಳಿಸಿ

**ಮೈಸೂರು:** ಲೋಕಸಭಾ ಸಾರ್ವತ್ರಿಕ ಚುನಾವಣೆ ಏ.26 ರಂದು ನಡೆಯಲಿದ್ದು, ಮತದಾನದ ದಿನದಂದು ಕಡ್ಡಾಯವಾಗಿ ಮತಗಟ್ಟೆಗಳಿಗೆ ಬಂದು ಎಲ್ಲರೂ ಮತದಾನ ಮಾಡಿ ಎಂದು ಭಾರತ ಚುನಾವಣಾ ಆಯೋಗದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ್ ಅವರು ತಿಳಿಸಿದರು. ನಗರದ ಟೆನ್ನಿಸ್ ಕ್ಲಬ್ ನಲ್ಲಿ ಹಮ್ಮಿಕೊಂಡಿದ್ದ ಮತದಾರ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮತದಾರರು ಅಗತ್ಯ ಮಾಹಿತಿ ಪಡೆಯಲು, ಪ್ರತಿಕ್ರಿಯೆ, ಸಲಹೆ ಹಾಗೂ ದೂರು ಸಲ್ಲಿಸಲು ಅನುಕೂಲ ಆಗುವಂತೆ ಮತದಾರರ ಸಹಾಯವಾಣಿ 1950 ಗೆ ಕರೆ ಮಾಡಬಹುದಾಗಿದೆ ಎಂದು ಅವರು ತಿಳಿಸಿದರು.

ಮತದಾರರು ಮತದಾನದಿಂದ ದೂರ ಉಳಿಯಬಾರದು. ಪ್ರತಿಯೊಬ್ಬರು ತಪ್ಪದೇ ಕಡ್ಡಾಯವಾಗಿ ಮತದಾನ ಮಾಡಿ ಸದೃಡ ಭಾರತದ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಡಾ.ಎನ್. ಎನ್. ಮಧು, ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಶಾಂತಾ, ಮಹಾನಗರಪಾಲಿಕೆಯ ಕಾರ್ಯಪಾಲಕ ಅಭಿಯಂತರಾದ ನಾಗರಾಜ್, ವಲಯ ಆಯುಕ್ತರಾದ ರೇಖಾ ಶೆಟ್ಟಿ, ಪರಿಸರ ಅಭಿಯಂತರಾದ ಮೈತ್ರಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.



### ಮತದಾನ ಜಾಗೃತಿ ಸಂಭ್ರಮಾಚರಣೆ

# ಕಾವೇರಿ ದಡದಲ್ಲಿ ತೆಪ್ಪೋತ್ಸವ

**ಚಾಮರಾಜನಗರ:** ಲೋಕಸಭಾ ಚುನಾವಣೆ 2024-ರ ಸಂಬಂಧ ಜಿಲ್ಲೆಯ ಗಡಿ ಹಾಗೂ ಕೊನೆಯ ಗ್ರಾಮ ಪಂಚಾಯತಿ ಗೋಪಿನಾಥಂ ಗ್ರಾಮದ ಬಳಿಯಿರುವ ಹೊಗೇನೆಕಲ್ ನಲ್ಲಿ ಇಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತ್ರದ್ ಅವರಿಂದ ಕಾವೇರಿ ದಡದ ಮಧ್ಯಭಾಗದಲ್ಲಿ ತೆಪ್ಪೋತ್ಸವದ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಮತದಾನ ಜಾಗೃತಿ ಕಾರ್ಯಕ್ರಮಕ್ಕೂ ಮೊದಲು ಗೋಪಿನಾಥಂ ಗ್ರಾಮದ ಮಹಿಳೆಯರು ಗ್ರಾಮದಿಂದ ಹೊಗೇನೆಕಲ್ ಜಲಪಾತದ ದ್ವಾರದ ಮುಂಭಾಗದ ಕಾವೇರಿ ದಡದವರೆಗೆ ಪೂರ್ಣ ಕುಂಭ ಹಿಡಿದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತ್ರದ್ ಅವರನ್ನು ಸ್ವಾಗತಿಸಿದರು.

ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತ್ರದ್ ಅವರು ಎಲ್ಲರೂ ಏಪ್ರಿಲ್ 26ರಂದು ನಡೆಯಲಿರುವ ಚುನಾವಣೆಯಲ್ಲಿ ಮತದಾನ ಮಾಡಬೇಕು. ನಿಮ್ಮ ಹೆಸರು ಮತದಾನ ಪಟ್ಟಿಯಲ್ಲಿ ಇರುವ ಬಗ್ಗೆ ಹೆಲ್ಪ್ ಲೈನ್ ಆ್ಯಪ್ ಮುಖಾಂತರ ಖಚಿತಪಡಿಸಿಕೊಳ್ಳಿ. ಚುನಾವಣಾ ಸಂಬಂಧ ಯಾವುದೇ ಅಕ್ರಮ ಚಟುವಟಿಕೆಗಳು ಕಂಡು ಬಂದರೆ ಸಿ ವಿಜಿಲ್ ಆ್ಯಪ್ ನಲ್ಲಿ ದೂರು ಸಲ್ಲಿಸಬಹುದು. ಎಲ್ಲರೂ ನ್ಯಾಯ ಸಮ್ಮತ ಮತದಾನ ಮಾಡಿ ಹಾಗೂ ನೈತಿಕ ಮತದಾನ ಬೆಂಬಲಿಸಿ ಎಂದರು.

ನಂತರ ಮಾರಿಕೊಟ್ಟಾಯಿ ಮತಗಟ್ಟೆ ಸಂಖ್ಯೆ 141 ರಲ್ಲಿ ಮತದಾನದ ಧ್ವಜಾರೋಹಣ ನೆರವೇರಿಸಿ ಬಳಿಕ ಮತಗಟ್ಟೆ ವೀಕ್ಷಣೆ ಮಾಡಿ ಮೂಲ ಸೌಕರ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು. ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ



ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಹಣ, ಹೆಂಡ ಇತರೆ ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತ ಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಗೆ ಭವ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಇದೇ ವೇಳೆ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಹನೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಸಹಾಯಕ ನಿರ್ದೇಶಕರಾದ ರವೀಂದ್ರ, ತಾಲೂಕು ಪಂಚಾಯತಿ ಹಾಗೂ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ನರೇಗಾ ಸಹಾಯಕ ಎಂಜಿನಿಯರ್, ಇತರರು ಈ ಸಂಧರ್ಭದಲ್ಲಿ ಹಾಜರಿದ್ದರು.

## ವೈಯಕ್ತಿಕ ಕಾರಣಕ್ಕೆ ಕೊಲೆ ಅನ್ನೋದು ತಪ್ಪು: ಸಂಸದೆ ಸುಮಲತಾ ಅಂಬರೀಶ್

**ಮೈಸೂರು:** ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ಸಂಬಂಧ ವೈಯಕ್ತಿಕ ಕಾರಣಕ್ಕೆ ಕೊಲೆಯಾಗಿದೆ ಅನ್ನೋದು ತಪ್ಪು. ತಕ್ಷಣ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ಸಂಸದೆ ಸುಮಲತಾ ಅಂಬರೀಶ್ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ನೇಹಾ ಹತ್ಯೆ ಪ್ರಕರಣ ಸಂಬಂಧ ಮೈಸೂರಿನಲ್ಲಿ ಮಾತನಾಡಿದ ಸುಮಲತಾ ಅಂಬರೀಶ್, ನಾನು ಈ ವಿಚಾರವನ್ನ ಗಮನಿಸಿದ್ದೇನೆ. ಸಾಮಾಜಿಕ ಜಾಲತಾಣಗಳಲ್ಲಿ ಒಂದಷ್ಟು ಫೋಟೋಗಳು ಹರಿದಾಡುತ್ತಿವೆ. ಈಗಾಗಲೇ ಆಕೆಯ ಹತ್ಯೆಯಾಗಿದೆ, ಆ ಜೀವ ನೊಂದಿದೆ. ಇಂತಹ ವೇಳೆ ಆಕೆಯ ಕ್ಯಾರೆಕ್ಟರ್ ಬಗ್ಗೆ ಮಾತನಾಡೋದು ಬಹಳ ನೋವಿನ ವಿಚಾರ ಎಂದು ಬೇಸರ ವ್ಯಕ್ತಪಡಿಸಿದರು. ಯಾರೊ ಒಬ್ಬರು ಮಾಡಿದ ತಪ್ಪಿಗೆ ಸಮುದಾಯವನ್ನೇ ತಪ್ಪು ಅನ್ನೋದು ಸರಿಯಲ್ಲ. ಆದರೆ ಒಂದು ಸಮುದಾಯವನ್ನ ಸಮರ್ಥನೆ ಮಾಡಿಕೊಳ್ಳುವುದು ತಪ್ಪು. ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗಿದ್ದ ಎಫ್‌ಎಸ್‌ಎಲ್ ವರದಿ ಬರುವ ಮುನ್ನವೇ ಸಮರ್ಥನೆ ಮಾಡಿಕೊಂಡ್ರಿ. ಈಗ ಇದು ವೈಯಕ್ತಿಕ ಕಾರಣಕ್ಕೆ ಆಗಿರೋ ಕೊಲೆ ಅನ್ನೋದು ತಪ್ಪು. ತಕ್ಷಣ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ಸಂಸದೆ ಸುಮಲತಾ ಅಂಬರೀಶ್ ಹೇಳಿದರು. ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ಸಂಬಂಧ ವೈಯಕ್ತಿಕ ಕಾರಣಕ್ಕೆ ಕೊಲೆಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು.




# ಯದುವೀರ್ ಗೆಲ್ಲಿಸಿ ಲೋಕಸಭೆಗೆ ಕಳುಹಿಸಿ

**ಮೈಸೂರು:-** ಯದುವೀರ್ ಒಡೆಯರ್ ಅವರು ತುಂಬ ಸರಳ ವ್ಯಕ್ತಿ, ನಿಮ್ಮೆಲ್ಲರ ಸೇವೆ ಮಾಡಲು ಬಂದಿದ್ದಾರೆ. ಹೀಗಾಗಿ ಅವರನ್ನ ಗೆಲ್ಲಿಸಿ ಲೋಕಸಭೆಗೆ ಕಳುಹಿಸಿಕೊಡಿ ಎಂದು ಮಂಡ್ಯ ಸಂಸದೆ ಸುಮಲತಾ ಅಂಬರೀಶ್ ಮನವಿ ಮಾಡಿದರು.

ಮೈಸೂರು ಕೊಡುಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಪರ ಸುಮಲತಾ ಅಂಬರೀಶ್ ಮತಯಾಚನೆ ಮಾಡಿದರು. ಮೈಸೂರಿನ ಕೆ.ಆರ್ ಕ್ಷೇತ್ರದಲ್ಲಿ ನಡೆದ ನಾರಿಶಕ್ತಿ ಸಮಾವೇಶದಲ್ಲಿ ಮಾತನಾಡಿದ ಅವರು, ನಾನು ಮಂಡ್ಯದಲ್ಲಿ ಸ್ಪರ್ಧೆ ಮಾಡಿದ್ದಾಗ ನನ್ನ ನೆರವಿಗೆ ನಿಂತದ್ದೇ ನನ್ನ ಮಹಿಳೆಯರು. ಮೈಸೂರು ಅಂದರೆ ನಮಗೆ ಅವಿನಾಭಾವ ಸಂಬಂಧ ಇದೆ. ಅಂಬರೀಶ್ ಅವರು ಓದಿದ್ದು, ಬೆಳೆದಿದ್ದು ಇಲ್ಲಿಯೇ. ನಾವು ಇಲ್ಲಿ ಹಲವಾರು ಸಿನಿಮಾ ಚಿತ್ರೀಕರಣಕ್ಕೆ ಬರುತ್ತಿದ್ದೆವು. ಈ ಸುಂದರ, ಸಾಂಸ್ಕೃತಿಕ ನಗರ ಹೇಗೆ ಆಯ್ತು. ಇದು ಸ್ವಾತಂತ್ರ್ಯ ಪೂರ್ವದಲ್ಲೇ ಅಭಿವೃದ್ಧಿ ಹೊಂದಿದ ನಗರ ಇದಕ್ಕೆ ಯಾರು ಕಾರಣ, ಆಧುನಿಕ ನಗರ ನಿರ್ಮಾಣಕ್ಕೆ ಮೈಸೂರು ಮಹಾರಾಜರ ಕೊಡುಗೆ ಅಪಾರ ಎಂದರು. ಬಿಜೆಪಿ ಅಧಿಕಾರಕ್ಕೆ ಬಂದ ಮೇಲೆ ಮೈಸೂರಿನ ಅಭಿವೃದ್ಧಿಗೆ ಹಲವಾರು ಯೋಜನೆ ತಂದಿದ್ದಾರೆ. ಮುಂದಿನ 25 ವರ್ಷಗಳ ಅವಧಿಯಲ್ಲಿ ಭಾರತವನ್ನ ಪ್ರಪಂಚದ ನಂಬರ್ 1 ಮಟ್ಟಕ್ಕೆ ತೆಗೆದುಕೊಂಡು ಹೋಗುವ ಕನಸು ಹೊಂದಿರುವ ಮೋದಿಯವರ ಕೈ ಬಲಪಡಿಸಲು ನಾವೆಲ್ಲಾ ಶ್ರಮವಹಿಸಬೇಕಾಗಿದೆ. ಮೋದಿ ಅವರು ತಮ್ಮ ಸ್ವಾರ್ಥಕ್ಕಾಗಿ ಮಾಡುತ್ತಿಲ್ಲ. ನಮ್ಮ ದೇಶದ ಜನರಿಗಾಗಿ ಶ್ರಮಿಸುತ್ತಿದ್ದಾರೆ, ಮಹಿಳೆಯರಿಗೆ ಹಲವಾರು ಯೋಜನೆಗಳನ್ನ ಕೊಟ್ಟಿದ್ದಾರೆ, ಉಜ್ವಲ್ ಯೋಜನೆ ಸೇರಿದಂತೆ ಹಲವಾರು ಯೋಜನೆ ಕೊಟ್ಟು ಸ್ವಾಭಿಮಾನದ ಜೀವನ ನಡೆಸಲು ನೆರವಾಗಿದ್ದಾರೆ.



ನಿಮ್ಮ ಬದುಕನ್ನ ಕಟ್ಟಿಕೊಳ್ಳುವ ಅವಕಾಶ ಮಾಡಿಕೊಟ್ಟಿದ್ದಾರೆ. ಮೋದಿ ಅವರು ಕನಸ್ಸು ಕಂಡ್ರೆ ಅದನ್ನು ಕಾರ್ಯ ರೂಪಕ್ಕೆ ತರದೆ ಬಿಡಲ್ಲ, ಮೋದಿ ಅವರ ನೇತೃತ್ವದ ಸರ್ಕಾರ ಬಂದರೆ 140 ಕೋಟಿ ಭಾರತೀಯರಿಗೆ ಅನುಕೂಲ ಆಗುತ್ತದೆ ಎಂದು ಸುಮಲತಾ ಅಂಬರೀಶ್ ತಿಳಿಸಿದರು. ಯದುವೀರ್ ಒಡೆಯರ್ ಅವರು ತುಂಬ ಸರಳ ವ್ಯಕ್ತಿ. ಅವರನ್ನ ವಿರೋಧದ ಮಾಡುವವರಿಗೆ ತಕ್ಕ ಉತ್ತರ ಕೊಡಬೇಕು. ಯದುವೀರ್ ಒಬ್ಬ ಯುವಕ, ವಿದ್ಯಾವಂತರಾಗಿದ್ದಾರೆ. ಅವರಿಗೆ ರಾಜಕೀಯಕ್ಕೆ ಬರುವ ಅನಿವಾರ್ಯತೆ ಇಲ್ಲ. ನಿಮ್ಮೆಲ್ಲರ ಸೇವೆ ಮಾಡಲು ಬಂದಿದ್ದಾರೆ. ಅವರನ್ನ ಗೆಲ್ಲಿಸಿಕೊಂಡು ಬರುವ ಮೂಲಕ ಮೈಸೂರು ಮಹಾರಾಜರ ಋಣ ತೀರಿಸಿಕೊಳ್ಳುವ ಅವಕಾಶ ನಿಮಗೆ ಬಂದಿದೆ. ಮೈಸೂರು, ಮಂಡ್ಯ,ಚಾಮರಾಜನಗರ, ಬೆಂಗಳೂರು ಜನರಿಗೆ ಒಂದಲ್ಲ ಒಂದು ರೀತಿ ಮೈಸೂರು ಮಹಾರಾಜರ ಕೊಡುಗೆ ಅವರ ಋಣ ನಮ್ಮ ಮೇಲಿದೆ. ಕೆಆರ್ ಎಸ್ ಆಣೆಕಟ್ಟುಯಿಂದ ಸಹಸ್ರಾರು ಜನರಿಗೆ ಅನುಕೂಲ ಆಗಿದೆ. ಅವರನ್ನ ಗೆಲ್ಲಿಸಿ ಲೋಕಸಭೆಗೆ ಕಳಿಸಿಕೊಡಿ ಎಂದು ಸುಮಲತಾ ಅಂಬರೀಶ್ ಮನವಿ ಮಾಡಿದರು.

# ಯದುವೀರ್ ಪ್ರಚಾರಕ್ಕೆ ಜೆಟಿಡಿ ಸಾಥ್

**ಮೈಸೂರು:** ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ಜತೆಗೂಡಿ ಇಲವಾಲ ಹೋಬಳಿ ಹಾಗೂ ಸುತ್ತಮುತ್ತಲ ವಿವಿಧ ಗ್ರಾಮಗಳಲ್ಲಿ ಶನಿವಾರ ಮತ ಯಾಚಿಸಿದರು.

ಜಟ್ಟಿಹುಂಡಿ ಗ್ರಾಮದಲ್ಲಿ ಮಾತನಾಡಿದ ಯದುವೀರ್, ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ 10 ವರ್ಷಗಳಲ್ಲಿ ಮೈಸೂರು-ಕೊಡಗು ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಮೈಸೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ನಿರ್ಮಾಣದಿಂದ ಎಲ್ಲರಿಗೂ ಬಹಳ ಅನುಕೂಲವಾಗಿದೆ. ಜಲಜೀವನ ಮಿಷನ್ ಮೂಲಕ 2.5 ಲಕ್ಷ ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗಿದೆ. ಸಾಕಷ್ಟು ಮಂದಿಗೆ ಮನೆ ನಿರ್ಮಿಸಿಕೊಡಲಾಗಿದೆ ಎಂದರು. ನಮ್ಮ ಪೂರ್ವಜರಂತೆ ನಾನೂ ಜನರಿಗಾಗಿ ಕೆಲಸ ಮಾಡುತ್ತೇನೆ. ಜನರ ಸೇವೆ ಮಾಡುವುದು ನನ್ನ ಪಾಲಿನ ಸೌಭಾಗ್ಯವೆಂದು ಭಾವಿಸಿದ್ದೇನೆ ಎಂದು ತಿಳಿಸಿದರು. ನಾಗವಾಲ, ಮಾದಹಳ್ಳಿಯಲ್ಲಿ ಮತ ಯಾಚಿಸಿದ ಬಳಿಕ ಬೀರಿಹುಂಡಿಯಲ್ಲಿ ಮಾತನಾಡಿ, ಹಳ್ಳಿಯ ವಾತಾವರಣ, ಸಮಸ್ಯೆಗಳ ಅರಿವಿದೆ. ಮುಂದಿನ ದಿನಗಳಲ್ಲಿ ಗ್ರಾಮೀಣರ ನೋವು?ನಲಿವುಗಳಿಗೆ ಸ್ಪಂದಿಸಿ ಕೆಲಸ ಮಾಡುವೆ. ಬಿಜೆಪಿ ಅಭ್ಯರ್ಥಿ ಅರಮನೆಯಿಂದ ಹೊರಗೆ ಬರುವುದಿಲ್ಲ, ಜನರ ಕಷ್ಟ ಸುಖಗಳನ್ನು ಕೇಳುವುದಿಲ್ಲ ಎಂದು ಕಾಂಗ್ರೆಸ್‌ನವರು ಅಪಪ್ರಚಾರ ಮಾಡುತ್ತಿದ್ದಾರೆ. ನಾನು ಅರಮನೆ ಬಿಟ್ಟು ಹಳ್ಳಿಗಳಿಗೆ ಬಂದಿದ್ದೇನೆ ಎಂದರು.

ಮೈಸೂರು ಮಹಾರಾಜರು ಈ ಭಾಗದ ಸುವರ್ಣ ಯುಗಕ್ಕೆ ಶ್ರಮಿಸಿದ್ದರು. ಈಗ, ಪ್ರಧಾನಿಯವರು ಇಡೀ ದೇಶಕ್ಕೆ ಸುವರ್ಣ ಯುಗ ತರಲು ಕೆಲಸ ಮಾಡುತ್ತಿದ್ದಾರೆ. ಏನೆಲ್ಲಾ ಅಭಿವೃದ್ಧಿ ಕಾರ್ಯ ಮತ್ತು ಸಾಧನೆ ಮಾಡಿದರೂ ಇದು ಟ್ರೇಲರ್ ಮಾತ್ರವೇ ಎಂದು ಹೇಳಿದ್ದಾರೆ. ಟ್ರೇಲರ್ ಚೆನ್ನಾಗಿರುವುದರಿಂದ ಸಿನಿಮಾ ಕೂಡ ಚೆನ್ನಾಗಿರುತ್ತದೆ. ಅದನ್ನು ವೀಕ್ಷಿಸಲು ಬಿಜೆಪಿಯನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಮುಖಂಡರಾದ ಕವೀಶ್ ಗೌಡ, ಕೋಟೆಹುಂಡಿ ಮಹದೇವ್ ಪಾಲ್ಗೊಂಡಿದ್ದರು. ಬಳಿಕ, ವಿಜಯನಗರ 3ನೇ ಹಂತದಲ್ಲಿ ರೋಡ್ ಶೋ ನಡೆಸಿ ಮತಯಾಚಿಸಿದರು.



## ಹುಲಿ ದಾಳಿ: ಮರಿಯಾನೆ ಸಾವು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಊಟಿ ರಸ್ತೆಯಲ್ಲಿ ಹುಲಿಯೊಂದು ಮರಿಯಾನೆ ಮೇಲೆ ದಾಳಿ ಮಾಡಿದ್ದು, ಮರಿ ಮೃತಪಟ್ಟಿದೆ. ಮೂರು ದಿನಗಳ ಹಿಂದೆಯೇ ಹುಲಿ ದಾಳಿ ಮಾಡಿದ್ದು, ಅಸ್ವಸ್ಥಗೊಂಡಿದ್ದ ಮರಿಯಾನೆ ಶನಿವಾರ ಹೆದ್ದಾರಿ ಬದಿ ಬಿದ್ದು ಮೃತಪಟ್ಟಿದೆ. ಆನೆಗೆ ನಾಲ್ಕು ತಿಂಗಳು ಆಗಿರಬಹುದು ಎಂದು ಅಂದಾಜಿಸಲಾಗಿದೆ. ಬಂಡೀಪುರದಿಂದ ಕೆಕ್ಕನಹಳ್ಳ ಚೆಕ್ ಪೋಸ್ಟ್ ಕಡೆಗೆ ಮೂರು ಕಿ.ಮೀ ದೂರದಲ್ಲಿ ಮರಿಯಾನೆ ಮೃತಪಟ್ಟಿದೆ. ತಾಯಾನೆಯು ಮರಿಯ ಕಳೇಬರದ ಬಳಿ ನಿಂತು ರೋದಿಸುತ್ತಿದ್ದುದರಿಂದ ವಾಹನ ಸಂಚಾರದಲ್ಲಿ ವ್ಯತ್ಯಯ ಉಂಟಾಯಿತು. ಕಿ.ಮೀ ಗಟ್ಟಲೆ ವಾಹನಗಳು ಸಾಲು ನಿಂತಿದ್ದವು. ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಮರಿಯಾನೆ ಮೃತದೇಹವನ್ನು ತೆರವುಗೊಳಿಸಿ ವಾಹನಗಳ ಸಂಚಾರಕ್ಕೆ ಅವಕಾಶ ಕಲ್ಪಿಸಿದರು.



### ಅಂಕಣಕಾರ, ಪತ್ರಕರ್ತ ಬನ್ನೂರು ಕೆ. ರಾಜು

# ಎಲೆಮರೆ ಕಾಯಿಯಂತೆ ಕನ್ನಡ ಸೇವೆ

**ಮೈಸೂರು:** ಅಂಕಣಕಾರ, ಪತ್ರಕರ್ತ ಬನ್ನೂರು ಕೆ. ರಾಜು ಅವರು ಎಲೆ ಮರೆ ಕಾಯಿಯಂತೆ ಕನ್ನಡ ಸಾಹಿತ್ಯ ಸೇವೆ ಮಾಡಿದ್ದಾರೆ ಎಂದು ಶ್ರೀನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಡಾ.ಎಸ್. ಶಿವರಾಜಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಆಯೋಜಿಸಿದ್ದ ಅರವತ್ತು ತುಂಬಿದ ಸಾಹಿತಿ ಬನ್ನೂರು ಕೆ. ರಾಜು ಅವರಿಗೆ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಸಾಹಿತ್ಯದ ಅಭಿರುಚಿ ಇಲ್ಲದವರು, ಸಾಹಿತ್ಯ ಕೃಷಿ ಮಾಡಿದವರು ಸಾಹಿತ್ಯ ಸಂಸ್ಥೆಗಳ ಚುಕ್ಕಾಣಿ ಹಿಡಿದಿರುತ್ತಾರೆ. ಆದರೆ, ಬನ್ನೂರು ಕೆ. ರಾಜು ಅವರು ಎಲೆಮರೆ ಕಾಯಿಯಂತೆ ಕನ್ನಡ ಸಾರಸ್ವತ ಲೋಕಕ್ಕೆ ಸೇವೆ ಸಲ್ಲಿಸಿದ್ದಾರೆ ಎಂದು ನುಡಿದರು. ಬನ್ನೂರು ರಾಜು ಸಮಾಜ ಮತ್ತು ಜನರ ನಡುವೆ ಬದುಕಿ ಪ್ರೀತಿ ವಿಶ್ವಾಸ ಸಂಪಾದಿಸಿದ್ದಾರೆ. ಅವರ ನಡೆ ನುಡಿಯಲ್ಲಿ ಸರಸ್ವತಿ ನಾಟ್ಯವಾಡುತ್ತಿದ್ದಾಳೆ. ಹೃದಯವೇ ಇಲ್ಲದ ಈ ಯುಗದಲ್ಲಿ ಹೃದಯವಂತ ಕೃತಿಯ ಮೂಲಕ ಬನ್ನೂರು ರಾಜು ಅವರು ತಮನ್ನು ಸಾಹಿತ್ಯ ಕ್ಷೇತ್ರಕ್ಕೆ ಸಮರ್ಪಿಸಿಕೊಂಡರು ಎಂದು ಹೇಳಿದರು. ಎಚ್‌ಎಸ್ಸಿ ನಂತರ ಬನ್ನೂರು ಕೆ.ರಾಜು



ಅವರು ಹೆಚ್ಚು ಅಂಕಣಗಳನ್ನು ಬರೆದಿದ್ದಾರೆ. ಸಿನಿಮಾ, ಕಾವ್ಯ, ವಿಮರ್ಶೆ, ಕಥೆ, ರಂಗ ಕ್ಷೇತ್ರ, ದಾಸರು, ಶರಣರು ಎಲ್ಲರ ಬಗ್ಗೆಯೂ ಓದಿಕೊಂಡಿದ್ದು, ಬರೆಯುತ್ತಾರೆ. ಬರವಣಿಗೆಗೆ ಯಾವಾಗ ಸಮಯ ಸಿಗುತ್ತದೋ ತಿಳಿಯದು ಎಂದು ಪ್ರಶಂಸಿಸಿದರು.

ಸಾಹಿತಿ ಶಿವರಾಮ ಕಾರಂತರು ಲೇಖಕನಿಗೆ ಶಬ್ದಗಳು ತಾ ಮುಂದೆ ತಾಮುಂದೆ ಓಡಾಡುತ್ತಿರುತ್ತವೆ ಎಂದು ಹೇಳಿದ್ದಾರೆ. ಬನ್ನೂರು ರಾಜು ಅವರ ಓತಪ್ರೋತವಾಗಿ ಅಕ್ಷರಗಳನ್ನು ಜೋಡಿಸುತ್ತಾರೆ. ಆದರೆ, ಬರವಣಿಗೆ ಶೈಲಿ ಸರಳ ಸುಂದರ ಹೃದಯಸ್ಪರ್ಶಿ ಎಂದು ನುಡಿದರು.

ಸಾಹಿತಿಗಳು, ಹೋರಾಟಗಾರರು ವೈಯಕ್ತಿಕ ಬದುಕಿನಲ್ಲಿ ನಾನಾ ಕಷ್ಟಗಳು, ಸಂಕಟಗಳನ್ನು ಎದುರಿಸಿ ಕನ್ನಡಕ್ಕಾಗಿ ಸಾಕಷ್ಟು ದುಡಿದಿದ್ದಾರೆ. ಬನ್ನೂರು ಕೆ.ರಾಜು ಅವರ ಸಾಹಿತ್ಯ ಕೃಷಿ ನಡೆಸಲು ಪತ್ನಿಯವರಾದ ಮಹಾಲಕ್ಷ್ಮೀಯವರ ಉದಾರತೆ, ಕುಟುಂಬದ ಸಹಕಾರ ಬಹಳ ದೊಡ್ಡದು ಎಂದು ತಿಳಿಸಿದರು. ಹೊಸಮಠದ ಚಿದಾನಂದಸ್ವಾಮಿ ಸಾನಿಧ್ಯ ವಹಿಸಿದ್ದರು. ಸಮಾಜ ಸೇವಕ ಕೆ. ರಘುರಾಂ ವಾಜಪೇಯಿ ಅಧ್ಯಕ್ಷತೆ ವಹಿಸಿದ್ದರು. ನಟ ಸುಪ್ರೀತ್, ಸಂಸ್ಕೃತ ವಿದ್ವಾಂಸೆ ಡಾ.ಕೆ. ಲೀಲಾಪ್ರಕಾಶ್, ಉದ್ಯಮಿ ರವಿಕುಮಾರ್, ವಿದ್ಯಾ, ಭಾಗವಹಿಸಿದ್ದರು.

# ಕೋಟೆ ಸರ್ಕಾರಿ ಆಸ್ಪತ್ರೆ ಅವ್ಯವಸ್ಥೆಗೆ ಅಸಮಧಾನ

**ಮೈಸೂರು:** ಅನ್ನದಾತರು ವಾಸಿಸುವ ಪ್ರದೇಶಗಳಲ್ಲಿ ಸೂಕ್ತ ವೈದ್ಯಕೀಯ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯ ಒಸಗಿಸಲು ಸರ್ಕಾರ ಮುಂದಾಗಬೇಕೆಂದು ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ,ಚಂದನ್‌ಗೌಡ ಒತ್ತಾಯಿಸಿದರು.

ಮೈಸೂರು ಜಿಲ್ಲೆಯ ಎಚ್.ಡಿ.ಕೋಟೆ ತಾಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ಇರುವ ಅವ್ಯವಸ್ಥೆ ಕುರಿತು ರೈತರು ನೀಡಿದ ಮಾಹಿತಿ ಮೇರೆಗೆ ಶುಕ್ರವಾರ ಆಸ್ಪತ್ರೆಗೆ ಸಂಘದ ಪದಾಧಿಕಾರಿಗಳೊಡನೆ ಭೇಟಿ ನೀಡಿದ ಚಂದನ್‌ಗೌಡ, ಅಲ್ಲಿನ ಸಮಸ್ಯೆಗಳನ್ನು ಕಣ್ಣಾರೆ ಕಂಡು ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳೊಡನೆ ಸೂಕ್ತ ಸಮಾಲೋಚನೆ ನಡೆಸಿದರು.

ಬಳಿಕ ವೈದ್ಯಾಧಿಕಾರಿಗಳೊಡನೆ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ಇದ್ದು, ಸೂಕ್ತ ಸಮಯಕ್ಕೆ ಚಿಕಿತ್ಸೆ ಸಿಗದೇ ರೋಗಿಗಳು ಪರದಾಡುವಂತಾಗಿದೆ. ಅಲ್ಲದೇ ಆಸ್ಪತ್ರೆಯಲ್ಲಿ ಇರಬೇಕಾದ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಎಲ್ಲಕ್ಕಿಂತ ಹೆಚ್ಚಾಗಿ ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕಾಗಿದೆ. ಅನ್ನದಾತ ಸಮುದಾಯಕ್ಕೆ ಅಗತ್ಯ ಚಿಕಿತ್ಸೆಯನ್ನು ಒದಗಿಸುವ ವೈದ್ಯಕೀಯ ಮನೋಭಾವ ಬೆಳೆಸಿಕೊಳ್ಳಬೇಕಿದೆ ಎಂದರು.

ರೈತರು ವಾಸಿಸುವ ಪ್ರದೇಶಗಳಲ್ಲಿ ಸರ್ಕಾರೇತರ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಎಲ್ಲ ಮೂಲಭೂತ ಸೌಕರ್ಯಗಳು ಮತ್ತು ಸೂಕ್ತ ಸಮಯಕ್ಕೆ ರೋಗಿಗಳಿಗೆ ಅಗತ್ಯವಿರುವ ಚಿಕಿತ್ಸೆ ದೊರೆಯುವಂತಾಗಬೇಕು ಎಂದು ಒತ್ತಾಯಿಸಿದ ಚಂದನ್‌ಗೌಡ ಅವರು, ಆಸ್ಪತ್ರೆಯಲ್ಲಿ ಇರುವ ವೈದ್ಯರ ಕೊರತೆ ನೀಗಿಸಿ ಕೂಡಲೇ ವೈದ್ಯರ ನೇಮಕಾತಿಗೆ ಸರ್ಕಾರ ಕ್ರಮ ಕೈಗೊಳ್ಳಬೇಕು. ದೇಶಕ್ಕೆ ಅನ್ನ ನೀಡುವ ಅನ್ನದಾತರಿಗೆ ಉತ್ತಮ ಚಿಕಿತ್ಸೆ ದೊರಕಿಸುವ ನಿಟ್ಟಿನಲ್ಲಿಯೂ ಗಮನ ಹರಿಸಬೇಕೇಂದು ಆಗ್ರಹಿಸಿದರು.



ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೈತಾಪಿ ವರ್ಗದ ರೋಗಿಗಳನ್ನು ಇದೇ ವೇಳೆ ಭೇಟಿ ಮಾಡಿದ ಅವರು, ಮುಂದಿನ ದಿನಗಳಲ್ಲಿ ಮತ್ತೆ ಸಮಸ್ಯೆಗಳು ಉಂಟಾದಲ್ಲಿ ರೈತ ಕಲ್ಯಾಣದ ಗಮನಕ್ಕೆ ತರಬೇಕೆಂದು ಮನವಿ ಮಾಡಿದರಲ್ಲದೇ, ಆಸ್ಪತ್ರೆ ಅವ್ಯವಸ್ಥೆ ಕುರಿತು ಆರೋಗ್ಯ ಸಚಿವರ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

## ಮೇಲ್ವಿಚಾರಕ ಎಸ್. ಬಿ . ಶಿವಕುಮಾರ್ ಸನ್ಮಾನ

**ಮಂಡ್ಯ:** ತಾಲೂಕು ಹೊಳಲು ಗ್ರಾಮದ ಕಾವೇರಿ ಗೆಳತಿಯರ ಬಳಗದ ವತಿಯಿಂದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ವಲಯ ಮೇಲ್ವಿಚಾರಕರಾದ ಎಸ್. ಬಿ .ಶಿವಕುಮಾರ್ ಅವರನ್ನು ಈ ದಿನ ಮಹಿಳಾ ಮಂಡಳಿ ಕಚೇರಿಯಲ್ಲಿ ಸನ್ಮಾನಿಸಿ ಅಭಿನಂದಿಸಿ ಬೀಳ್ಕೊಟ್ಟರು .ನಂತರ ಮಾತನಾಡಿದ್ದ ಕಾವೇರಿ ಗೆಳತಿಯರ ಬಳಗದ ಅಧ್ಯಕ್ಷರಾದ ಲಿಂಗರಾಜಮ್ಮ ಮಾತನಾಡುತ್ತಾ ನಮ್ಮ ಗ್ರಾಮಕ್ಕೆ ಬಂದು ಸುಮಾರು ಐದು ವರ್ಷಗಳಾಗಿದೆ .ಗ್ರಾಮಕ್ಕೆ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ .ಹಾಗೂ ಗ್ರಾಮದ ದೇವಸ್ಥಾನಗಳು, ಸಮುದಾಯ ಭವನ ನಿರ್ಮಾಣ, ಶೌಚಾಲಯಗಳು, ಸಂಘ-ಸಂಸ್ಥೆಗಳಿಗೆ ಆರ್ಥಿಕ ಸಹಾಯಧನವನ್ನು ಶ್ರೀ ಕ್ಷೇತ್ರದಿಂದ ಸಹಾಯ ಮಾಡಿಸಿದ್ದಾರೆ .ಎಂದು ಅವರನ್ನು ಹಾಡಿ ಹೊಗಳಿದರು.

ನಂತರ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಎಸ್. ಬಿ.ಶಿವಕುಮಾರ್ ರವರು ಈ ಗ್ರಾಮಕ್ಕೆ ಬಂದು ಸುಮಾರು ಐದು ವರ್ಷಗಳಾಗಿದೆ ಇಲ್ಲಿನ ಜನರು ಒಳ್ಳೆಯ ಪ್ರೀತಿಯಿಂದ ನೋಡಿದ್ದಾರೆ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳದ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಮಂಡ್ಯಕ್ಕೆ ಬಂದು ಹೊಳಲು ವಲಯದ 13 ಹಳ್ಳಿಗಳಲ್ಲಿ ಸಂಘ ಸಂಸ್ಥೆಗಳಲ್ಲಿ ವಲಯ ಮೇಲ್ವಿಚಾರಕನಾಗಿ ಒಳ್ಳೆಯ ಕೆಲಸಗಳನ್ನು ಮಾಡಿರುವ ತೃಪ್ತಿ ನನಗಿದೆ .ಆದರೂ ಸಹ ಇಲ್ಲಿನ ಜನರು ಹಾಗೂ ಮಾಜಿ ಶಾಸಕರಾದ ಎಚ್ . ಬಿ.ರಾಮು, ಎಚ್ ಎಲ್. ಶಿವಣ್ಣನವರು ಹಾಗೂ ಗ್ರಾಮದ ಮುಖಂಡರು ತೋರಿಸುವ ಪ್ರೀತಿ ಅಪಾರವಾದದ್ದು. ಬಹಳ ಸಂತೋಷ ತಂದಿದೆ. ಆದ್ದರಿಂದ ಮಂಡ್ಯ ಜಿಲ್ಲೆಯ ಜನರು ಕಬ್ಬಿನಷ್ಟೇ ಸಿಹಿ ಎಂದು ಹಾಗೂ ಪ್ರತಿಯೊಂದು ಹಳ್ಳಿಗಳು ಒಳ್ಳೆಯ ಪ್ರೀತಿ ವಿಶ್ವಾಸದಿಂದ ನೋಡಿ ಕೆಲಸಗಳನ್ನು ಮಾಡಿಸುತ್ತಾರೆ. ಆ ಭಗವಂತನು ಹಾಗೂ ಶ್ರೀ ಕ್ಷೇತ್ರದ ಮಂಜುನಾಥ ಸ್ವಾಮಿಯು ನಿಮಗೆಲ್ಲರಿಗೂ ಒಳ್ಳೆಯದು ಮಾಡಲಿ ಎಂದು ಈ ಸಂದರ್ಭದಲ್ಲಿ ಹೇಳಿದರು. ಈ ಸಂದರ್ಭದಲ್ಲಿ ಕಾವೇರಿ ಗೆಳತಿಯರ ಬಳಗದ ಸದಸ್ಯರಾದ ಭಾಗ್ಯ ,ಅನುಸೂಯ, ಭಾಗ್ಯ, ಸುಕನ್ಯ,ಪದ್ಮ ,ಚಿಕ್ಕತಾಯಮ್ಮ, ಹಾಗೂ ಜಿಲ್ಲಾ ಜನಜಾಗೃತಿ ಸದಸ್ಯರಾದ ಶಂಕರ್ ಪೂಜಾರಿ, ಗ್ರಾಮದ ಮುಖಂಡ ತಮ್ಮಣ್ಣ ಹಾಗೂ ಮಹಿಳಾ ಮಂಡಳಿಯ ಸದಸ್ಯರು ಹಾಜರಿದ್ದು ಶಿವಕುಮಾರ್ ಅವರನ್ನು ಬೀಳ್ಕೊಟ್ಟರು.



## ಸ್ಲಗ್: ಗಾಳಿಪಟ ಉತ್ಸವ

**ಕೋಲಾರ:** ಮತದಾನ ಜಾಗೃತಿ ಅಭಿಯಾನದ (ಸ್ವೀಪ್) ಮೂಲ ಉದ್ದೇಶ ಮತದಾನದ ಬಗ್ಗೆ ಅರಿವು ಮೂಡಿಸಿ ಮತದಾರರನ್ನು ಜಾಗೃತಗೊಳಿಸುವುದು. ಆಗಿದೆ ಕೋಲಾರ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಳಬಾಗಿಲು ತಾಲ್ಲೂಕು ಆಡಳಿತ ವತಿಯಿಂದ ಹೊರವಲಯದ ಬಾಲಾಜಿ ಭವನ್ ಮೈದಾನದಲ್ಲಿ ಗಾಳಿಪಟ ಹಾರಿಸುವ ಮೂಲಕ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿಶೇಷವಾಗಿ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಸ್ತ್ರೀ-ಶಕ್ತಿ ಸ್ವಸಹಾಯ ಸಂಘಗಳ ಸದಸ್ಯರು, ಪುರಸಭೆ, ಗ್ರಾಮ ಪಂಚಾಯಿತಿ, ನರೇಗಾ ಸಿಬ್ಬಂದಿ ಹೀಗೆ ಎಲ್ಲರ ಸಹಯೋಗದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕೋಲಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮ ಬಸಂತಪ್ಪ ಅವರು ತಿಳಿಸಿದರು. ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಓಖಒಐ ಹಾಗೂ ಸ್ತ್ರೀ-ಶಕ್ತಿ ಸ್ವ-ಸಹಾಯ ಸಂಘಗಳ ಮೂಲಕ ನಾವು ಮತದಾನದ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಹೀಗಾಗಿ ಎಲ್ಲಾ ಮಹಿಳೆಯರು ಮತದಾನದ ಬಗ್ಗೆ ಜಾಗೃತಿಯನ್ನು ಹೊಂದಿದ್ದು ಮುಂದಿನ ದಿನಗಳಲ್ಲಿ ಮತದಾನ ಮಾಡುವಂತೆ ಅವರಲ್ಲಿ ಪ್ರೇರೇಪಿಸಲಾಗುತ್ತದೆ ಎಂದು ಓಖಐಒ ನ ತಾಲ್ಲೂಕು ವ್ಯವಸ್ಥಾಪಕರಾದ ಪುಷ್ಪಲತಾ ಅವರು ತಿಳಿಸಿದರು. ನಾವು ಸ್ತ್ರೀ-ಶಕ್ತಿ ಮಹಿಳಾ ಸಂಘದಲ್ಲಿ ಕಾರ್ಯನಿರ್ವಹಿಸುತ್ತಿದ್ದು ನಮ್ಮ ಎಲ್ಲಾ ಸಂಘದ ಸದಸ್ಯರು ಕೈಗಳಿಗೆ ಮೆಂದಿಯನ್ನು ಹಾಕಿಕೊಳ್ಳುವುದರ ಮೂಲಕ ಮತದಾನದ ಬಗ್ಗೆ ಜಾಗೃತಿಯನ್ನು ಮೂಡಿಸಲಾಗುತ್ತಿದೆ ಎಂದು ಸ್ವ-ಸಹಾಯ ಸಂಘದ ಸದಸ್ಯ ವೀಣಾ ಅವರು ತಿಳಿಸಿದರು.

## ಅವಧಿ ವಿಸ್ತರಣೆ

**ಕೋಲಾರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆರು ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 120 ಅಂಗನವಾಡಿ ಕಾರ್ಯಕರ್ತೆಯರ ಮತ್ತು 393 ಅಂಗನವಾಡಿ ಸಹಾಯಕಿಯರ ಗೌರವಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರಿಂದ ಆನ್‌ಲೈನ್ https// karnemakaone.kar.nic.in/abcd/ ಮೂಲಕ ಏಪ್ರಿಲ್ 19 ರವರೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆದರೆ ಕಾರಣಾಂತರಗಳಿಂದ ಅಂತಿಮ ದಿನಾಂಕ ಮೇ 20ರ ವರೆಗೆ ಮಾನ್ಯ ಜಿಲ್ಲಾಧಿಕಾರಿಗಳವರ ಮೌಖಿಕ ಆದೇಶದಂತೆ ವಿಸ್ತರಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದುಯೆಂದು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಶೋಕ್ ಗುರ್ನಾಳೆಗೆ ಲಯನ್ಸ್ ಕ್ಲಬ್ ಇಂಟರ್‌ನ್ಯಾಷನಲ್ ಪ್ರಶಸ್ತಿ

**ಬೀದರ್:** ಸಮಾಜ ಸೇವಕ ಹಾಗೂ ಉದ್ಯಮಿ ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಮೇಟಿ-ಮೇಲ್ಕುಂದ ಗ್ರಾಮದ ನಿವಾಸಿಯಾದ ಅಶೋಕ ಗುರ್ನಾಳೆಯವರು ಲಯನ್ಸ್ ಕ್ಲಬ್ ಮೂಲಕ ಅನೇಕ ಸಮಾಜಮುಖಿ ಕಾರ್ಯಗಳನ್ನು ಅನುಷ್ಠಾನಗೊಳಿಸುವ ಮೂಲಕ ಕಾಲಕಾಲಕ್ಕೆ ವಿವಿಧ ರೀತಿಯ ಸಹಾಯವನ್ನು ಜನತೆಗೆ ಒದಗಿಸಿದ ಕೀರ್ತಿ ಅಶೋಕಗೆ ಸಲ್ಲುತ್ತದೆ. ಇ ನಿಟ್ಟನಲ್ಲಿ ಅವರ ಸೇವೆಯನ್ನು ಗುರುತಿಸಿ ಲಯನ್ಸ್ ಇಂಟರ್‌ನ್ಯಾಷನಲ್ ಮಿಷನ್ ಉತ್ತಮ ಸಾಧಕ ಎಂಬ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ,

ಮತ್ತು ಇದುವರೆಗೆ ಲಯನ್ಸ್ ಕ್ಲಬ್ ಅಧ್ಯಕ್ಷರಾಗಿ, ಕಾರ್ಯದರ್ಶಿಯಾಗಿ, ಸಾರ್ವಜನಿಕ ಸಂಪರ್ಕ ಅಧಿಕಾರಿಯಾಗಿ ಹಾಗೂ ಪ್ರಾಂತೀಯ ಮಟ್ಟದಲ್ಲಿ ಪ್ರಚಾರ ಮತ್ತು ಮಾಹಿತಿ ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ್ದು, ಹಲವು ಬಾರಿ ವಿವಿಧ ಪ್ರಶಸ್ತಿಗಳನ್ನು ಅಶೋಕ ಅವರಿಗೆ ನೀಡಿ ಗೌರವಿಸಿದ್ದಾರೆ.

ಲಯನ್ಸ್ ಇಂಟರ್‌ನ್ಯಾಷನಲ್ ಮಿಷನ್ ಪೂರೈಸಲು ವರ್ಷದಲ್ಲಿ 13 ಜಿಲ್ಲೆಗಳಿಂದ ಮಾಹಿತಿ ತಂತ್ರಜ್ಞಾನದಲ್ಲಿ ಅತ್ಯುತ್ತಮ ಸಾಧನೆಗಳಿಗಾಗಿ ಲಯನ್ಸ್ ಇಂಟರ್‌ನ್ಯಾಷನಲ್‌ನ ಅಂತರರಾಷ್ಟ್ರೀಯ ಅಧ್ಯಕ್ಷ ಡಾ. ಪ್ಯಾಟಿ ಹಿಲ್ ಮೆಚ್ಚುಗೆಯ ಪ್ರಮಾಣಪತ್ರವನ್ನು ಕಳುಹಿಸಿದ್ದಾರೆ. ನಾಸಿಕ್‌ನ ಪಂಚತಾರಾ



ರಾಡಿಸನ್ ಬ್ಲೂ ಹೋಟೆಲ್‌ನಲ್ಲಿ ಇತ್ತೀಚೆಗೆ ಜಿಲ್ಲಾ ಮಟ್ಟದ ಸಮ್ಮೇಳನವನ್ನು ನಡೆಸಲಾಯಿತು, ಇದರಲ್ಲಿ 13 ಜಿಲ್ಲೆಗಳಿಂದ ಸುಮಾರು 600 ಸದಸ್ಯರು ಭಾಗವಹಿಸಿದ್ದರು, ಲಯನ್ಸ್ ಇಂಟರ್ ನ್ಯಾಶನಲ್ 3234 ಊ-2 ಜಿಲ್ಲಾ ಗವರ್ನರ್ ಲಾ. ಸುನೀಲ ದೇಸರದ ಪ್ರಶಂಸಾ ಪತ್ರ ನೀಡಿ ಕೃತಜ್ಞತೆ ಸಲ್ಲಿಸಿದರು.

ಲಯನ್ಸ್ ಇಂಟರ್ ನ್ಯಾಷನಲ್ ನ ಮಾಜಿ ನಿರ್ದೇಶಕ ಡಾ। ಡಾ. ನವಲ್ ಮಾಲು, ಮನೋಜ್ ಶಾ, ಕ್ಷೇತ್ರದ ಮುಖಂಡ ಮಹಾವೀರ ಪಟ್ನಿ, ಬಹು ಪರಿಷತ್ ಕಾರ್ಯದರ್ಶಿ. ಪುರೋಶೋತ್ತಮ್ ಜೈಪುರಿಯಾ, ಉಪ ಜಿಲ್ಲಾ ಗವರ್ನರ್ ಗಿರೀಶ್ ಸಿಸೋಡಿಯಾ, ಎರಡನೇ ಉಪ ಜಿಲ್ಲಾ ಗವರ್ನರ್ ಅಶ್ವಿನ್ ಬಜೋರಿಯಾ, ಜಿಲ್ಲಾ ಗವರ್ನರ್ ಪ್ರಥಮ ಮಹಿಳೆ ಶ್ರೀಮತಿ. ರಜನಿ ದೇಸರದ ವಿಶೇಷ ಮೆಚ್ಚುಗೆ ವ್ಯಕ್ತಪಡಿಸಿದರು.

### ಅಭಿನಂದನೆಗಳು

**ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಅಶೋಕ ಗುರ್ನಾಳೆಯವರಿಗೆ ಪ್ರಶಸ್ತಿ ಬಂದಿರುವುದನ್ನು ಔರಂಗಬಾದನ ಮರಾಠವಾಡ ಕನ್ನಡ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಕೇಶಪ್ಪ ಹೊನ್ನಳಿ, ಕಾರ್ಯದರ್ಶಿ ಶ್ರೀನಿವಾಸ ತೇಲಂಗ, ತೆಲಂಗಾಣ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘದ ಅಧ್ಯಕ್ಷ ಧರ್ಮೇಂದ್ರ ಪೂಜಾರಿ ಬಗ್ದೂರಿಯವರು ಅಭಿನಂದನೆ ಸಲ್ಲಿಸಿದ್ದರು.**

ಕಾರ್ಯಕ್ರಮದಲ್ಲಿ ಹೋಮ್ ಕ್ಲಬ್ ಅಧ್ಯಕ್ಷರು ಉಪಸ್ಥಿತರಿದ್ದರು. ಯೋಗೇಶ ಧೋತ್ರೆ, ದಿನೇಶ ಪಾಟೀಲ, ಪ್ರದೀಪ ದೇಶಪಾಂಡೆ, ದತ್ತಾತ್ರೇ ದೇಶಪಾಂಡೆ, ಸ್ವಪ್ನಿತಾ ಮಹಾಜನ್ ಉಪಸ್ಥಿತರಿದ್ದು ಶುಭಹಾರೈಸಿದರು. ಇಂದಿನ ಗೌರವದ ಮಾರ್ಗದರ್ಶಿ. ಅಶೋಕ್ ಗುರ್ನಾಳೆ ಅವರು ಸೌರಭ್ ದೇಸರದ, ಮಾಜಿ ಜಿಲ್ಲಾ ಗವರ್ನರ್ ರಾಜೇಶ್ ರಾವುತ್, ರಾಹುಲ್ ಔಸೇಕರ್, ಜಿತೇಂದ್ರ ಮಹಾಜನ್, ಮಂದರ್ ದಿನಾಂಕ ಎಂದು ವ್ಯಕ್ತಪಡಿಸಿದರು. ಅಂತಿಮವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಲಯನ್ ಸದಸ್ಯರುಗಳಿಗೆ ಧನ್ಯವಾದಗಳು ತಿಳಿಸಿದರು.

**ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಕರೆ**

# ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸಿ

**ಕೋಲಾರ:** ಮಾಲೂರು ಕನ್ನಡಿಗರಿಗೆ ಕಾವೇರಿ ನೀರು ಕೊಡುವುದಿಲ್ಲ ಎಂದು ಘೋಷಣೆ ಮಾಡಿರುವ ತಮಿಳುನಾಡಿನ ಸ್ಟಾಲಿನ್ ಅವರಿಗೆ ಬುದ್ಧಿ ಕಲಿಸುವ ನಿಟ್ಟಿನಲ್ಲಿ ಎನ್ ಡಿ ಎ ಮೈತ್ರಿಕೂಟದ ಅಭ್ಯರ್ಥಿಗಳನ್ನು ಚುನಾವಣೆಯಲ್ಲಿ ಗೆಲ್ಲಿಸುವ ಮೂಲಕ ತಮಿಳುನಾಡಿಗೆ ಪಾಠ ಕಲಿಸಬೇಕೆಂದು ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಹೇಳಿದರು.

ಮಾಲೂರಿನಲ್ಲಿ ನಡೆದ ಜೆಡಿಎಸ್ ಬಿಜೆಪಿ ಮೈತ್ರಿಕೂಟದ ಪ್ರಚಾರ ಸಭೆಯಲ್ಲಿ ಮಾತನಾಡಿ ಸ್ಟಾಲಿನ್ ಅವರು ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆ ಕಟ್ಟಲು ಬಿಡುವುದಿಲ್ಲ ವೆಂದು ಹೇಳಿದ್ದಾರೆ. ಆದರೆ ರಾಜ್ಯದಲ್ಲಿ 28 ಸ್ಥಾನಗಳನ್ನು ಮೈತ್ರಿಕೂಟ ಗೆಲ್ಲುವ ಮೂಲಕ ಮಾಲೂರಿಗೆ ಮೇಕೆದಾಟು ಅಥವಾ ಕೃಷ್ಣ ನದಿಯಿಂದ ಕುಡಿಯುವ ನೀರು ತರಬೇಕಾಗಿದೆ ಎಂದರು. ಮೈತ್ರಿಕೂಟದಲ್ಲಿ ಸ್ವಂತ ಬಲದಿಂದ ಬಿಜೆಪಿ ಕಟ್ಟಿ ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಇಂಡಿಯಾದಲ್ಲಿ ಮೋದಿಯನ್ನು ತಡೆಗಟ್ಟುವ ನಾಯಕ ಯಾರಿದ್ದಾರೆ ಎಂದು ದೇವೇಗೌಡ್ರು ಪ್ರಶ್ನಿಸಿದರು. ಇಂಡಿಯಾದಲ್ಲಿ ಒಟ್ಟಾಗಿರುವ 28 ರಾಜಕೀಯ ಪಕ್ಷಗಳಲ್ಲಿ ಪ್ರಧಾನಿ ಅಭ್ಯರ್ಥಿ ಯಾರಿದ್ದಾರೆ? ಕನಿಷ್ಠ ಅವರಿಗೆ ನಾಯಕನನ್ನು ಗುರುತಿಸಲು ಇನ್ನೂ ಆಗಿಲ್ಲ ಎಂದು ದೇವೇಗೌಡ್ರು ಲೇವಡಿ ಮಾಡಿದರು 91ನೇ ವಯಸ್ಸಿನಲ್ಲಿ ನಾನು ಯಾವುದೇ



ಆಕಾಂಕ್ಷೆಯಿಂದ ಪ್ರಧಾನಿ ಮೋದಿಯವರಿಗೆ ಬೆಂಬಲ ಕೊಟ್ಟಿಲ್ಲ. ಕೀನ್ಯಾ ಮತ್ತು ರಷ್ಯಾ ದೇಶಗಳು ಹೇಗೆ ನಡೆದುಕೊಂಡಿವೆ ಎಂದು ನಮಗೆ ಗೊತ್ತಿದೆ ಇದನ್ನು ಸಮರ್ಥವಾಗಿ ಎದುರಿಸುವ ಶಕ್ತಿ ಇಂಡಿಯಾ ಕೂಟದಲ್ಲಿ ಯಾರಿಗಿದೆ? ದೇಶವನ್ನು ಆಳುವ ಸಾಮರ್ಥ್ಯ ಕೇವಲ ಮೋದಿಯವರಿಗೆದೆ. ಹೀಗಾಗಿ ಕರ್ನಾಟಕದಲ್ಲಿ 28 ಲೋಕಸಭಾ ಕ್ಷೇತ್ರಗಳನ್ನು ಮೋದಿ ಅವರಿಗೆ ಗೆಲ್ಲಿಸಿಕೊಡುವ ಮೂಲಕ ಅವರನ್ನು ಪ್ರಧಾನಿ ಮಾಡಲು ಮುಂದಾಗೋಣ. ತಮಿಳುನಾಡಿನವರು ಇಷ್ಟು ದಿನ 40 ಸ್ಥಾನಗಳನ್ನು ಗೆದ್ದುಕೊಂಡು ಆಟ ಆಡಿದರು, ಇದೀಗ ನಾವು 28 ಸ್ಥಾನಗಳನ್ನು ಗೆಲ್ಲಿಸಿ ಕೊಡುವ ಮೂಲಕ ಪ್ರತಿ ತಂತ್ರ ಕೂಡೋಣ. ನನಗಿನ್ನೂ ಎರಡು ವರ್ಷ ರಾಜ್ಯಸಭಾ ಸ್ಥಾನದ ಅವಧಿ ಇದ್ದು 28 ಸ್ಥಾನಗಳನ್ನು ತೆಗೆದುಕೊಂಡು ಹೋಗಿ ಮೋದಿ ಅವರ ಕೈ ಹಿಡಿದು ಮಾಲೂರಿಗೆ ಕುಡಿಯುವ ನೀರನ್ನು ತರುತ್ತೇನೆ ಎಂದು ಮಾಜಿ ಪ್ರಧಾನಿ ದೇವೇಗೌಡರು ಹೇಳಿದರು.

ಸಂಸದ ಎಸ್ ಮುನಿಸ್ವಾಮಿ, ವೈ ಎ ನಾರಾಯಣಸ್ವಾಮಿ,ಅರವಿಂದ ಲಿಂಬಾವಳಿ, ಮಾಜಿ ಶಾಸಕರಾದ ಮಂಜುನಾಥಗೌಡ, ಶಾಸಕರಾದ ಸಮೃದ್ಧಿ ಮಂಜುನಾಥ್, ಎಂಎಲ್ಸಿ ಇಂಚರ ಗೋವಿಂದರಾಜು, ದಳಪತಿ ರಾಮೇಗೌಡ,ವೈ ಸಂಪಂಗಿ, ಜೆಡಿಎಸ್ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ರಶ್ಮಿ ರಾಮೇಗೌಡ ಇದ್ದರು.

# ಸಂವಿಧಾನ ರಕ್ಷಿಸಲು ಕಾಂಗ್ರೆಸ್ ಬೆಂಬಲಿಸಿ

**ಮಂಡ್ಯ:** ಕಾಂಗ್ರೆಸ್ ಪಕ್ಷ ಎಲ್ಲಾ ಜಾತಿ ಮತ್ತು ಸಮುದಾಯಕ್ಕೆ ಒಳಿತು ಮಾಡುವ ಪಕ್ಷವಾಗಿದ್ದು ಕೇಂದ್ರ ಹಾಗೂ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ವೇಳೆ ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ಯೋಜನೆಗಳನ್ನೂ ಜಾರಿಗೊಳಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ನಗರದ ಪತ್ರಕರ್ತರ ಸಂಘದಲ್ಲಿ ಆಯೋಜನೆಗೊಂಡಿದ್ದ ಮಾದಿಗ ಸಮುದಾಯದ ಮುಖಂಡ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಎಡಗೈ ಮತ್ತು ಬಲಗೈ ಎಂಬ ಅಪಸ್ವರ ತೆಗೆದು, ಸಂವಿಧಾನ ರಕ್ಷಿಸಲು ಕಾಂಗ್ರೆಸ್ ಪಕ್ಷ ಬೆಂಬಲಿಸಬೇಕೆಂದು ಕರೆ ನೀಡಿದರು.

ಜೆಡಿಎಸ್ ಹಾಗೂ ಬಿಜೆಪಿ ಒಂದೇ ನಾಣ್ಯದ ಎರಡು ಮುಖಗಳಾಗಿದ್ದು, ಅಧಿಕಾರದಲ್ಲಿದ್ದಾಗ ಸಾಧನೆ ಮಾಡಲಾಗದೇ ಅಧಿಕಾರವಿಲ್ಲದಾಗ ಅಲವತ್ತುಗೊಳ್ಳುತ್ತಾರೆ. ಜಿಲ್ಲೆಯನ್ನು ಅಭಿವೃದ್ಧಿ ಮಾಡುವ ಚಿಂತನೆ ಮೈತ್ರಿ ಪಕ್ಷಗಳ ನಾಯಕರಲ್ಲಿಲ್ಲ 14 ತಿಂಗಳ ಕಾಲ ಅಧಿಕಾರದಲ್ಲಿದ್ದಾಗ ಜಿಲ್ಲೆ ಹಾಗೂ ಯಾವುದೇ ಜನಾಂಗಕ್ಕೆ ಕುಮಾರಸ್ವಾಮಿ ಕೊಡುಗೆ ಏನೇಂದ್ರು ಪ್ರಶ್ನಿಸಿದರು.

ಮಾದಿಗ ಸಮುದಾಯದ ಅಭಿವೃದ್ಧಿಗೆ ಬೇಕಾದ ಸಹಕಾರ ಮಾಡುವ ಜೊತೆಗೆ ಮುಂದಿನ ದಿನಗಳಲ್ಲಿ ಸರ್ಕಾರ ನಾಮನಿರ್ದೇಶನದಲ್ಲಿ ಜನಾಂಗಕ್ಕೆ ನ್ಯಾಯ ಕಲ್ಪಿಸಲಾಗುತ್ತದೆ. ಸಮಾಜದ ಎಲ್ಲಾ ಬಂಧುಗಳು ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಗೆಲುವಿಗೆ ಸಹಕರಿಸಬೇಕೆಂದರು. ಶಾಸಕ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, ಶ್ರೀರಂಗಪಟ್ಟಣದಲ್ಲಿ ಹಿಂದಿನ ಸಿದ್ದರಾಮಯ್ಯ ಸರ್ಕಾರದಲ್ಲಿ ಮಂಜೂರಾಗಿದ್ದ ಬಾಬು ಜಗಜೀವನ್ ರಾಂ ಕಟ್ಟಡ ಪೂರ್ಣಗೊಳಿಸಲು ಬದ್ದನಾಗಿದ್ದೇನೆ ಹಾಗೂ ಜನಾಂಗದ ಶ್ರೇಯೋಭಿವೃದ್ದಿಗೆ ಶ್ರಮಿಸುತ್ತೇನೆ. ಇದಕ್ಕಾಗಿ ಪಕ್ಷದ ಅಭ್ಯರ್ಥಿ ಬೆಂಬಲಿಸಬೇಕೆಂದು ಮನವಿ ಮಾಡಿದರು. ಸಭೆಯಲ್ಲಿ ಶಾಸಕ ರವಿಕುಮಾರ್ ಗೌಡ, ಬಾಬು ಜಗಜೀವನ ರಾಂ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಎನ್.ಆರ್.ಚಂದ್ರಶೇಖರ್, ಹನಿಯಂಬಾಡಿ ಶೇಖರ್ ಮತ್ತಿತರರು ಉಪಸ್ಥಿತರಿದ್ದರು.

# ಪತ್ರಿಕೋದ್ಯಮ ಅಧ್ಯಯನಶೀಲ ಕೊರತೆಯಿಂದ ಬಳಲುತ್ತಿದೆ

**ಬೆಂಗಳೂರು:** ಇತ್ತೀಚಿನ ಕಾಲಘಟ್ಟದ ಪತ್ರಿಕೋದ್ಯಮ ಅಧ್ಯಯನಶೀಲ ಕೊರತೆಯಿಂದ ಬಳಲುತ್ತಿದೆ ಎಂದು ಹಿರಿಯ ಪತ್ರಕರ್ತ ಕೆ.ಎಸ್.ರಾಜನ್ ತಿಳಿಸಿದ್ದಾರೆ.

ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಪತ್ರಕರ್ತರಾಗಿ ಸೇವೆ ಸಲ್ಲಿಸಿ ಸದ್ಯ ವಿಶ್ರಾಂತ ಜೀವನದಲ್ಲಿರುವ 77 ವಸಂತ ತುಂಬಿದ ಕೆ.ಎಸ್.ರಾಜನ್ ಅವರನ್ನು ಜೆ.ಪಿ.ನಗರ ಅವರ ಮನೆಯಲ್ಲಿಯೇ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಸನ್ಮಾನಿಸಿದ ಸಂದರ್ಭದಲ್ಲಿ ಮಾತನಾಡಿದರು.

ನಮ್ಮ ಕಾಲದಲ್ಲಿದ್ದಂತೆ ಲೈಬ್ರರಿಗೆ ಹೋಗಿ ಅಧ್ಯಯನ ಮಾಡಬೇಕಾದ ಸ್ಥಿತಿ ಇಲ್ಲ. ಮೊಬೈಲ್‌ನಲ್ಲಿಯೇ ಎಲ್ಲಾ ಮಾಹಿತಿ ಸಿಗುವ ಕಾಲವಿದೆ. ಪ್ರತಿ ವಿಷಯದ ಬಗ್ಗೆ ಅಧ್ಯಯನಶೀಲತೆ ಪತ್ರಕರ್ತರಿಗೆ ಮುಖ್ಯವಾದರೆ ಮಾತ್ರ ಅವರಲ್ಲಿ ಪರಿಪಕ್ವವಾದ ಪತ್ರಕರ್ತ ರೂಪುಗೊಳ್ಳಬಲ್ಲ ಎಂದರು.

ಕನ್ನಡ ಭಾಷೆಯ ಬಗ್ಗೆ ಬಹಳ ಜವಬ್ದಾರಿಯಿಂದ ನಾವುಗಳು ಹೆಜ್ಜೆ ಇಡಬೇಕು. ಕನ್ನಡದೊಳಗೆ ಇಂಗ್ಲೀಷ್ ಭಾಷೆ ಬಳಕೆ ಕಡಿಮೆ ಮಾಡಬೇಕು. ಈ ನಿಟ್ಟಿನಲ್ಲಿ ಹೊಸ ತಲೆಮಾರಿನ ಪತ್ರಕರ್ತರಿಗೆ ತರಬೇತಿಯೂ ಬಹಳ ಮುಖ್ಯ ಎಂದರು. 1967ಲ್ಲಿ ಕನ್ನಡ ಪ್ರಭ ಪತ್ರಿಕೆ ಪ್ರಾರಂಭ ಮಾಡುವ ಸಂದರ್ಭದಲ್ಲಿ ಗೋಕುಲ ಪತ್ರಿಕೆ ಬಿಟ್ಟು ಅಲ್ಲಿಗೆ ಹೋದೆ. ಪ್ರೂಫ್ ರೀಡರ್ ಹುದ್ದೆಯಿಂದ ಸುದ್ದಿಸಂಪಾದಕನಾಗುವ ತನಕ 36 ವರ್ಷಗಳ ಕಾಲ ಒಂದೇ ಪತ್ರಿಕೆಯಲ್ಲಿ ಕೆಲಸ ಮಾಡಿದೆ. ವೃತ್ತಿ ಬದ್ಧತೆಯೇ ನನ್ನನ್ನು ಎತ್ತರಕ್ಕೆ ಬೆಳೆಸಿದೆ. ಒಂದು ದಿನವೂ ನಾನು ಯಾರ ಜೊತೆಗೂ ಜಗಳವಾಡಲಿಲ್ಲ. ಆ ರೀತಿಯಲ್ಲಿ ನನ್ನ ವೃತ್ತಿ ಜೀವನ ಮುಗಿಸಿದ್ದು ನನಗೆ ತೃಪ್ತಿಯಿದೆ ಎಂದು ವೃತ್ತಿ ಜೀವನವನ್ನು ಮೆಲುಕು ಹಾಕಿದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆ ಯು ಡಬ್ಲೂ? ಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಸುದ್ದಿ ಮನೆಯಲ್ಲಿ ಎಲೆಮರೆ ಕಾಯಿಯಂತೆ ಕೆಲಸ ಮಾಡುತ್ತಾ ಬಂದ ರಾಜನ್ ಅವರ ಕ್ರೀಯಾಶೀಲತೆಯೇ ಇಂದಿನ ಯುವ ಪೀಳಿಗೆಗೆ ಆದರ್ಶವಾಗಿದೆ ಎಂದರು.

ಐ ಎಡಬ್ಲೂಜೆ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ರಾಜನ್ ಮತ್ತು ನಾನು ಕಾಲೇಜು ದಿನಗಳಿಂದಲೂ ಒಡನಾಡಿಯಾಗಿದ್ದೆವು. ಕನ್ನಡ ಪ್ರಭ ಪತ್ರಿಕೆಯಲ್ಲಿ ಒಟ್ಟಿಗೆ ಕೆಲಸ ಮಾಡುವ ಅವಕಾಶ ನಮಗೆ ಸಿಕ್ಕಿತ್ತು. ತಮ್ಮ ಪಾಡಿಗೆ ಕೆಲಸ ಮಾಡಿಕೊಂಡು ಬರುತ್ತಿದ್ದ ಸೌಜನ್ಯದ ವ್ಯಕ್ತಿತ್ವ ಅವರದಾಗಿತ್ತು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೆ.ಎಸ್.ರಾಜನ್, ಪತ್ನಿ ಶ್ರೀದೇವಿ ಅವರನ್ನು ಸನ್ಮಾನಿಸಲಾಯಿತು. ಪುತ್ರ ನವೀನ್, ಸೊಸೆ ಸ್ವಾತಿ ಶ್ರೀವಾತ್ಸವ ಇದ್ದರು. ಕೆ ಯು ಡಬ್ಲೂ ಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಸ್ವಾಗತಿಸಿದರು. ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ದೇವರಾಜು, ಬೆಂಗಳೂರು ನಗರ ಘಟಕದ ಶಿವರಾಜು ಮತ್ತು ಶರಣುಬಸಪ್ಪ ಹಾಜರಿದ್ದರು.






**ವಿಜಯಪುರ ಪಟ್ಟಣದ ದುರ್ಗಾ ತಾಯಿ ದೇವಾಲಯ ರಸ್ತೆ, ಅರಳೇಪೇಟೆ ಹಾಗೂ ಕುಂಬಾರಪೇಟೆಗಳಲ್ಲಿ ಪುರಸಭಾ ಮಾಜಿ ಸದಸ್ಯರಾದ ನಿಸಾರ್ ಅಹಮದ್ ರವರು ಅರುಂಧತಿ ಸೇವಾ ಸಂಸ್ಥೆ ಉಪಾಧ್ಯಕ್ಷರಾದ ಎನ್ ನರಸಿಂಹಮೂರ್ತಿ ರವರೊಂದಿಗೆ ಮನೆಮನೆಗೆ ಕಾಂಗ್ರೆಸ್ ಪಕ್ಷದ ಸಾಧನೆಗಳ ಕರಪತ್ರಗಳನ್ನು ವಿತರಿಸಿ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ನ ಮುಖಂಡರುಗಳಾದ ಸಿ ವೆಂಕಟರಮಣಪ್ಪ, ಸಿ ನರಸಿಂಹ, ಮಹಬೂಬ್ ಪಾಷಾ, ಗಿರಿಯಪ್ಪ ಮತ್ತಿತರರು ಉಪಸ್ಥಿತರಿದ್ದರು**

# ಬಿಎಂಟಿಸಿ ಬಸ್ ಪ್ರಯಾಣಿಕರಿಗೆ ಸಂತಸದ ಸುದ್ದಿ

**ವಿಜಯಪುರ:** ಇನ್ನು ಮುಂದೆ ಬಿಎಂಟಿಸಿ ಬಸ್ಗಳಲ್ಲಿ ಸಂಚರಿಸುವ ಪ್ರಯಾಣಿಕರು ಚಿಲ್ಲರೆ ಇಲ್ಲವೆಂದು ಹಣ ಮರೆತುಹೋಗಿರುವೆ ಎಂದು ಮತ್ತಿತರೆ ಕಾರಣಗಳಿಗಾಗಿ ಪರಿತಾಪ ಪಡುವ ಪರಿಸ್ಥಿತಿ ಇರುವುದಿಲ್ಲ. ಇದೀಗ ಬಿಎಂಟಿಸಿ ವಿಭಾಗವು ಪ್ರಯಾಣಿಕರ ಅನುಕೂಲಕ್ಕಾಗಿ ಫೋನ್ ಪೇ, ಗೂಗಲ್ ಪೇ, ಭೀಮ್ ಯುಪಿಐ, ಪೇಟಿಎಂ ಮೊದಲಾದವುಗಳ ಮೂಲಕ ನಿರ್ವಾಹಕರ ಬಳಿ ಇರುವ ಆಪನ್ನು ಸ್ಕ್ಯಾನ್ ಮಾಡುವ ಮೂಲಕ ಹಣ ಪಾವತಿಸುವ ಅನುಕೂಲ ಕಲ್ಪಿಸಲಾಗಿದೆ ಎಂದು 39ನೇ ಡಿಪೋನ ವಿಜಯಪುರ ಹೊಸಕೋಟೆ ಬಿಎಂಟಿಸಿ ಸ್ ರೂಟ್‌ನ ನಿರ್ವಾಹಕರಾದ ತಿಪ್ಪಣ್ಣ ರವರು ತಿಳಿಸಿದರು ಫೋನ್ ಗಳ ಮೂಲಕ ಹಣ ಪಾವತಿಸುವವರಿಗೆ ಪ್ರತ್ಯೇಕವಾದ ಟಿಕೆಟ್ ಗಳು ನೀಡಲಾಗುತ್ತದೆ ಎಂದು ಸಾರ್ವಜನಿಕರು ಇದರ ಉಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.



**ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಚಿಕ್ಕ ಸುಬ್ಬಯ್ಯ ಕರೆ**

# ಲೈಂಗಿಕ ಅಲ್ಪಸಂಖ್ಯಾತರು ಮತ ಚಲಾಯಿಸಿ

**ಕೋಲಾರ:** ಲೈಂಗಿಕ ಅಲ್ಪಸಂಖ್ಯಾತರಾದ ಮಂಗಳ ಮುಖಿಯರು ನೈತಿಕ ಮತ ಚಲಾಯಿಸಿ ತಮ್ಮ ಜನಪ್ರತಿನಿಧಿಯನ್ನು ಆಯ್ಕೆ ಮಾಡುವಂತೆ ಕೋಲಾರ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಚಿಕ್ಕ ಸುಬ್ಬಯ್ಯ ಕರೆ ನೀಡಿದರು.

ಕೋಲಾರ ನಗರದಲ್ಲಿ ಗುರುವಾರ ಸ್ವೀಪ್ ಸಮಿತಿಯಿಂದ ಸ್ವೀಪ್ ಸಮಿತಿಯಿಂದ ಲೈಂಗಿಕ ಅಲ್ಪಸಂಖ್ಯಾತ ಮಂಗಳಮುಖಿಯವರಿಗೆ ಏರ್ಪಡಿಸಿದ್ದ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಲೈಂಗಿಕ ಅಲ್ಪಸಂಖ್ಯಾತರಲ್ಲಿ ಹಲವಾರು ಮಂದಿ ಸಮಾಜದ ಮುಖ್ಯ ವಾಹಿನಿಗೆ ಬಂದು ಸಾಧನೆ ಮಾಡಿದ್ದಾರೆ. ಹಲವಾರು ಮಂದಿ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಬದಲಾವಣೆ ಎಂಬುದು ಜಗದ ನಿಯಮವಾಗಿದೆ. ಲೈಂಗಿಕ ಅಲ್ಪಸಂಖ್ಯಾತರು ಆರ್ಥಿಕವಾಗಿ ಸಬಲರಾಗಲು ಹಲವಾರು ಸರ್ಕಾರದ ಯೋಜನೆಗಳಿವೆ. ಅವರಲ್ಲೂ ಪ್ರತಿಭಾವಂತರಿದ್ದಾರೆ. ಯಶಸ್ವಿ ಉದ್ದಿಮೆಗಳಾಗಿ ಇತರರಿಗೆ ಉದ್ಯೋಗ ನೀಡಿದ್ದಾರೆ. ಆದ್ದರಿಂದ ಲೈಂಗಿಕ ಅಲ್ಪಸಂಖ್ಯಾತರು ಬದಲಾವಣೆಯಾಗಿ ಆರ್ಥಿಕವಾಗಿ ಸಬಲರಾಗುವಂತೆ ಸಲಹೆ ನೀಡಿದರು.

ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾಧಿಕಾರಿ ಗೋವಿಂದಗೌಡ ಮಾತನಾಡಿ ಚುನಾವಣಾ ಆಯೋಗ ಲೈಂಗಿಕ ಅಲ್ಪಸಂಖ್ಯಾತರನ್ನು ಗುರ್ತಿಸಿ ಮತದಾನದ ಹಕ್ಕು ನೀಡಿದೆ. ಜಿಲ್ಲೆಯಾದ್ಯಂತ ಎರಡು ಸಾವಿರಕ್ಕೂ ಹೆಚ್ಚು ಮಂದಿ ಲೈಂಗಿಕ ಅಲ್ಪಸಂಖ್ಯಾತರನ್ನು ಗುರ್ತಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆ




ಮಾಡಲಾಗಿದೆ. ಯಾವುದೇ ಆಮಿಷ ಮತ್ತು ಒತ್ತಡಗಳಿಗೆ ಮಣಿಯದೆ ನಿರ್ಭೀತಿಯಿಂದ ಮತ ಚಲಾಯಿಸಿ ತಮ್ಮ ಪ್ರತಿನಿಧಿಯನ್ನು ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಜಾಥಾದಲ್ಲಿ ಪಾಲ್ಗೊಂಡು ಮಾತನಾಡಿದ ಲೈಂಗಿಕ ಅಲ್ಪಸಂಖ್ಯಾತರು ಈ ಹಿಂದೆ ನಾವು ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ವಲಸೆ ಹೋಗುತ್ತಿದ್ದೆವು. ನಮಗೆ ನಿರ್ಧಿಷ್ಟವಾದ ವಿಳಾಸವಿರಲಿಲ್ಲ. ಸರ್ಕಾರ ನಮ್ಮನ್ನು ಗುರ್ತಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿದೆ. ನಮಗೂ ಆಧಾರ್ ಕಾರ್ಡ್ ನೀಡಲಾಗಿದೆ. ನಾವೆಲ್ಲ ಮತದಾನದಲ್ಲಿ ಪಾಲ್ಗೊಂಡು ನೈತಿಕ ಮತ ಚಲಾಯಿಸುತ್ತೇವೆ ಎಂದು ತಿಳಿಸಿದರು.

ಜಾಥಾದಲ್ಲಿ ಐಸಿಇ ಸಮಾಲೋಚಕರಾದ ಜಗದೀಶ್, ಲೈಂಗಿಕ ಅಲ್ಪಸಂಖ್ಯಾತರ ಚುನಾವಣಾ ಐಕಾನ್ ಕಾಂತಾದೇವಿ, ಜಿಲ್ಲಾ ಪಂಚಾಯಿತಿ ಸಹಾಯಕ ಸಾಂಖ್ಯಿಕ ಅಧಿಕಾರಿ ಕೃಷ್ಣಮೂರ್ತಿ, ಜಗದೀಶ್ ಮುಂತಾದವರು ಪಾಲ್ಗೊಂಡಿದ್ದರು.

# ಸಂಸ್ಕೃತಿ ಉಳಿಸಿಕೊಳ್ಳಲು ಮತ್ತೊಮ್ಮೆ ಮೋದಿ ಗೆಲ್ಲಿಸಿ



**ಕೋಲಾರ :** ಈ ದೇಶದ ರಕ್ಷಣೆಗಾಗಿ ಮತ್ತು ಹಿಂದೂ ಧರ್ಮದವರ ಮೇಲಾಗುತ್ತಿರುವ ಕೆಲ ಅಲ್ಪಸಂಖ್ಯಾತ ಪುಂಡರ ಅಟ್ಟಹಾಸವನ್ನು ಮಟ್ಟಹಕಾಲು ಮೂರನೇ ಬಾರಿಯೂ ನರೇಂದ್ರ ಮೋದಿಯವರನ್ನು ಗೆಲ್ಲಿಸುವ ಸಲುವಾಗಿಮತ್ತು ಅವರ ಗೆಲುವಿಗೆ ಈ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಮಲ್ಲೇಶ್ ಬಾಬುರವರನ್ನು ಗೆಲ್ಲಿಸಬೇಕು ಎಂದು ಮಾಜಿ ಶಾಸಕ ಆರ್ ವರ್ತೂರ್ ಪ್ರಕಾಶ್ ಹೇಳಿದರು.

ನಗರದ ಗಲ್ ಪೇಟೆಯಲ್ಲಿ ಶುಕ್ರವಾರದಂದು ಹಮ್ಮಿಕೊಂಡಿದ್ದ 7ನೇ ವಾರ್ಡ್ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ ಕಳೆದ ವಿಧಾನ ಸಭೆ ಚುನಾವಣೆಯಲ್ಲಿ ಆದಂತಹ ತಪ್ಪುಗಳು ಈ ಚುನಾವಣೆಯಲ್ಲಿ ಆಗಬಾರದು. ನಮ್ಮಲ್ಲಿ ಯಾವುದೇ ರೀತಿಯ ಮನಸ್ಥಾಪಗಳಿದ್ದರು ಅವುಗಳನ್ನು ಪಕ್ಕಕ್ಕಿಟ್ಟು ಪಕ್ಷದಪರ ಕೆಲಸ ಮಾಡಬೇಕು. ಈ ದೇಶದ ಉಳಿವಿನ ಕೆಲಸ ನಾವು ಮಾಡಬೇಕಾಗಿದೆ. 60 ವರ್ಷದ ಕಾಂಗ್ರೆಸ್ ಸರ್ಕಾರ ಆಡಳಿತ ಶೂನ್ಯ. ಹಿಂದೂ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಬೇಕು ಎಂದು ಕರೆ ನೀಡಿದರು.

ನಂತರ ಸಮಾಜ ಸೇವಕ ಸಿಎಂರ್ ಶ್ರೀನಾಥ್ ಅವರು ಮಾತನಾಡಿ ಈ ಕಾಂಗ್ರೆಸ್ ಆಡಳಿತದಲ್ಲಿ ಇವತ್ತು ನಾವೆಲ್ಲರೂ ಸಂಕಷ್ಟದಲ್ಲಿದ್ದೇವೆ. ದುಷ್ಕೃತ್ಯಗಳು ನಡೆಯುತ್ತಿದೆ. ಅಲ್ಪಸಂಖ್ಯಾತರ ಒಲೈಕೆಯೇ ಇವೆಲ್ಲದಕ್ಕೂ ಮುಖ್ಯ ಕಾರಣ. ಹಾಗಾಗಿ ನಾವೆಲ್ಲರೂ ಈ ಭಾರಿ ಬಿಜೆಪಿ ಕೈ ಭಲಪಡಿಸಿ ದೇಶ ಧರ್ಮ ಉಳಿಸಿಕೊಳ್ಳಬೇಕು ಎಂದರು .

ಈ ಸಂದರ್ಭದಲ್ಲಿ ಮಂಜುನಾಥ್ ,ಶಶಿ,ಬೆಗ್ಲಿ ಪ್ರಕಾಶ್ ,ಮಾಯಂಡಿ ಮನೋಹರ್ ,ಜಾನಾರ್ದನ, ವೆಂಕಟೇಶ್ ಕೊಂಡಿ, ರವೀಂದ್ರ ಚಂದ್ರು ಸೂರ್ಯವಂಶಿ ,ರಾಜ್, ಪವನ್ ಕುಮಾರ್, ರಾಮಾಂಜಿ, ಲೋಕೇಶ್, ಮಧು, ಪೂಜಿ, ಅರಹಳ್ಳಿ ಅಶ್ವತ್, ಆಟೋ ಮುನಿರಾಜು, ಉಮಿ, ಡಿಶ್ ಶಂಕರ್, ಮರುತಿ, ಮೆಡಿಕಲ್ ವೆಂಕಟೇಶ್, ಹೂ ಸೂರಿ, ಬಾಬು, ರುಕ್ ಮಾಂಗದ ಸೇರಿದಂತೆ ಇತರರು ಇದ್ದರು.

# ಬೇಲೂರು ಚನ್ನಿಗನ ಭಗಳಿಗೆ ರಥೋತ್ಸವ



ವಿಶ್ವವಿಖ್ಯಾತ ಬೇಲೂರು ಚನ್ನಕೇಶವಸ್ವಾಮಿ ದೇವರ ಬ್ರಹ್ಮ ರಥೋತ್ಸವು ವಿಜೃಂಭಣೆಯಿಂದ ಜರುಗಿತು. ರಥೋತ್ಸವಕ್ಕೆ ಪೂರಕವಾಗಿ ಯುಗಾದಿ ಹಬ್ಬದ ದಿನದಿಂದಲೇ ವಿವಿಧ ಉತ್ಸವಗಳು ನಡೆದುಕೊಂಡು ಬಂದಿತ್ತು. ಇಂದು ಬೆಳಿಗ್ಗೆ ದೇವರ ಉತ್ಸವ ನಡೆದು ದೇಗುಲದ ಜಗುಲಿ ಮೇಲೆ ನಿರ್ಮಿಸಿದ್ದ ವೇದಿಕೆ ಮೇಲೆ ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ದೇವರನ್ನು ರಥದ ಮೇಲೆ ಪ್ರತಿಷ್ಠಾಪಿಸಲಾಯಿತು. ಬೆಳಿಗ್ಗೆ 10-45 ರಿಂದ 11-15 ಗಂಟೆಯೊಳಗೆ ರಥವನ್ನು ಸ್ವಸ್ಥಾನದಿಂದ ಭ್ರಮ್ಮಾಸುರ ಮೂಲೆಯವರಗೆ ಸಾವಿರಾರು ಭಕ್ತರ ಹರ್ಷೋದ್ಘಾರದೊಂದಿಗೆ ಎಳೆದು ನಿಲ್ಲಿಸಲಾಯಿತು.

ರಥ ಎಳೆಯುವ ಮುನ್ನ ಸಂಪ್ರದಾಯದಂತೆ ದೊಡ್ಡಮೇದೂರಿನ ಸಯ್ಯದ್ ಭಾಷಾ ಖಾದ್ರಿ ಅವರು ದೇಗುಲದೊಳಗೆ ಕಲ್ಯಾಣಿ ಬಳಿ ವಿಶ್ವದಲ್ಲಿ ಶಾಂತಿನೆಲಸಲಿ, ದೇಶದಲ್ಲಿ ಮಳೆ, ಬೆಳೆ ಸಮೃದ್ಧಿಯಾಗಿಲಿ ಎಂದು ಪ್ರಾರ್ಥಿಸಿದರು. ಸಾವಿರಾರು ಭಕ್ತರು ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ವಿಶೇಷ ದರ್ಶನಕ್ಕೂ ವ್ಯವಸ್ಥೆ ಮಾಡಲಾಗಿತ್ತು. ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ವಾಹನ ಸಂಚಾರ, ನಿಲುಗಡೆ, ಸಿಸಿ ಕ್ಯಾಮರಾ ಅಳವಡಿಕೆ ಸೇರಿದಂತೆ ಎಲ್ಲಾ ರೀತಿಯ ಮುಂಜಾಗೃತಾ ಕ್ರಮ ಕೈಗೊಂಡಿದ್ದರು. ಭದ್ರತಾ ವ್ಯವಸ್ಥೆ ಮಾಡಲಾಗಿತ್ತು. ದೇಗುಲದ ಆಗಮಿಕ ಅರ್ಚಕರಾದ ಶ್ರೀನಿವಾಸಭಟ್ಟರ್, ನರಸಿಂಹಪ್ರಿಯಾಭಟ್ಟರ್ ತಂಡ ಪೂಜಾ ಕೈಂಕರ್ಯ ನಡೆಸಿಕೊಟ್ಟರು. ಶಾಸಕ ಹೆಚ್.ಕೆ.ಸುರೇಶ್, ಹೆಚ್.ಡಿ.ರೇವಣ್ಣ, ಸಂಸದ ಪ್ರಜ್ವಲ್‌ರೇವಣ್ಣ, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್‌ನಾಗೇಂದ್ರ, ಸೇರಿದಂತೆ ಹಲವು ಪ್ರಮುಖರು ರಥೋತ್ಸವಕ್ಕೆ ಆಗಮಿಸಿ ದೇವರ ದರ್ಶನ ಪಡೆದರು. ದೇಗುಲದ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ಡಾ.ನಾರಾಯಣಸ್ವಾಮಿ ಹಾಗೂ ಸದಸ್ಯರು, ದೇಗುಲದ ದೇಗುಲದ ಕಾರ್ಯನಿರ್ವಾಹಕಾಧಿಕಾರಿ ಯೋಗೇಶ್ ಎಲ್ಲಾ ವ್ಯವಸ್ಥೆ ನೋಡಿಕೊಂಡರು. ರಥೋತ್ಸವದ ಅಂಗವಾಗಿ ಪಟ್ಟಣದಾದ್ಯಂತ ವಿದ್ಯುತ್ ಅಲಂಕಾರ ಮಾಡಲಾಗಿತ್ತು. ಹೊಟೇಲ್, ಅಂಗಡಿ ಇತ್ಯಾದಿಗಳ ಮೇಲೆ ಖಾಸಗಿಯಾಗಿ ವರ್ತಕರು ದೀಪಾಲಂಕಾರ ಮಾಡಿದ್ದರು. ವಿವಿಧ ಸಂಘ ಸಂಸ್ಥೆಯವರು, ಎಸ್‌ಬಿಐ ಬ್ಯಾಂಕು ಸೇರಿದಂತೆ ಹಲವರು ಪಾನ, ಮಜ್ಜಿಗೆ, ಕೋಸಂಬರಿ, ಪ್ರಸಾದವನ್ನು ವಿತರಿಸಿದರು. ದೇಗುಲದ ಮುಂಭಾಗದಿಂದಲೇ ರಸ್ತೆಬದಿ ವ್ಯಾಪಾರಕ್ಕೆ ಅವಕಾಶ ಕಲ್ಪಿಸಿದ್ದರಿಂದ ದೇಗುಲದ ರಸ್ತೆಯ ಎರಡೂ ಕಡೆ ವ್ಯಾಪಾರ ವಹಿವಾಟು ನಡೆಯಿತು. ನಾಳೆ ನಾಡರಥ ಮಧ್ಯಾಹ್ನ 2 ಗಂಟೆಗೆ ಆರಂಭಗೊಳ್ಳಲಿದ್ದು ದೇಗುಲದ ಸುತ್ತ ಎಳೆದು ತಂದು ಸ್ವಸ್ಥಾನದಲ್ಲಿ ನಿಲ್ಲಿಸಲಾಗುವುದು. ನಾಡಗೌಡರು ರಥೋತ್ಸವ ನಡೆಸಿಕೊಡುವರು.



ತಿಪಟೂರು ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳಾದ ಸಪ್ತಶ್ರೀ ಬಿ ಕೆ ರವರು ತಿಪಟೂರು ವಿಧಾನಸಭಾ ಕ್ಷೇತ್ರದ ವಿವಿಧ ಚೆಕ್ ಪೋಸ್ಟ್ ಗಳಿಗೆ ಭೇಟಿ ನೀಡಿ ಎಸ್‌ಎಸ್‌ಟಿ ತಂಡಗಳಿಗೆ ನಿಯಮಾನುಸಾರ ಪ್ರತಿಯೊಂದು ವಾಹನಗಳನ್ನು ಪರಿಶೀಲಿಸಲು ಹಾಗೂ ಸೂಕ್ತ ಕ್ರಮ ಜರುಗಿಸಲು ಸೂಚಿಸಿದರು.

## ಬಿಜೆಪಿ ಸಂವಿಧಾನ ಬದಲಾವಣೆ ಮಾಡಲು ತಯಾರಿ ನಡೆಸುತ್ತಿದೆ

**ಕೊಳ್ಳೇಗಾಲ:** ಪ್ರಸ್ತುತ ದೇಶ ಅಪಾಯದಲ್ಲಿದ್ದು ಬಿಜೆಪಿ ಸಂವಿಧಾನ ಬದಲಾವಣೆ ಮಾಡಲು ತಯಾರಿ ನಡೆಸುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು. ಹನೂರು ಕ್ಷೇತ್ರದ ವ್ಯಾಪ್ತಿಯ ಮದುವನಹಳ್ಳಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಗ್ರಾ.ಪಂ ವ್ಯಾಪ್ತಿಯ ಮತದಾರರಲ್ಲಿ ಮತಪ್ರಚಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬಿಜೆಪಿಯವರು ಸಂವಿಧಾನ ಬದಲಾವಣೆ ಮಾಡಲು ಹೊರಟಿದ್ದಾರೆ. ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸಂವಿಧಾನ ಮಹತ್ವ ಮತ್ತು ಜಾಗೃತಿಯನ್ನು ಮೂಡಿಸಲು ಸಂವಿಧಾನ ರಾಜ್ಯಾದ್ಯಂತ ಸಂವಿಧಾನ ರಥಯಾತ್ರೆಯನ್ನು ಕೈಗೊಂಡಿತು. ಸಂವಿಧಾನದ ಆಶಯಗಳ ಮೇಲೆ ಇಂದು 5 ಗ್ಯಾರಂಟಿಗಳನ್ನು ಜಾರಿಗೆ ತರಲಾಗಿದೆ. ಸಂವಿಧಾನ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಆದ್ದರಿಂದ ಕ್ಷೇತ್ರದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಸುನೀಲ್ ಬೋಸ್ ಅವರನ್ನು ಹೆಚ್ಚಿನ ಮತಗಳಿಂದ ಜಯಶೀಲರನ್ನಾಗಿ ಮಾಡಿ ಎಂದು ಮನವಿ ಮಾಡಿದರು. ಮಾಜಿ ಶಾಸಕ ಆರ್. ನರೇಂದ್ರ ಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ಘೋಷಿಸಿದ ಗ್ಯಾರೆಂಟಿ ಯೋಜನೆಗಳಂತೆ ಕೇಂದ್ರದ ಕಾಂಗ್ರೆಸ್ ಸರ್ಕಾರ ಗ್ಯಾರೆಂಟಿ ಕಾರ್ಡ್‌ಗಳನ್ನು ಈಗಾಗಲೇ ಬಿಡುಗಡೆ ಮಾಡಿದೆ. ಜೆಡಿಎಸ್ ಬಿಜೆಪಿ ಮೈತ್ರಿಯಾಗಿ ಚುನಾವಣೆ ಎದುರಿಸುತ್ತಿವೆ. ಮೋದಿ 10 ವರ್ಷಗಳ ಅವಧಿಯಲ್ಲಿ ಯಾವುದೇ ಜನಪರ ಕಾರ್ಯಕ್ರಮಗಳನ್ನು ನೀಡಿಲ್ಲ. ಈಗಾಗಲೇ ರಾಜ್ಯದಲ್ಲಿ ಜಾರಿಯಲ್ಲಿರುವ ಗ್ಯಾರಂಟಿ ಯೋಜನೆಗಳು ಇನ್ನೂ ನಾಲ್ಕು ವರ್ಷಗಳು ಮುಂದುವರೆಯಲಿದೆ ಎಂದರು.
ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ ಮಾತನಾಡಿ, ಬಿಜೆಪಿ ಕೇವಲ ನರೇಂದ್ರ ಮೋದಿಯವರನ್ನು ನೆಚ್ಚಿಕೊಂಡಿದೆ. ಇನ್ನುಳಿದ ಸಚಿವರು, ಶಾಸಕರು ನಗಣ್ಯರಾಗಿದ್ದಾರೆ ಒಂದು ಕೈಯಿಂದ ಚಪ್ಪಾಳೆ ಅಸಾಧ್ಯ. 10 ವರ್ಷಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ. ರಾಮಮಂದಿರ ಉದ್ಘಾಟನೆ, ನೂತನ ಸಂಸತ್ ಭವನ ಉದ್ಘಾಟನೆ ರಾಷ್ಟ್ರಪತಿಯವರಿಗೆ ಆಹ್ವಾನವಿಲ್ಲ. ಕಾಂಗ್ರೆಸ್ ಸರ್ಕಾರ, ವಿಧವೆ ವೇತನ, ವಿಶೇಷ ಚೇತನರ ವೇತನ, ಉಳುವವನೇ ಭೂ ಒಡೆಯ ಮುಂತಾದ 20 ಅಂಶಗಳ ಕಾರ್ಯಕ್ರಮವನ್ನು ಕೊಟ್ಟಿದೆ ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಕಾಂಗ್ರೆಸ್ ಮುಖಂಡರಾದ ನಂಜುಂಡಸ್ವಾಮಿ ,ವಾಲೆಮಾದೇವ ಮದುವನ ಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾದ ಸಿದ್ದಪ್ಪ . ಮಧುವನಹಳ್ಳಿ ಶಿವಕುಮಾರ್ ಬಟ್ ಹಾಗು ಮುಖಂಡರು ಗಳು ಸೇರಿದಂತೆ ಇತರರಿದ್ದರು.



## ನಾಯಕ ಸಮುದಾಯ ಬಿಜೆಪಿ ಬೆಂಬಲಿಸಲು ಅಪ್ಪಣ ಮನವಿ

**ಚಾಮರಾಜನಗರ:** ನಾಯಕ ಜನಾಂಗದ ಪರ್ಯಾಯ ಪದಗಳಾದ ಪರಿವಾರ, ತಳವಾರವನ್ನು ಪರಿಶಿಷ್ಠ ಪಂಗಡಕ್ಕೆ ಸೇರಿಸಲು ಬಿಜೆಪಿ ಕೊಡುಗೆ ಅಪಾರವಾಗಿದೆ ಆಗಾಗಿ ಈ ಚುನಾವಣೆಯಲ್ಲಿ ನಾಯಕ ಸಮುದಾಯ ಬಿಜೆಪಿ ಬೆಂಬಲಿಸುವ ಮೂಲಕ ಸಮಾಜ ಋಣವನ್ನು ತೀರಿಸುವ ಕೆಸಲವನ್ನು ಮಾಡಬೇಕು ಎಂದು ಸಮುದಾಯದವರಲ್ಲಿ ಜಂಗಲ್ ಲಾಡ್ಜ್ ಮಾಜಿ ಅಧ್ಯಕ್ಷರು, ಬಿಜೆಪಿ ಮುಖಂಡ ಅಪ್ಪಣ್ಣ ಮನವಿ ಮಾಡಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ನಾಯಕ ಸಮುದಾಯ ಕೊಟ್ಟ ಮಾತು. ಇಟ್ಟ ಗುರಿಯನ್ನು ಯಾವತ್ತು ತಪ್ಪಿಲ್ಲ. ಮದಕರಿನಾಯಕರ ಕಾಲದಿಂದಲ್ಲೂ ಮುಂದೆಯೂ ಕೂಡ ನಮಗೆ ಸಹಾಯ ಮಾಡಿದವರ ಋಣ ಸ್ಮರಣೆ ಮಾಡಿಕೊಳ್ಳುವುದು ಸಮಾಜ ಕೆಲಸವಾಗಿದೆ. ಸಮಾಜದ ಸುಮಾರು 40 ವರ್ಷಗಳ ಜ್ವಲಂತ ಸಮಸ್ಯೆಯಾಗಿದೆ ಪರಿವಾರ, ತಳವಾರವನ್ನು ಪರಿಶಿಷ್ಠ ಪಂಗಡಕ್ಕೆ ಸೇರಿದೆ ಅಲ್ಲದೆ ಮೀಸಲಾತಿ ಹೆಚ್ಚಳ, ಶ್ರೀವಾಲ್ಮೀಕಿ ಜಯಂತಿಯನ್ನು ಸರ್ಕಾರವೇ ಆಚರಣೆ ಮಾಡುವಂತೆ ಮಾಡಿದ್ದಾರೆ. ಸಮುದಾಯ ಅಭಿವೃದ್ಧಿ ದೃಷ್ಠಿಯಿಂದ ಪ್ರತ್ಯೇಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡುವ ಮೂಲಕ ಬಿಜೆಪಿ ಸಮುದಾಯ ಅಪಾರ ಕೊಡುಗೆ ನೀಡಿದೆ ಎಂದರು. ಎನ್‌ಡಿಎ ಸರ್ಕಾರದಲ್ಲಿ ಚಂದ್ರಶೇಖರ್ ಅವರು ಮಾಜಿ ಪ್ರಧಾನಿಯಾಗಿದ್ದಾಗ ಎಚ್ .ಡಿ.ದೇವೇಗೌಡರವರಿಂದ ಆದೇಶ ಹೊರಡಿಸುತ್ತಾರೆ. ಸಮುದಾಯ ಶಿಕ್ಷಣ, ಉದ್ಯೋಗಕ್ಕಾಗಿ ಆದರೆ ಅಧಿಕೃತವಾಗಿ ಘೋಷಣೆ ಆಗಿರಲಿಲ್ಲ. ವಾಜಪೇಯಿ ಅವರ ಸರ್ಕಾರದಲ್ಲಿ ಪ್ರಯತ್ನ ಮಾಡಲಾಗಿತ್ತು ಆಗಿರಲಿಲ್ಲ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಡಿ.ವಿ.ಸದಾನಂದಗೌಡರು, ಸಂಸದರಾದ ಪ್ರತಾಪ್‌ಸಿಂಹ, ಅನಂತಕುಮಾರ್, ಶ್ರೀನಿವಾಸಪ್ರಸಾದ್ ಹಾಗೂ ಸಮುದಾಯದ ಮುಖಂಡರ ಪರಿಶ್ರಮದಿಂದ ಪ್ರಧಾನಿ ನರೇಂದ್ರಮೋದಿ ನೇತೃತ್ವದ ಸರ್ಕಾರ ಪರಿವಾರ, ತಳವಾರ ಪರಿಶಿಷ್ಠ ಪಂಗಡಕ್ಕೆ ಸೇರ್ಪಡೆಯಾಗಿದೆ. ಕಾಂಗ್ರೆಸ್ ಸಮುದಾಯಕ್ಕೆ ಏನು ಮಾಡದೆ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದೆ ಎಂದು ಆಪಾದಿಸಿದರು.

## ವಹ್ನಿಕುಲ ಸಮುದಾಯಕ್ಕೆ ಅವಮಾನ

**ಬೆಂಗಳೂರು:** ವಹ್ನಿಕುಲ ಸಮುದಾಯದ ನಾಯಕರನ್ನು ಡಾ.ಕೆ.ಸುಧಾಕರ್ ತುಳಿಯುವ ಕೆಲಸ ಮಾಡುತ್ತಿದ್ದು, ಈ ಮೂಲಕ ಸಮುದಾಯದ ಜನತೆಗೆ ಅನ್ಯಾಯವೆಸಗುತ್ತಿದ್ದಾರೆಂದು ಕರ್ನಾಟಕ ರಾಜ್ಯ ತಿಗಳರ (ವಹ್ನಿಕುಲ ಕ್ಷತ್ರಿಯರ) ಸಂಘ ಆಕ್ರೋಶ ವ್ಯಕ್ತಪಡಿಸಿದೆ.

ಯಲಹಂಕದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವಹ್ನಿಕುಲ ಸಮಾಜದ ಸಮಾವೇಶದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಡಾ.ಕೆ. ಸುಧಾಕರ್ ವಿರುದ್ಧ ದೂರಿನ ಸುರಿಮಳೆ ಸುರಿಸಿದರು. ಕರ್ನಾಟಕ ರಾಜ್ಯ ವಹ್ನಿಕುಲ ಕ್ಷತ್ರಿಯರ ಸಂಘದ ರಾಜ್ಯಾಧ್ಯಕ್ಷ ಮು.ಕೃಷ್ಣಮೂರ್ತಿ ಮಾತನಾಡಿ, ರಾಜ್ಯದಲ್ಲಿ 40 ಲಕ್ಷ ನಮ್ಮ ಜಂನಾಗದವರಿದ್ದಾರೆ. ಗ್ರಾ.ಪಂ. ನಗರ ಸಭೆ, ಬಿಬಿಎಂಪಿಗೆ ಸೀಮಿತವಾಗಿದ್ದಾರೆ. ಆದರೆ, ಸಮುದಾಯದಿಂದ ಒಬ್ಬರೂ ಶಾಸಕರಾಗಿಲ್ಲ. ನಮ್ಮ ಸಮುದಾಯದ ಮುಖಂಡರು ಬೆಳೆಯ ಹೊರಟರೆ ತುಳಿಯುವ ಕೆಲಸ ಮಾಡುತ್ತಿರುವುದು ವಿಷಾಧನೀಯ ಎಂದು ಹೇಳಿದರು.

ಸಂಘದ ಮಾಜಿ ಅಧ್ಯಕ್ಷ ಮಾತನಾಡಿ, ಸಿ.ಜಯರಾಜ್ ಮಾತನಾಡಿ, ವಿಧಾನಸಭೆ ಚುನಾವಣೆಯಲ್ಲಿ ಮಾಲೂರು ವಿಧಾನಸಭಾ ಕ್ಷೇತ್ರದಿಂದ ಹೂಡಿ ವಿಜಯ್ ಕುಮಾರ್ ಅವರಿಗೆ ಟಿಕೆಟ್ ನೀಡಬೇಕೆಂದು ಕೇಳಲು ಹೋದ ಸಂದರ್ಭದಲ್ಲಿ ಡಾ.ಕೆ ಸುಧಾಕರ್ ಅವರ ಪೆರೆಸಂದ್ರ ನಿವಾಸದ ಬಳಿ ಸಮುದಾಯದ ಮುಖಂಡರು, ಸ್ವಾಮೀಜೀಗಳನ್ನು ಒಳಗೆ ಕರೆಯುವ ಸೌಜನ್ಯವನ್ನು ತೋರಿಸದೆ ಅವಮರ್ಯಾದೆ ಮಾಡಿ ಕಳುಹಿಸಿದ್ದರು. ಜೊತೆಗೆ, ಬಿಜೆಪಿ ಟಿಕೆಟ್ ಕೈತಪ್ಪುವಲ್ಲಿ ಮಹತ್ತರದ ಪಾತ್ರ ವಹಿಸಿದ್ದರು ಎಂದು ಆರೋಪಿಸಿದರು.ಪಕ್ಷೇತರ ಅಭ್ಯರ್ಥಿಯಾಗಿ ಕೆಲವೇ ಮತಗಳ ಅಂತರದಿಂದ ಪರಾಭವಗೊಂಡಿದ್ದರು.ಇದೀಗ, ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯರಾಗಿದ್ದಾರೆ. ಇವರ ಕಾರ್ಯಚಟುವಟಿಕೆ ಕಂಡು ಬಿಜೆಪಿ ಸೇರಬೇಕು ಎಂಬುದು ಸಮುದಾಯದವರ ಆಆಶಯವಾಗಿತ್ತು.ಈ ಸಂಬಂಧ ರಾಜ್ಯಾಧ್ಯಕ್ಷ ವಿಜಯೇಂದ್ರರವರು ಹೂಡಿ ವಿಜಯ್ ಕುಮಾರ್ ಅವರನ್ನು ಪಕ್ಷಕ್ಕೆ ಸೇರಿಸಿಕೊಳ್ಳುವ ಸಲುವಾಗಿ ಏ.10ರಂದು ಕಾರ್ಯಕ್ರಮ ನಿಗಧಿಯಾಗಿತ್ತು. ಆದರೆ, ಹುನ್ನಾರ ನಡೆಸಿ ಪಕ್ಷಕ್ಕೆ ಸೇರ್ಪಡೆಯಾಗದಂತೆ ತಡೆದಿದ್ದಾರೆ. ನಮ್ಮ ನಾಯಕನ್ನು ತುಳಿಯುವ ಮೂಲಕ ಇಡೀ ವಹ್ನಿಕುಲ ಸಮುದಾಯಕ್ಕೆ ಅವಮಾನ ಮಾಡಿದ್ದಾರೆ ಅಸಮಾಧಾನ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಯಾವುದೇ ರಾಜಕೀಯ ಪಕ್ಷಗಳು ನಮ್ಮ ಸಮುದಾಯದ ಮುಖಂಡರಿಗೆ ಆದ್ಯತೆ ನೀಡಬೇಕು. ಇಲ್ಲವಾದಲ್ಲಿ ವಹ್ನಿಕುಲ ಸಮುದಾಯ ಚುನಾವಣೆಯಲ್ಲಿ ತಕ್ಕಪಾಠ ಕಲಿಸಲಿದ್ದೇವೆ ಎಂದು ಒಕ್ಕೊರಲಿನಿಂದ ಹೇಳಿದರು.

ಕಾರ್ಯಕ್ರಮದಲ್ಲಿ ದೇವನಹಳ್ಳಿ ಆದಿಶಕ್ತಿ ದ್ರೌಪತಮ್ಮ ಗುರುಪೀಠದ ಮಂಜುನಾಥ ಸ್ವಾಮೀಜೀ, ಸಂಘದ ಮುನಿತಾಯಪ್ಪ, ನಾಗಾರ್ಜುನ, ನಾರಾಯಣಸ್ವಾಮಿ ಎಂ.ಡಿ, ಗೋವಿಂದರಾಜು, ಚಿನ್ನಸ್ವಾಮಿಗೌಡರು, ಜಗದೀಶ್ ಮುದ್ದಣ್ಣ, ವೈಸಿ ವೆಂಕಟೇಶ್, ಕೊಂಡಶೆಟ್ಟಿಹಳ್ಳಿ ಬಾಬು ಸೇರಿ ಇನ್ನಿತರ ಮುಖಂಡರಿದ್ದರು.

### ನಾಗೇಂದ್ರ ಬಾಬು ಕುಮಾರ್ ಅಭಿಮತ

## ಸಾಧನೆಗೆ ಪೋಷಕರ ಪಾತ್ರ ಮಹತ್ವದ್ದು

**ಕೋಲಾರ:** ಪ್ರತಿಯೊಬ್ಬರ ಸಾಧನೆಗೆ ಪೋಷಕರ ಪಾತ್ರ ಮಹತ್ವದ್ದು. ಅವರೇ ನಮ್ಮ ಸಾಧನೆಗೆ ಪ್ರೇರಣೆ ಎಂದು ಯುಪಿಎಸ್ಸಿಯಲ್ಲಿ 160ನೇ ರ್‍ಯಾಂಕ್ ಪಡೆದಿರುವ ನಾಗೇಂದ್ರ ಬಾಬು ಕುಮಾರ್ ತಿಳಿಸಿದರು.

ನಗರದ ಹೊರವಲಯದ ಸಹ್ಯಾದ್ರಿ ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಸಾಧಕರ ಸಮ್ಮಿಲನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಹಣ ಕಳೆದುಕೊಂಡರೆ ಏನೂ ಸಮಸ್ಯೆ ಇಲ್ಲ. ವಾಪಸ್ ಪಡೆಯಬಹುದು. ಆರೋಗ್ಯ ಕಳೆದುಕೊಂಡರೆ ಏನೋ ಸ್ವಲ್ಪ ಕಳೆದುಕೊಂಡಂತೆ. ಆದರೆ, ಚಾರಿತ್ರ್ಯ ಕಳೆದುಕೊಂಡರೆ ಎಲ್ಲವನ್ನೂ ಕಳೆದುಕೊಂಡಂತೆ ಎಂಬ ಪ್ರಸಿದ್ಧ ತತ್ವಜ್ಞಾನಿಯ ಮಾತು ನೆನಪಿಸಿಕೊಂಡು ಬದುಕುಬೇಕು ಎಂದರು. ನಾನು ವೈದ್ಯರಾಗಬೇಕೆಂಬ ಆಸೆ ತಂದೆಯದ್ದಾಗಿತ್ತು. ಆದರೆ, ನನಗೆ ಐಎಎಸ್ ಆಗಬೇಕೆಂಬ ಆಸೆ ಇತ್ತು. ಪಿಯುಸಿ ಬಳಿಕ ಎಂಜಿನಿಯರ್ ಮಾಡಿದೆ. ಡಿ.ಕೆ.ರವಿ ಕಾರ್ಯವೈಖರಿ ನನ್ನನ್ನು ಮತ್ತಷ್ಟು ಉತ್ತೇಜಿಸಿತು. ಜಿಲ್ಲೆಯಲ್ಲಿ ಐಎಎಸ್ ಅಧಿಕಾರಿಯಾಗಿದ್ದ ಮನೋಜ್ ಕುಮಾರ್ ಮೀನಾ, ಸೆಲ್ವಮಣಿ ಅವರೆಲ್ಲಾ ನನಗೆ ಸ್ಫೂರ್ತಿ' ಎಂದು ಹೇಳಿದರು.

ನಮ್ಮ ಸಾಧನೆ ಹಾದಿಯಲ್ಲಿ ಸ್ವಲ್ಪ ಜನ ಸಹಕಾರ ನೀಡುತ್ತಾರೆ. ಕೆಲವರು ಕಾಲು ಎಳೆಯುತ್ತಾರೆ. ಅದನ್ನು ಸವಾಲಾಗಿ ಸ್ವೀಕರಿಸಬೇಕು. ಅವರನ್ನು ಶತ್ರು ಎಂದು ಪರಿಗಣಿಸಬಾರದು ಎಂದು ನುಡಿದರು.

ಕಾಲೇಜಿನ ಅಧ್ಯಕ್ಷ ಎಂ.ಉದಯಕುಮಾರ್ ಮಾತನಾಡಿ, ಪ್ರತಿ ಬಾರಿ ಕಾಲೇಜಿನ



ವಾರ್ಷಿಕೋತ್ಸವದಲ್ಲಿ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸುತ್ತಿದ್ದೆವು. ಈ ಬಾರಿ ಫಲಿತಾಂಶ ಬಂದ ತಕ್ಷಣ ಸನ್ಮಾನಿಸುತ್ತಿದ್ದೇವೆ. ನಮ್ಮ ಸಂಸ್ಥೆಯ ವಿದ್ಯಾರ್ಥಿ ನಾಗೇಂದ್ರ ಬಾಬು ಕುಮಾರ್ ರ್‍ಯಾಂಕ್ ಬಂದಿದ್ದಾರೆ. ಇದು ನಮಗೂ ಹೆಮ್ಮೆ. ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬುವಂಥದ್ದು' ಎಂದರು. ಕೋವಿಡ್ ಬಳಿಕ ಶಿಕ್ಷಣ ವ್ಯವಸ್ಥೆಯಲ್ಲಿ ದೊಡ್ಡ ಸವಾಲು ಎದುರಾಯಿತು. ಆದರೆ, ಪೋಷಕರ ಸಹಕಾರದಿಂದ ಬೇಗನೇ ಚೇತರಿಸಿಕೊಂಡು ಸಾಧನೆ ಮಾಡಲು ಸಾಧ್ಯವಾಯಿತು ಎಂದು ಹೇಳಿದರು.

ರಾಜಕಾರಣಿಗೆ ಐದು ವರ್ಷಕ್ಕೊಮ್ಮೆ ಪರೀಕ್ಷೆ ಎದುರಾಗುತ್ತದೆ, ನವೀಕರಣ ಮಾಡಿಸಿಕೊಳ್ಳುತ್ತಿರಬೇಕು. ಆದರೆ, ಯುಪಿಎಸ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದರೆ 30 ರಿಂದ 40 ವರ್ಷ ಸೇವೆ ಸಲ್ಲಿಸಬಹುದು' ಎಂದರು.

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ಮಾತನಾಡಿ, ಕೋಲಾರದಲ್ಲಿ ಸದಾ ಬರಗಾಲ. ಕೊಚ್ಚೆ ನೀರು ಹರಿಸಲಾಗುತ್ತಿದ್ದು, ಅದರಲ್ಲೇ ಬದುಕುವ ಕಾಲ ಬಂದಿದೆ. ಆದರೆ, ರೈತರು ಪರಿಶ್ರಮಿಗಳು. ಬೇರೆ ಕಡೆ ಆತ್ಮಹತ್ಯೆ ಮಾಡಿಕೊಂಡರೂ ಇಲ್ಲಿ ಧೈರ್ಯದಿಂದ ಬದುಕುತ್ತಿದ್ದಾರೆ. ವಿದ್ಯಾರ್ಥಿಗಳು ಸಾಧನೆ ಮಾಡುತ್ತಿದ್ದಾರೆ ಎಂದರು.

ನಾಗೇಂದ್ರ ಅವರನ್ನು ವೈದ್ಯರನ್ನಾಗಿ ಮಾಡಬೇಕೆಂಬ ಆಸೆಯನ್ನು ತಂದೆ ಹೊಂದಿದ್ದರು. ಆದರೆ, ಮಗ ಈಗ ಇಡೀ ಸಮಾಜಕ್ಕೆ ಚಿಕಿತ್ಸೆ ನೀಡುವ ವೈದ್ಯರಾಗಿದ್ದಾರೆ' ಎಂದು ಹೇಳಿದರು.

ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾಲೇಜಿನ ಕಾರ್ಯದರ್ಶಿ ಕುಲಕರ್ಣಿ, ಪ್ರಾಂಶುಪಾಲ ರವಿಕುಮಾರ್, ಉಪಾಧ್ಯಕ್ಷ ಮಾರುತಿ, ಬದರೀನಾಥ್, ವಿನಯ್, ನಾಗೇಂದ್ರ ಬಾಬು, ಪೋಷಕರಾದ ಟಿ.ಎನ್ .ನಾರಾಯಣಪ್ಪ, ಸುನಂದಮ್ಮ, ಚಿಕ್ಕಮ್ಮ ಪದ್ಮಾ ಹಾಗೂ ವಿದ್ಯಾರ್ಥಿಗಳು ಇದ್ದರು.



ತುಮಕೂರಿನ ಸಿದ್ದಗಂಗಾ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಪರಮೇಶ್ವರ್ ಪ್ರಧಾನಿ ನರೇಂದ್ರಮೋದಿಯವರ ವಿಕಸಿತ ಭಾರತ ಸಂಕಲ್ಪಕ್ಕೆ ಅನುಗುಣವಾಗಿ ತಿಪಟೂರು ನಗರದ ವೈದ್ಯರನ್ನು ಭೇಟಿ ಮಾಡಿ ಎನ್.ಡಿ.ಎ ಅಭ್ಯರ್ಥಿ ವಿ.ಸೋಮಣ್ಣನವರ ಪರವಾಗಿ ಮತಯಾಚನೆ ಮಾಡಿದರು. ಇದೆ ಸಂದರ್ಭದಲ್ಲಿ ಬಿಜೆಪಿಯ ಮಾಜಿ ನಗರಸಭಾ ಸದಸ್ಯ ಪ್ರಸನ್ನ ಕುಮಾರ್, ಟಿಹೆಚ್‌ಎಸ್ ಆಸ್ಪತ್ರೆ ಡಾ.ಸುರೇಶ್ ಬಾಬು, ಡಾ.ನರಸಿಂಹಮೂರ್ತಿ, ಡಾ ಪ್ರಕಾಶ್, ಜನತಾ ಮೆಡಿಕಲ್ ಬಸವರಾಜ್, ಮುಖಂಡರಾದ ಕಾಂತರಾಜ್ ಹಾಜರಿದ್ದರು.

## ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಪರ ಮರಿಸ್ವಾಮಿ ಮತಯಾಚನೆ

**ಚಾಮರಾಜನಗರ:** ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ತಾಲ್ಲೂಕಿನ ಕಾಳನಹುಂಡಿ, ವೀರನಪುರ ಹಾಗೂ ವಿವಿಧಗ್ರಾಮಗಳಲ್ಲಿ ಚಾಮರಾಜನಗರ ಲೋಕಸಭೆ ಕ್ಷೇತ್ರದ ಅಭ್ಯರ್ಥಿ ಸುನಿಲ್ ಬೋಸ್ ಪರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ,ಮರಿಸ್ವಾಮಿ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮತಯಾಚನೆ ಮಾಡಿದರು.

ಕಾಡಾ ಅಧ್ಯಕ್ಷ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ,ಮರಿಸ್ವಾಮಿ ಮತಯಾಚಿಸಿದ ಮಾತನಾಡಿದ ಅವರು ಬಿಜೆಪಿ ಸರ್ಕಾರದ ಸುಳ್ಳುಭರವಸೆಗಳಿಗೆ ಮತದಾರರು ಮರುಳಾಗದೇ, 5ಗ್ಯಾರಂಟಿ ಅನುಷ್ಠಾನ ಮಾಡಿರುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಗೆ ಮತನೀಡುವ ಮೂಲಕ ಸಿದ್ದರಾಮಯ್ಯ ಹಾಗೂ ಕ್ಷೇತ್ರದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರ ಕೈಬಲಪಡಿಸಬೇಕು ಎಂದು ಮನವಿ ಮಾಡಿದರು.

ಗ್ರಾಮಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಎಸ್ ಗುರುಸ್ವಾಮಿ, ಮಾತನಾಡಿ ರಾಜ್ಯಕಾಂಗ್ರೆಸ್ ಸರ್ಕಾರ 5ಗ್ಯಾರಂಟಿ ಯೋಜನೆ ಜಾರಿ ಮಾಡಿದೆ, ಜನರಿಗೆ ಅನೂಕೂಲಕರ ಯೋಜನೆಗಳನ್ನು. ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಪಡೆದು ಅನುಷ್ಠಾನ ಮಾಡಲು ಪ್ರಣಾಳಿಕೆಯಲ್ಲಿ ಘೋಷಿಸಲಾಗಿದೆ, ಕ್ಷೇತ್ರದ ಮತದಾರರು ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಅವರನ್ನು ಹೆಚ್ಚಿನಮತಗಳಿಂದ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

## ಕಾಂಗ್ರೆಸ್ ತತ್ವ ಸಿದ್ಧಾಂತ ಒಪ್ಪಿ ಪಕ್ಷ ಸೇರ್ಪಡೆ




**ವಿಜಯಪುರ :** ಬಿಜೆಪಿ ಮತ್ತು ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ತತ್ವ ಸಿದ್ಧಾಂತ ಒಪ್ಪಿ ಪಕ್ಷಕ್ಕೆ ಸೇರ್ಪಡೆ ಯಾದರು, ಆಯಾ ಕ್ಷೇತ್ರದ ಬಹುತೇಕ ಅನ್ಯ ಪಕ್ಷಗಳ ನಾಯಕರು ನಮ್ಮ ಪಕ್ಷಕ್ಕೆ ಒಬ್ಬೊಬ್ಬರಾಗಿ ಬರುತ್ತಿದ್ದಾರೆ ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ದೇವನಹಳ್ಳಿ ತಾಲೂಕಿನ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ನಡೆದ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಇವರು ನಮ್ಮ ಪಕ್ಷದ ಸಿದ್ಧಾಂತ, ಮಲ್ಲಿಕಾರ್ಜುನ ಖರ್ಗೆ ಅವರ ಅಧ್ಯಕ್ಷತೆ, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ನಾಯಕತ್ವ ಒಪ್ಪಿ ಪಕ್ಷಕ್ಕೆ ಬಂದಿದ್ದಾರೆ. ಸ್ಥಳೀಯ ನಾಯಕರ ಜತೆ ಚರ್ಚೆ ಮಾಡಿ ಎಲ್ಲ ನಾಯಕರ ಸಮ್ಮುಖದಲ್ಲಿ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುತ್ತಿದ್ದೇವೆ ಎಂದರು. ಧರ್ಮ ಧರ್ಮಗಳ ನಡುವೆ ಕೋಮುಸೌಹರ್ದತೆಯನ್ನು ಮೂಡಿಸಲು ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಕೊಟ್ಟಿದೆ ಮಂದಿನ ದಿನಗಳಲ್ಲಿ ವಿಜಯಪುರದ 23 ವಾರ್ಡಿಗೂ ತಾರತಮ್ಯವಿಲ್ಲದೇ ಪಕ್ಷಾತೀತವಾಗಿ ಅನುದಾನಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು. ವಿಜಯಪುರದ 3 ,9,14 ,22 ಮತ್ತು 23 ನೇ ವಾರ್ಡಿನ ಮಹೇಶ್, ಅಜಾಂಪಾಷಾ,ಜಬೀ ಉಲ್ಲಾ ಸಾಬ್, ಮನ್ವರ್ ಪಾಷಾ ಹಾಗೂ ಅಬ್ಬಾಂಪಾಷಾ ಸೇರಿದಂತೆ ಅವರ ಬೆಂಬಲಿಗರೊಡನೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಮುನಿನರಸಿಂಹಯ್ಯ , ವಿ.ಮಂಜುನಾಥ್ ,ಸಿ.ಜಗನ್ನಾಥ್ ವಿ. ಶಾಂತಕುಮಾರ್ ,ಪ್ರಸನ್ನಕುಮಾರ್ ,ಎಸ್ ಜಿ ಮಂಜುನಾಥ್ ,ಸೋಮಣ್ಣ ,ಲಕ್ಷ್ಮೀಕಾಂತ, ನರಸಿಂಹಮೂರ್ತಿ ,ದುಬ್ಬೆ ಮಂಜುನಾಥ್ ಬಿದಲೂರು ಎಸ್ ಪಿ . ಮುನಿರಾಜು, ಕೆ.ಆರ್.ನಾಗೇಶ್, ಕೋಡುಗುರ್ಕಿ ನಾರಾಯಣಸ್ವಾಮಿ ,ರಾಮಚಂದ್ರಪ್ಪ, ಸೇರಿದಂತೆ ಪಕ್ಷದ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಇದ್ದರು.

## ದಲಿತರಿಗೆ ಮತದಾನದ ಹಕ್ಕನ್ನು ಕೊಡದೇ ವಂಚನೆ

**ವಿಜಯಪುರ:** ದೆಹಲಿಯ ಜಂತರ್, ಮಂತರ್ ನಲ್ಲಿ ಸಂವಿಧಾನದ ಪ್ರತಿಗಳನ್ನು ಹರಿದು ಹಾಕಿದವರ ಮೇಲೆ ಕಾನೂನು ಕ್ರಮ ಕೈಗೊಳ್ಳದ ಪ್ರಧಾನಿ ನರೇಂದ್ರಮೋದಿ ಅವರು, ಚುನಾವಣೆಗಾಗಿ ಸಂವಿಧಾನದ ವಿರೋಧಿಗಳನ್ನು ಸೋಲಿಸಿ ಎಂದು ಜನರಿಂದ ಅನುಕಂಪಗಿಟ್ಟಿಸಿಕೊಳ್ಳಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಬಹುಜನ ಸಮಾಜವಾದಿ ಪಕ್ಷದ(ಬಿಎಸ್‌ಪಿ) ರಾಜ್ಯ ಕಾರ್ಯದರ್ಶಿ ನಂದಿಗುಂದ ವೆಂಕಟೇಶ್ ಹೇಳಿದರು.

ಪಟ್ಟಣದ ಅಂಕತಟ್ಟಿ ನಂಜುಡಪ್ಪ ವೃತ್ತದಲ್ಲಿ ಶುಕ್ರವಾರ ಬಹುಜನ ಸಮಾಜವಾದಿ ಪಕ್ಷದ ಲೋಕಸಭಾ ಅಭ್ಯರ್ಥಿ ಮಹದೇವ್.ಪಿ ಅವರ ಪರವಾಗಿ ಮತಯಾಚನೆ ಮಾಡಿ, ಅವರು ಮಾತನಾಡಿದರು.

ದೇಶದಲ್ಲಿ ದಲಿತರಿಗೆ ಮತದಾನದ ಹಕ್ಕನ್ನು ಕೊಡದೇ ವಂಚನೆ ಮಾಡಿದ್ದ, ಕಾಂಗ್ರೆಸ್ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿರುವ ದಲಿತ ಸಮುದಾಯಗಳ ಮತಗಳನ್ನು ಪಡೆದುಕೊಂಡು ಅಧಿಕಾರ ನಡೆಸುತ್ತಿರುವ ಬಿಜೆಪಿ ಈ ಎರಡೂ ಪಕ್ಷಗಳಿಗೆ ಈ ದೇಶದಲ್ಲಿನ ಬಹುಸಂಖ್ಯೆಯ ಜನರ ಬಗ್ಗೆ ಖಾಳಜಿಯಿಲ್ಲ. ಚುನಾವಣೆಯ ಸಮಯ ಬಂದಾಗ ಧರ್ಮ, ಧರ್ಮಗಳ ನಡುವೆ ವಿಷ ಬೀಜವನ್ನು ಬಿತ್ತಿ. ಜ್ಯಾತ್ಯಾತೀತ ನಿಲುವುಗಳಿಗೆ ತಿಲಾಂಜಲಿ ಇಟ್ಟು ಅಧಿಕಾರಕ್ಕಾಗಿ ಪರದಾಡುತ್ತಿದ್ದಾರೆ. ಈ ದೇಶದಲ್ಲಿ ದಲಿತರಿಗೆ ಮತದಾನದ ಹಕ್ಕು ಕೊಡಿಸಿದ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಡವರ ಪರವಾಗಿ ನಿರಂತರವಾಗಿ ಹೋರಾಟ ಮಾಡಿದ ಕಾನ್ಸಿರಾಂ ಅವರ ಕನಸುಗಳನ್ನು ಈಡೇರಿಸಬೇಕೆಂದು ನಿರಂತರವಾಗಿ ಹೋರಾಟ ಮಾಡುತ್ತಿರುವ ಬಿ.ಎಸ್.ಪಿ ಪಕ್ಷವನ್ನು ಎಲ್ಲಾ ಸಮುದಾಯಗಳು ಬೆಂಬಲಿಸಬೇಕು. ಆಗ ಮಾತ್ರ ಈ ದೇಶದಲ್ಲಿ ನಿರುದ್ಯೋಗ ಸಮಸ್ಯೆ, ಬಡತನ, ನಿರ್ಮೂಲನೆಯಾಗಿ, ಪ್ರತಿಯೊಂದು ಮಗುವಿಗೂ ಕನಿಷ್ಟ



ಪದವಿವರೆಗೂ ಉಚಿತ ಶಿಕ್ಷಣ ಸಿಗಲಿದೆ ಎಂದರು.

ನಾವು ಸಂವಿಧಾನ ಬದಲಾಯಿಸುವುದಕ್ಕಾಗಿಯೇ ಅಧಿಕಾರಕ್ಕೆ ಬಂದಿದ್ದೇವೆ. ಲೋಕಸಭಾ ಚುನಾವಣೆಯಲ್ಲಿ 400 ಸೀಟು ಬಂದರೆ, ಆ ನಂತರ ನಿಜವಾದ ಆಟ ಆರಂಭವಾಗಲಿದೆ ಎಂದು ಬಿಜೆಪಿಯ ಸಂಸದ ನೇರವಾಗಿ ಹೇಳಿದ್ದಾರೆ. ಆದರೆ, ಸತ್ಯವನ್ನು ಹೇಳಿದರೆಂಬ ಕಾರಣಕ್ಕಾಗಿ ಅವರಿಗೆ ಟಿಕೆಟ್ ಕೊಡದೇ ವಂಚನೆ ಮಾಡಿದ್ದಾರೆ. ಬಿಜೆಪಿ ಮೂಲ ಸಿದ್ಧಾಂತವನ್ನು ಅವರು ಬಹಿರಂಗವಾಗಿ ಹೇಳಿದರೆಂಬ ಕಾರಣಕ್ಕೆ ಅವರಿಗೆ ಶಿಕ್ಷೆ ನೀಡಲಾಗಿದೆ. ದೇಶದ ಜನರು ಸಂಸದರನ್ನು ಶಿಕ್ಷಿಸುವ ಬದಲಿಗೆ ಸಂವಿಧಾನ ಬದಲಿಸಬೇಕೆನ್ನುವ ಮನಸ್ಥಿತಿ ಇರುವವರನ್ನು ಶಿಕ್ಷಿಸಬೇಕಾಗಿದೆ ಎಂದು ವೆಂಕಟೇಶ್ ಒತ್ತಾಯಿಸಿದರು.

ಲೋಕಸಭಾ ಕ್ಷೇತ್ರ ಅಭ್ಯರ್ಥಿ ಮಹದೇವ್.ಪಿ. ಅವರು ಮಾತನಾಡಿ, ಈ ದೇಶದಲ್ಲಿ ಧ್ವನಿಯಿಲ್ಲದವರಿಗೆ ಧ್ವನಿಯಾಗಬೇಕಾಗಿದೆ. ನಾವು ಯಾವುದೇ ಆಸೆ, ಆಮಿಷಗಳನ್ನು ತೋರಿಸಿ, ಮತ ಕೇಳುತ್ತಿಲ್ಲ. ನಾವು ನಿಮ್ಮ ಪರವಾಗಿ ಕೆಲಸ ಮಾಡುತ್ತೇವೆ. ನಮಗೆ ಮತ ಕೊಡಿ ಎಂದು ಕೇಳುತ್ತಿದ್ದೇವೆ. ಬಿಜೆಪಿಯ ದುರಾಡಳಿತ, ಕಾಂಗ್ರೆಸ್ ನವರು ಅಧಿಕಾರ ದಾಹಕ್ಕೆ ಅಂತಿಮವಾದ ಮೊಳೆಯನ್ನು ಜನರು ಏ.26 ರಂದು ಹೊಡೆಯಬೇಕು ಎಂದು ಜನರಲ್ಲಿ ಮನವಿ ಮಾಡುತ್ತಿದ್ದೇವೆ. ಜನರಿಗೆ ಮತಕ್ಕಾಗಿ ಹಣ ಕೊಟ್ಟು ಹೋಗುವವರು, ಎಂದಿಗೂ ಜನರಿಗೆ ಕೆಲಸ ಮಾಡುವುದಿಲ್ಲ. ಜನರಿಂದ ನೋಟು ಪಡೆದು ಲೋಕಸಭೆಗೆ ಹೋಗುವವರು ಜನರ ಪರವಾಗಿ ಚಿಂತಿಸುತ್ತಾರೆ. ಮಾಯಾವತಿ ಅವರು, ಈ ದೇಶದಲ್ಲಿ ಶೋಷಣೆಗೆ ಒಳಗಾಗಿರುವವರ ಪರವಾಗಿ ಧ್ವನಿಯಾಗಬೇಕು. ಶಾಸನ ರೂಪಿಸಬೇಕು ಎಂದರು.

ಬಿ.ಎಸ್.ಪಿ. ಉಪಾಧ್ಯಕ್ಷ ನಾಗರಾಜ್, ಮುಖಂಡರಾದ ಬಿ.ಎಲ್. ರಾಜಪ್ಪ, ಕಾರ್ಯದರ್ಶಿ ಹರಳೂರು ನರಸಿಂಹಪ್ಪ, ಚಿಕ್ಕರಂಗಣ್ಣ, ಮಾರೇಗೌಡ, ಟೌನ್ ಅಧ್ಯಕ್ಷ ಎಂ.ನಾಗರಾಜ್, ಉಪಾಧ್ಯಕ್ಷ ದೇವರಾಜ್, ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ಮಹಿಳಾ ಟೌನ್ ಅಧ್ಯಕ್ಷೆ ರಾಧಮ್ಮ, ಹೋಬಳಿ ಅಧ್ಯಕ್ಷೆ ನರಸಮ್ಮ ಇದ್ದರು.

# ಸಂಜೆ ಟಿಪ್ಸ್

## ಸ್ಟ್ಯಾಟಿಕ್ ಮತ್ತು ಗ್ಲಿಡಾ ಪಾಲುದಾರಿಕೆ

ಎಲೆಕ್ಟ್ರಿಕ್ ವೆಹಿಕಲ್ (ಇ.ವಿ ಚಾಜಿಂಗ್ ಸೇವೆಗಳಲ್ಲಿ ಭಾರತದ ಪ್ರಮುಖ ಕಂಪನಿಗಳಾದ ಸ್ಟ್ಯಾಟಿಕ್ ಮತ್ತು ಗ್ಲಿಡಾ (ಹಿಂದಿನ ಫೋಟಮ್ ಚಾಜ್ ಆಂಡ್ ಡ್ರೈವ್ ಇಂಡಿಯಾ)ದೇಶಾದ್ಯಂತ ಎಲೆಕ್ಟ್ರಿಕ್ ವಾಹನಗಳ ಅಳವಡಿಕೆಗೆ ವೇಗ ನೀಡಲು ಪಾಲುದಾರಿಕೆಯನ್ನು ಘೋಷಿಸಿವೆ. ಈ ಸಹಯೋಗವು ಭಾರತದಾದ್ಯಂತ ಇ.ವಿ ಚಾಜಿಂಗ್ ಮೂಲಸೌಕರ್ಯದ ಸನ್ನಿವೇಶವನ್ನು ಬದಲಿಸುವ ಗುರಿ ಹೊಂದಿದೆ.

ಈ ಪಾಲುದಾರಿಕೆಯೊಂದಿಗೆ ಗ್ಲಿಡಾ ಚಾಜಿಂಗ್ ನೆಟ್ವರ್ಕ್ ಎಲ್ಲ ಸಾವಜನಿಕ ಚಾಜಿಂಗ್ ಸೇವೆಗಳನ್ನು ಸ್ಟ್ಯಾಟಿಕ್ ಆಪ್ ಮೂಲಕ ಬಳಸಬಹುದು. ಈಗ ಅಸ್ತಿತ್ವದಲ್ಲಿರುವ ಮತ್ತು ಮುಂದೆ ಬರಲಿರುವ ಚಾಜರ್ಗಳ ಮಾಹಿತಿಯನ್ನು ಆಪ್ ಮೂಲಕ ಪಡೆಯುವುದರ ಜತೆಗೆ, ಅಲ್ಲಿ ಸುಲಭ ಪ್ರವೇಶವನ್ನೂ ಪಡೆಯಬಹುದು. ಈ ಸಹಯೋಗದಿಂದಾಗಿ ಇ.ವಿ ಬಳಕೆದಾರರು ಎರಡೂ ಕಂಪನಿಗಳ ಅಂತರ್ ಕಾರ್ಯಾಚರಣೆಯಿಂದಾಗಿ ಚಾರ್ಜಿಂಗ್ ಸಂಪರ್ಕಕ್ಕಾಗಿ ಬಹು ಆಪ್ ಬಳಕೆಯ ಸಮಸ್ಯೆಯನ್ನು ನಿವಾರಿಸುತ್ತದೆ. ಗ್ಲಿಡಾ ಆಪ್ ಮತ್ತು ಚಾರ್ಜ್ ಥ್ರೂ (ಇ.ವಿ ಬಳಕೆದಾರರಿಗಾಗಿ ರೂಪಿಸಲಾಗಿರುವ ವೆಬ್ಲಿಂಕ್ ಅಪ್ಲಿಕೇಶನ್) ಮೂಲಕ ಗ್ಲಿಡಾ ಚಾರ್ಜರ್ಗಳನ್ನುಬಳಸುವುದನ್ನು ಮುಂದುವರಿಸಲಾಗುತ್ತದೆ.

ಸಹಯೋಗದ ಕುರಿತು ಮಾತನಾಡಿದ ರಾಘವ್ ಅರೋರಾ, ಸಹ-ಸ್ಥಾಪಕರು ಮತ್ತು ಸಿಟಿಒ, ಸ್ಟ್ಯಾಟಿಕ್ ಅವರು ಹೇಳಿದರು, ?ಭಾರತದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆಯನ್ನು ಉತ್ತೇಜಿಸಲು ಗ್ಲಿಡಾ ಜತೆ ಸಹಭಾಗಿತ್ವ ಹೊಂದುತ್ತಿರುವುದಕ್ಕೆ ಅತೀವ ರೋಮಾಂಚನವಾಗುತ್ತಿದೆ. ಈ ಪಾಲುದಾರಿಕೆಯು ಭಾರತದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆಯನ್ನು ಉತ್ತೇಜಿಸುವ ನಮ್ಮ ಗುರಿಯಲ್ಲಿ ಗ್ಲಿಡಾ ಜತೆಗಿನ ಸಹಭಾಗಿತ್ವವು ಪ್ರಮುಖ ಹೆಜ್ಜೆಯಾಗಿದೆ. ಸ್ಟಾಟಿಕ್ ಅಪ್ಲಿಕೇಶನ್ಗೆ ಗ್ಲಿಡಾ ಚಾರ್ಜರ್ಗಳನ್ನು ಸಂಯೋಜಿಸುವ ಮೂಲಕ ಇ.ವಿ ಬಳಕೆದಾರರಿಗೆ ಅನುಕೂಲತೆ ಮತ್ತು ಸ್ನೇಹಪರತೆಯನ್ನು ಹೆಚ್ಚಿಸುತ್ತಿದ್ದೇವೆ. ಇ.ವಿ ಮಾಲೀಕರಿಗೆ ತಡೆರಹಿತ ಸೇವೆಯ ಅನುಭವ ನೀಡುವುದು ನಮ್ಮ ಗುರಿಯಾಗಿದೆ. ಭಾರತದಲ್ಲಿ ಸುಸ್ಥಿರ ಸಾರಿಗೆ ಪರಿಸರ ವ್ಯವಸ್ಥೆಯನ್ನು ರೂಪಿಸಲು ಪ್ರಮುಖ ಪಾತ್ರ ವಹಿಸಲು ನಾವು ಬಯಸುತ್ತೇವೆ ಎಂದರು

## ರುಚಿರುಚಿ ಮಟನ್ ಕರ್ರಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಮಟನ್: 500 ಗ್ರಾಂ, ಬೆಳ್ಳುಳ್ಳಿ: ನಾಲ್ಕು ಗಡ್ಡೆ, ಈರುಳ್ಳಿ: 3 (ದೊಡ್ಡ ಗಾತ್ರದ್ದು), ಟೊಮೆಟೋ: ಎರಡು (ದೊಡ್ಡ ಗಾತ್ರದ್ದು), ಚಕ್ಕೆ: ಒಂದು ತುಂಡು, ಕಾಳು ಮೆಣಸು: ಎಂಟರಿಂದ ಹತ್ತು, ಮೊಗ್ಗು: ಒಂದು, ಏಲಕ್ಕಿ: ಮೂರು, ದಪ್ಪ ಅಥವಾ ಕಪ್ಪು ಏಲಕ್ಕಿ: ಎರಡು, ಪುಲಾವ್ ಎಲೆ: ಒಂದು, ಎಣ್ಣೆ: ನಾಲ್ಕು ಟೀ ಸ್ಪೂನ್, ಗರಂ ಮಸಾಲೆ: ಒಂದು ಟೀ ಸ್ಪೂನ್, ಅರಿಶಿನ: ಅರ್ಧ ಟೀ ಸ್ಪೂನ್, ಹಸಿಮೆಣಸಿನಕಾಯಿ: ಎರಡು, ಶುಂಠಿ: ಮೂರರಿಂದ ನಾಲ್ಕು ಇಂಚು, ಕೊತ್ತಂಬರಿ ಸೊಪ್ಪು, ಕಸೂರಿ ಮೇತಿ ಪುಡಿ: ಒಂದು ಟೀ ಸ್ಪೂನ್, ಅಚ್ಚ ಖಾರದ ಪುಡಿ: ಒಂದು ಟೀ ಸ್ಪೂನ್, ಉಪ್ಪು: ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

● ಮೊದಲಿಗೆ ಮಟನ್ ಬಿಸಿನೀರಿನಲ್ಲಿ ತೊಳೆದುಕೊಂಡು ನಿಮಗೆ ಸೈಜ್ನಲ್ಲಿ ತುಂಡುಗಳನ್ನಾಗಿ ಮಾಡಿಕೊಳ್ಳಿ. ಆನಂತರ ಎರಡು ಬೆಳ್ಳುಳ್ಳಿ ಗಡ್ಡೆ ತೆಗೆದುಕೊಂಡು ಒಡೆದು ಸಿಪ್ಪೆ ಬಿಡಿಸಿಕೊಳ್ಳಿ. ಹಾಗೆಯೇ ಈರುಳ್ಳಿ ಮತ್ತು ಟೊಮೆಟೋವನ್ನು ತೆಳುವಾಗಿ ಉದ್ದ ಆಕಾರದಲ್ಲಿ ಕತ್ತರಿಸಿಕೊಳ್ಳಿ. ● ಆನಂತರ ಮಿಕ್ಸಿ ಜಾರಿಗೆ ಬಿಡಿಸಿಕೊಂಡಿರುವ ಬೆಳ್ಳುಳ್ಳಿ, ಶುಂಠಿ ಮತ್ತು ಹಸಿ ಮೆಣಸಿನಕಾಯಿ ಸೇರಿಸಿ ಸಣ್ಣದಾಗಿ ರುಬ್ಬಿಕೊಂಡು ಎತ್ತಿಟ್ಟುಕೊಳ್ಳಿ.

● ಈಗ ಒಲೆ ಆನ್ ಮಾಡ್ಕೊಂಡು ಬಾಣಲೆ ಇರಿಸಿಕೊಳ್ಳಿ. ಇದಕ್ಕೆ ಮೊದಲು ಅಡುಗೆ ಎಣ್ಣೆ ಹಾಕಿಕೊಳ್ಳಿ. ಎಣ್ಣೆ ಬಿಸಿ ಆಗುತ್ತಿದ್ದಂತೆ ಚಕ್ಕೆ, ಕಾಳು ಮೆಣಸು, ಮೊಗ್ಗು, ಏಲಕ್ಕಿ, ಕಪ್ಪು ಏಲಕ್ಕಿ ಮತ್ತು ಪುಲಾವ್ ಎಲೆ ಸೇರಿಸಿಕೊಂಡು ಫ್ರೈ ಮಾಡಿಕೊಳ್ಳಿ. ಆನಂತರ ಇದಕ್ಕೆ ಕತ್ತರಿಸಿಕೊಂಡಿರುವ ಈರುಳ್ಳಿ ಸೇರಿಸಿ ಹಸಿ ವಾಸನೆ ಹೋಗುವವರೆಗೂ ಫ್ರೈ ಮಾಡಿಕೊಳ್ಳಬೇಕು. ● ಈಗ ಇದಕ್ಕೆ ಎರಡು ಬೆಳ್ಳುಳ್ಳಿ ಗಡ್ಡೆಯನ್ನು ಹಾಕಿ ಮಿಕ್ಸ್ ಮಾಡಿಕೊಳ್ಳಬೇಕು. ಹೀಗೆ ನೇರವಾಗಿ ಇಡೀ ಬೆಳ್ಳುಳ್ಳಿ ಗಡ್ಡೆ ಹಾಕೋದು ಇಲ್ಲಿಯ ಸ್ಪೆಷಲ್. ಆನಂತರ ಇದಕ್ಕೆ ರುಬ್ಬಿಕೊಂಡಿರುವ ಬೆಳ್ಳುಳ್ಳಿ-ಶುಂಠಿ-ಹಸಿಮೆಣಸಿನಕಾಯಿ ಪೇಸ್ಟ್ ಸೇರಿಸಿ ಕಲಿಸಿಕೊಳ್ಳಬೇಕು.

● ಎಲ್ಲಾ ಮಸಾಲೆ ಬೇಯುತ್ತಿದ್ದಂತೆ ಟೊಮೆಟೋ ಹಾಕಿ ಮಿಕ್ಸ್ ಮಾಡಿಕೊಳ್ಳಬೇಕು. ಈಗ ಮಟನ್ ಹಾಕಿ ಮಿಕ್ಸ್ ಮಾಡಿ. ನಂತರ ಇದಕ್ಕೆ ಅಚ್ಚ ಖಾರದ ಪುಡಿ, ಅರಿಶಿನ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ. ನಂತರ ಅರ್ಧ ಲೋಟದಷ್ಟು ಬಿಸಿನೀರು ಸೇರಿಸಿ ಎರಡು ನಿಮಿಷ ಬೇಯಿಸಿಕೊಳ್ಳಿ.

● ಕೊನೆಯದಾಗಿ ದೊಡ್ಡ ಕುಕ್ಕರ್ಗೆ ಬಾಣಲೆಯಲ್ಲಿರುವ ಮಟನ್ ಕರ್ರಿ ಹಾಕಿಕೊಂಡು ಮುಚ್ಚಳ ಮುಚ್ಚಿ ಕಡಿಮೆ ಉರಿಯಲ್ಲಿ ಮೂರರಿಂದ ನಾಲ್ಕು ಕೂಗು ಕೂಗಿಸಿಕೊಳ್ಳಿ. ಹಬೆ ಹೋದ ನಂತರ ಮುಚ್ಚಳ ತೆಗೆದು ಗರಂ ಮಸಾಲೆ, ಕೊತಂಬರಿ ಸೊಪ್ಪು ಮತ್ತು ಕಸೂರಿ ಮೇತಿ ಸೇರಿಸಿದ್ರೆ ರುಚಿಯಾದ ಮಟನ್ ಕರ್ರಿ ಸವಿಯಲು ಸಿದ್ಧ

## ಡಾರ್ಕ್ ಸರ್ಕಲ್‌ಗಳ ನಿವಾರಣೆಗೆ ಮನೆಮದ್ದು



### ಹೆಲ್ತ್ ಟಿಪ್ಸ್

ನೈಸರ್ಗಿಕವಾಗಿ ಕಪ್ಪು ವರ್ತುಲಗಳನ್ನು ಹೋಗಲಾಡಿಸುವುದು ಹೇಗೆ? ಎಂದು ನೀವು ಯೋಚಿಸುತ್ತಿದ್ದರೆ ಅದಕ್ಕೆ ಮನೆಯಲ್ಲೇ ಇದೆ ಪರಿಹಾರ.

ಕೋಲ್ಡ್ ಕಂಪ್ರೆಸ್: ಇದು ಊತವನ್ನು ಕಡಿಮೆ ಮಾಡಲು ಮತ್ತು ನಿಮ್ಮ ಚರ್ಮವನ್ನು ಶಮನಗೊಳಿಸಲು ಸಹಾಯ ಮಾಡುತ್ತದೆ. ಇದರ ನಿಯಮಿತ ಬಳಕೆಯು ಡಾರ್ಕ್ ಸರ್ಕಲ್ನ ನೋಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ನಿಮ್ಮ ಕಣ್ಣುಗಳ ಕೆಳಗೆ ಐಸ್ ಕ್ಯೂಬ್ ಅನ್ನು ಮಸಾಜ್ ಮಾಡಿ. ನೀವು ಸೂಕ್ಷ್ಮ ಚರ್ಮವನ್ನು ಹೊಂದಿದ್ದರೆ, ಐಸ್ ಅನ್ನು ಬಟ್ಟೆಯಲ್ಲಿ ಸುತ್ತಿ ನಿಮ್ಮ ಡಾರ್ಕ್ ಸರ್ಕಲ್ ಮೇಲೆ ಹಚ್ಚಿ. ಸೌತೆಕಾಯಿ ಬಳಕೆ: ಸೌತೆಕಾಯಿ ಚೂರುಗಳಲ್ಲಿ ಇರುವ ವಿಟಮಿನ್ ಇ ನಿಮ್ಮ ಕಣ್ಣಿನ ಕೆಳಗಿನ ಪ್ರದೇಶವನ್ನು ಶಾಂತಗೊಳಿಸಲು ಮತ್ತು ರಿಫ್ರೆಶ್ ಮಾಡಲು ಸಹಾಯ ಮಾಡುತ್ತದೆ. ಇದು ಕಪ್ಪು ವಲಯಗಳ ನೋಟವನ್ನು ಕಡಿಮೆ ಮಾಡುತ್ತದೆ.

ಬಳಸುವುದು ಹೇಗೆ?: ಸೌತೆಕಾಯಿ ತುಂಡುಗಳನ್ನು ಫ್ರಿಡ್ಜ್ನಲ್ಲಿಡಿ. 15-20 ನಿಮಿಷಗಳ ಕಲ ಈ ತಣ್ಣಗಿರುವ ಸೌತೆಕಾಯಿ ಚೂರುಗಳನ್ನು ನಿಮ್ಮ ಡಾರ್ಕ್ ಸರ್ಕಲ್ ಮೇಲೆ ಇರಿಸಿ. ತಣ್ಣೀರಿನಿಂದ ನಿಮ್ಮ ಮುಖವನ್ನು ತೊಳೆಯಿರಿ.

ಅಲೋವೆರಾ ಬಳಕೆ: ಅಲೋವೆರಾ ವಿಟಮಿನ್ ಇ ಮತ್ತು ಉತ್ಕರ್ಷಣ ನಿರೋಧಕಗಳ ಆಗರವಾಗಿದೆ. ಇದರ ನಿಯಮಿತ ಬಳಕೆಯು ಕಪ್ಪು ವಲಯಗಳು ಮತ್ತು ಸುಕ್ಕುಗಳನ್ನು ತೊಡೆದುಹಾಕಲು ನಿಮಗೆ ಸಹಾಯ ಮಾಡುತ್ತದೆ. ನಿಮ್ಮ ಕಣ್ಣಿನ ಕೆಳಗಿನ ಪ್ರದೇಶವನ್ನು ಪೋಷಿಸಲು ಮತ್ತು ತೇವಗೊಳಿಸಲು ದಿನಕ್ಕೆ ಎರಡು ಬಾರಿ ಇದನ್ನು ಬಳಸಿ.

ಬಳಸುವುದು ಹೇಗೆ?: ಅಲೋವೆರಾ ಎಲೆಯಿಂದ ಜೆಲ್ ಅನ್ನು ಹೊರತೆಗೆಯಿರಿ ಅಥವಾ ಸಾವಯವ ಅಲೋವೆರಾ ಜೆಲ್ ಅನ್ನು ಖರೀದಿಸಿ. ನಿಮ್ಮ ಕಣ್ಣಿನ ಕೆಳಗಿನ ಪ್ರದೇಶದಲ್ಲಿ ಈ ಜೆಲ್ ಅನ್ನು ನಿಧಾನವಾಗಿ ಮಸಾಜ್ ಮಾಡಿ. ನಿಮ್ಮ ಕಣ್ಣುಗಳ ಕೆಳಗಿರುವ ಚರ್ಮವು ಸೂಕ್ಷ್ಮವಾಗಿರುತ್ತದೆ ಮತ್ತು ಅಲೋವೆರಾ ಅದನ್ನು ಮೃದುವಾಗಿ ತೇವಗೊಳಿಸುತ್ತದೆ.

## ಪಿಗ್ಮೆಂಟೇಶನ್ ಸಮಸ್ಯೆಯೇ

### ಬ್ಯೂಟಿ ಟಿಪ್ಸ್



ಮುಖದ ಮೇಲೆ ಒಂದು ಕಪ್ಪು ಮಚ್ಚೆಯಿದ್ರೆ ಅದು ಸೌಂದರ್ಯವನ್ನು ವೃದ್ಧಿಸುತ್ತದೆ. ಆದ್ರೆ ಮುಖವೆಲ್ಲ ಕಲೆಯಾದ್ರೆ ಸೌಂದರ್ಯ ಹಾಳಾಗುತ್ತದೆ. ಕಲೆ ಹೋಗಲಾಡಿಸಿ ಸುಂದರ ಮುಖಕ್ಕಾಗಿ ಜನರು ಬ್ಯೂಟಿಪಾರ್ಲರ್ ಮೊರೆ ಹೋಗ್ತಾರೆ. ಅದ್ರ ಬದಲು ದಿನದಲ್ಲಿ 5 ನಿಮಿಷ ಈ ಮನೆ ಔಷಧಿ ಬಳಸಿದ್ರೆ ಮುಖ ಸುಂದರವಾಗಿ, ಆಕರ್ಷಕವಾಗಿ ಕಾಣುತ್ತದೆ. ಮೂಲಂಗಿ : ಮುಖದ ಮೇಲಿರುವ ಕಪ್ಪು ಕಲೆಗಳನ್ನು ಮೂಲಂಗಿ ದೂರ ಮಾಡುತ್ತದೆ. ಪ್ರತಿ ದಿನ ಮೂಲಂಗಿ ರಸವನ್ನು ಮುಖಕ್ಕೆ ಹಚ್ಚಿ. ಕೆಲ ಸಮಯ ಬಿಟ್ಟು ಮುಖ ತೊಳೆಯಿರಿ. **ಮಜ್ಜಿಗೆ :** ಮಜ್ಜಿಗೆಯಲ್ಲಿ ಲ್ಯಾಕ್ಟಿಕ್ ಆಮ್ಲವಿರುತ್ತದೆ. ಇದು ಕಲೆಗಳನ್ನು ಕಡಿಮೆ ಮಾಡುವ ಕೆಲಸ ಮಾಡುತ್ತದೆ. ಇದು ಪಿಗ್ಮೆಂಟೇಶನ್ ಸಮಸ್ಯೆಯನ್ನು ಕೂಡ ದೂರ ಮಾಡುತ್ತದೆ. **ನಿಂಬೆ ರಸ:** ನಿಂಬೆ ರಸದಲ್ಲಿ ಸಿಟ್ರಿಕ್ ಆಮ್ಲವಿರುತ್ತದೆ. ನಿಂಬೆ ರಸವನ್ನು ಮುಖಕ್ಕೆ ಹಚ್ಚಿ ಮಸಾಜ್ ಮಾಡಿದ್ರೆ ಮುಖ ಸ್ವಚ್ಛವಾಗಿ ಕಪ್ಪು ಕಲೆ ಮಾಯವಾಗುತ್ತದೆ. **ಅಲೋವೇರಾ:** ಮೊದಲು ಅಲೋವೇರಾ ರಸಕ್ಕೆ ನಿಂಬೆ ರಸ, ಮಜ್ಜಿಗೆಯನ್ನು ಮಿಕ್ಸ್ ಮಾಡಿ. ಇದನ್ನು ಮುಖಕ್ಕೆ ಹಚ್ಚಿ 5 ನಿಮಿಷ ಬಿಟ್ಟು ಮುಖವನ್ನು ತೊಳೆಯಿರಿ. **ಸೇಬು :** ಆಪಲನ್ನು ಮುಖಕ್ಕೆ ಹಚ್ಚಿ 5 ನಿಮಿಷ ಬಿಟ್ಟು ಮುಖವನ್ನು ಸ್ವಚ್ಛಗೊಳಿಸಿ. ವಾರಕ್ಕೆ 2-3 ಬಾರಿ ಹೀಗೆ ಮಾಡಿದ್ರೆ ಮುಖದ ಕಲೆ ಮಾಯವಾಗುತ್ತದೆ.

## ನಿತ್ಯಾ'ಳ ಚೈತನ್ಯಪೂರ್ಣ ಆಕರ್ಷಕ ನೃತ್ಯವಾಹಿನಿ



ಅದೊಂದು ಅನಿರ್ವಚನೀಯ ವೈಭವಪೂರ್ಣ ಕಲಾತ್ಮಕ ರಂಗಸಜ್ಜಿಕೆ. ಗಂಧರ್ವ ಲೋಕವೇ ಧರೆಗಿಳಿದಂಥ ಕುಸುರಿಗೆಲಸದ ದ್ವಾರಗಳು, ಮಂಗಳ ಕಲಶಗಳು, ತೂಗುದೀಪಗಳ ಗೊಂಚಲು. ಪುಷ್ಪಾಲಂಕಾರಗೊಂಡ ಕಣ್ಮನ ಸೂರೆಗೊಂಡ ಭವ್ಯವಾದ ವಾತಾವರಣ. ದೇವಲೋಕದ ಚೆಲುವ ನರ್ತಕಿಯ ನಾಟ್ಯವಿಲಾಸಕ್ಕೆ ಹೇಳಿಮಾಡಿಸಿದಂಥ ವೇದಿಕೆಯ ಮೇಲೆ ಶಿಲಾಬಾಲಿಕೆಯಂಥ ಮಾಟವಾದ ಅಂಗಸೌಷ್ಟವವುಳ್ಳ ಸುಂದರ ಕಲಾವಿದೆ ನಿತ್ಯಾ ರಮೇಶ್ ದೈವೀಕವಾಗಿ ನರ್ತಿಸುತ್ತಿದ್ದಳು. ಅಂದವಳ ಮೊದಲ ಹೆಜ್ಜೆ-ಗೆಜ್ಜೆಗಳ ಸಂಭ್ರಮದ ದಿನ. ಗುರು ಮಂಜುಳಾ ಪರಮೇಶ್ ಬಳಿ ನುರಿತ ನಾಟ್ಯ ತರಬೇತಿ ಪಡೆದ ಅವಳು ಇಡೀ ರಂಗವನ್ನು ಆಕ್ರಮಿಸಿಕೊಂಡು ಲೀಲಾಜಾಲವಾಗಿ ಚಲಿಸುತ್ತ ತನ್ನ ಮನಮೋಹಕ ನೃತ್ಯಾಭಿನಯದ ಚೆಲುವನ್ನು ಚೆಲ್ಲಿದಳು.

ಅದು ನಿತ್ಯಾಳ 'ರಂಗಪ್ರವೇಶ'ವೆನಿಸಲಿಲ್ಲ. ನಿರ್ಭಿಡೆಯಾಗಿ, ಮೈಮರೆತು ದೈವಾರಾಧನೆಯಲ್ಲಿ ತೊಡಗಿದ ನಾಟ್ಯ ಸೇವೆ ಅದಾಗಿತ್ತು. ಆಕೆಯ ವೇಷ-ಭೂಷಣಗಳ ಸೊಗಸು, ವಿಶೇಷಾಲಂಕಾರ-ಅಂದದ ಪ್ರಸಾಧನ ನೋಡುಗರನ್ನು ಚುಂಬಕದಂತೆ ಸೆಳೆದಿತ್ತು. ಮಂಟಪದಲ್ಲಿ ದೇವಿಯ ಭಂಗಿಯಲ್ಲಿ ವಿರಾಜಮಾನಳಾಗಿದ್ದ ನಿತ್ಯಾ, ಬೆಳಕಿನ ವಿಶೇಷ ವಿನ್ಯಾಸದ ಬೆಳ್ಳಿಕಿರಣಗಳ ಮಧ್ಯೆ ರಜತ ಪುತ್ಥಳಿಯಂತೆ ಕಂಗೊಳಿಸುತ್ತಿದ್ದಳು.

ಸಾಂಪ್ರದಾಯಕ 'ಪುಷ್ಪಾಂಜಲಿ'ಯಿಂದ ನರ್ತನ ಶುಭಾರಂಭವಾಯಿತು. 'ಯಾಕುಂದೆಂದು ಹಾರ ಧವಳ...' ಯಶೋ ಸರಸ್ವತಿ, ಲಕ್ಷ್ಮೀ,ಪಾರ್ವತಿ ತ್ರಿಮಾತೆಯರ ಸ್ತೋತ್ರದೊಂದಿಗೆ, ಗುರು ಬ್ರಹ್ಮನ ಕೀರ್ತನೆ ನಡೆದು, ಶಿವನ ಆನಂದ ನರ್ತನದ ಸೊಬಗನ್ನು ಬೀರಿದಳು. ನಗುಮುಖದ ಅಂಗಶುದ್ಧ ನೃತ್ಯ 'ಶಂಕರ ಶ್ರೀಗಿರಿ ನಾದಪ್ರಭು...' ವಿನ ಅರ್ಚನೆಯಲ್ಲಿ ಶಿವನ ಸಮಸ್ತ ಆಭರಣಗಳ ವೈಶಿಷ್ಟ್ಯ, ಅಪೂರ್ವ ಭಂಗಿಗಳ ಮಹೋನ್ನತಿಯನ್ನು ಅನಾವರಣಗೊಳಿಸಿದಳು ಕಲಾವಿದೆ. ಢಮರು ಹಸ್ತದಲ್ಲಿ ತೋರಿದ ಮುದ್ರೆಗಳು, ನೃತ್ತಗಳು, ರಂಗಾಕ್ರಮಣದ ವೈಖರಿ, ಆಕಾಶಚಾರಿಗಳ ಸ್ಫುಟತೆ ಮನೋಹರವಾಗಿದ್ದವು.

ಕಲಾವಿದೆ ನಿತ್ಯಾ ತನ್ನ ರಂಗಪ್ರವೇಶಕ್ಕೆ ಆಯ್ಕೆ ಮಾಡಿಕೊಂಡ ಕೃತಿಗಳು ವೈವಿಧ್ಯಪೂರ್ಣವಾಗಿದ್ದವು. ಹಾಗೆಯೇ ಅವುಗಳ ನೃತ್ಯ ಸಂಯೋಜನೆಗಳೂ ಸುಮನೋಹರವಾಗಿದ್ದು ಗುರು ಮಂಜುಳಾ ಪರಮೇಶ್ ಅವರ ಸೃಜನಾತ್ಮಕತೆಗೆ ಕನ್ನಡಿ ಹಿಡಿದಿದ್ದವು. ಮುಂದೆ- ರಾಮಾಯಣದ ವಿಭಿನ್ನ ಕಥೆಯನ್ನು ನಾಟಕೀಯ ಆಯಾಮದಲ್ಲಿ ಅನಾವರಣಗೊಳಿಸಿದ 'ರಾಮಾಯ ತುಭ್ಯಂ ನಮಃ' -ನವಪ್ರಯೋಗವನ್ನು ಕಲಾವಿದೆ ತನ್ನ ಸೊಗಸಾದ ಅಭಿನಯ-ನೃತ್ತ ಮಾಧುರ್ಯದ ಸೊಗಡಿನಲ್ಲಿ ವರ್ಣರಂಜಿತವಾಗಿ ತೆರೆದಿಟ್ಟಳು. 'ಜಯತು ಜಯತು ರಾಮಚಂದ್ರ...' ಎಂಬ ಭಕ್ತಿಭಾವದಲ್ಲಿ ನಿತ್ಯಾ, ಶ್ರೀರಾಮನ ದಿವ್ಯ ವ್ಯಕ್ತಿತ್ವವನ್ನು ಕಟ್ಟಿಕೊಡುವ ರಾಮಾಯಣದ ಪ್ರಮುಖ ಘಟನೆಗಳನ್ನು ಚಿತ್ರಿಸುತ್ತ ಹೋದಳು. ಯಾಗ ರಕ್ಷಣೆಗಾಗಿ ವಿಶ್ವಾಮಿತ್ರ ಮಹರ್ಷಿ ರಾಮ-ಲಕ್ಷ್ಮಣರನ್ನು ಕರೆದೊಯ್ಯುವ ಮಾರ್ಗದಲ್ಲಿ ಶಾಪಗ್ರಸ್ತ ಅಹಲ್ಯೆಗೆ ವಿಮೋಚನೆ ದೊರೆಯುವ ಪುಲಕಿತ ಪ್ರಸಂಗ, ರಕ್ಕಸರ ಸಂಹಾರ, ಸೀತಾ ಸ್ವಯಂವರಕ್ಕೆ ಮುನ್ನ ಉದ್ಯಾನವನದಲ್ಲಿ ರಾಮ-ಸೀತೆಯರ ಭೇಟಿಯ ಅಪರೂಪದ ಪ್ರಸಂಗ- ಶಿವಧನಸ್ಸು ಛೇದನ, ಸೀತಾ ಕಲ್ಯಾಣ ಮುಂತಾದ ಪ್ರಸಂಗಗಳನ್ನು ಕಲಾವಿದೆ ತನ್ನ ಭಾವಪೂರ್ಣ ಅಭಿನಯದೊಂದಿಗೆ-ವಿವಿಧ ವಿನ್ಯಾಸದ ನೃತ್ತಗಳನ್ನು ಅಲೆ ಅಲೆಯಾಗಿ ಹರಿಸಿದಳು. ಮಂಥರೆಯ ದುರ್ಬೋಧನೆಯಿಂದ ಕೈಕೇಯಿ ಹಠ ಹಿಡಿದು, ರಾಮನಿಗೆ ವನವಾಸ ಪ್ರಾಪ್ತಿ, ಶೂರ್ಪನಖಿ ಪ್ರಸಂಗ, ಮಾಯಾಜಿಂಕೆ- ಸೀತಾಪಹರಣ, ಅಶೋಕವನದಲ್ಲಿ ಸೀತೆಯನ್ನು ಆಂಜನೇಯ ಭೇಟಿ ಮಾಡುವುದು ಮುಂತಾದ ಅನೇಕ ಘಟನಗಳನ್ನು ನಿತ್ಯಾ ಹೃದ್ಯವಾಗಿ ಅಭಿನಯಿಸಿ ಕಲಾರಸಿಕರ ಮೆಚ್ಚುಗೆ ಪಡೆದಳು. ರಕ್ಕಸಿ ಶೂರ್ಪನಖಿ ರಾಮ-ಲಕ್ಷ್ಮಣರನ್ನು ಒಲಿಸಿಕೊಳ್ಳಲು ಸುಂದರಿಯ ರೂಪ ತೊಟ್ಟು ವಯ್ಯಾರದ ನಡೆಯಿಂದ ಅವರನ್ನು ಸಮೀಪಿಸುವ, ಮೂಗು-ಕಿವಿಗಳನ್ನು ಕೊಯ್ಯಿಸಿಕೊಂಡು ರೋಧಿಸುವ ದೃಶ್ಯ ಹಾಸ್ಯರಸದಿಂದ ರಂಜಿಸಿತು. ಕಷ್ಟತಮವಾದ 'ವರ್ಣ'ಕ್ಕೆ ಸಮನಾಗಿದ್ದ ಈ ಕೃತಿ ಕಲಾವಿದೆಯ ನೃತ್ಯಾಭಿನಯದ ಸಾಮರ್ಥ್ಯಕ್ಕೆ ಸಾಕ್ಷೀಭೂತವಾಯಿತು.

ಪ್ರಸ್ತುತಿಯ ಪ್ರಮುಖ ಭಾಗ 'ವರ್ಣ'-ಸುದೀರ್ಘ ಬಂಧ. 'ಮಾತೆ ಮಲಯಧ್ವಜ ಪಾಂಡ್ಯ ಸಂಜಾತೆ'- ಮುತ್ತಯ್ಯ ಭಾಗವತರ್ ರಚಿಸಿದ 'ಧರು ವರ್ಣ' ? ದೈವೀಕ ಆಯಾಮದಲ್ಲಿ ಪ್ರಸ್ತುತಗೊಂಡಿತು. ಗುರು ಮಂಜುಳಾ ಮತ್ತು ಗುರುಪುತ್ರಿ ಶಾಲಿನಿ ಅವರ ಸ್ಫುಟವಾದ ನಟುವಾಂಗದ ಲಯಕ್ಕೆ ಶಕ್ತಿಶಾಲಿಯಾದ ಹೆಜ್ಜೆ-ಗೆಜ್ಜೆಗಳ ಪರಿಪೂರ್ಣತೆಯಲ್ಲಿ



ಕಲಾವಿದೆ ಚೈತನ್ಯಪೂರ್ಣವಾಗಿ ನರ್ತಿಸಿದಳು. ಆಕೆ ತೋರಿದ ವಿವಿಧ ವಿನ್ಯಾಸದ ಆಕರ್ಷಕ ಯೋಗದ ಭಂಗಿಗಳು ಅಚ್ಚರಿಯನ್ನುಂಟು ಮಾಡಿದವು. ಮಿಂಚಿನ ಸಂಚಾರದ ನೃತ್ತ ಹಾಗೂ ಪ್ರಬುದ್ಧ ಅಭಿನಯ ಎರಡರಲ್ಲೂ ನಿತ್ಯಾ, ಗುರುಗಳು ಕಾಳಜಿ-ಪರಿಶ್ರಮಗಳಿಂದ ನೀಡಿದ ತರಬೇತಿ ಹಾಗೂ ಅವರ ಪ್ರತಿಭೆಯ ಪ್ರತಿಬಿಂಬವಾಗಿದ್ದಳು. ಮುಂದೆ- ಪುರಂದರದಾಸರ 'ಜಗನ್ಮೋಹನನೆ ಕೃಷ್ಣ' ನನ್ನು ಕಲಾವಿದೆ, ತನ್ನ ಭಕ್ತಿ ಪುರಸ್ಸರ ತಲ್ಲೀನತೆಯ ರಮ್ಯಾಭಿನಯದಿಂದ ಸಾಕ್ಷಾತ್ಕಾರಗೊಳಿಸಿದ್ದಳು. ಪಾತ್ರವೇ ತಾನಾಗಿ ಆಕೆ ಶ್ರೀಕೃಷ್ಣನ ಮೋಡಿಗೆ ಪರವಶಗೊಂಡಿದ್ದಳು. ಚೈತನ್ಯದಾಯಕ 'ದಶಾವತಾರ'ಗಳ ನಿರೂಪಣೆ, ತಿಲ್ಲಾನ' -ದಲ್ಲಿ ಅಭಿವ್ಯಕ್ತಗೊಂಡ ಅಂಗಶುದ್ಧ ಜತಿಗಳ ಝೇಂಕಾರ, ಭಂಗಿಗಳ ಭವ್ಯತೆ, ಸವಾಲ್-ಜವಾಬ್ ಮಾದರಿಯಲ್ಲಿದ್ದ 'ಗೆತ್ತು' ನಿರ್ವಹಣೆ, ಕಲಾವಿದೆಯ ಸಾಮರ್ಥ್ಯವನ್ನು ಸಶಕ್ತವಾಗಿ ಬಿಂಬಿಸಿತು.

ನಿತ್ಯಾಳ ಸೊಗಸಾದ ನೃತ್ಯಾರ್ಪಣೆಗೆ ಪ್ರಭಾವಳಿ ನೀಡಿದ ಗುರು ಮಂಜುಳಾ ಪರಮೇಶ್ ಗಾನ ಮಾಧುರ್ಯ-ಶಾಲಿನಿ ಪರಮೇಶ್ ನಟುವಾಂಗದ ಸಾಹಚರ್ಯ, ಮೃದಂಗವಾದನದಲ್ಲಿ ಶ್ರೀಹರಿ ರಂಗಸ್ವಾಮಿ, ಮುರಳೀಗಾನದಲ್ಲಿ ನರಸಿಂಹಮೂರ್ತಿ, ವಯೊಲಿನ್ ಮೋಡಿಯಲ್ಲಿ ಹೇಮಂತ್ ಕುಮಾರ್, ವೀಣಾ ನಾದದಲ್ಲಿ ಗೋಪಾಲ್ ಮತ್ತು ರಿದಂ ಪ್ಯಾಡ್ ನಲ್ಲಿ ಕಾರ್ತೀಕ್ ವೈಧಾತ್ರಿ ಅವರ ಸಹಕಾರ ಅನನ್ಯವಾಗಿತ್ತು. ಕಾರ್ಯಕ್ರಮದ ಸ್ಫುಟವಾದ ನಿರೂಪಣೆಯಲ್ಲಿ ಸುಗ್ಗನಹಳ್ಳಿ ಷಡಕ್ಷರಿ -ಅಪೂರ್ವ ಬೆಳಕಿನ ವಿನ್ಯಾಸದಲ್ಲಿ ಸೂರ್ಯ ರಾವ್ ಗಮನಾರ್ಹರು.

ವೈ.ಕೆ.ಸಂಧ್ಯಾ ಶರ್ಮ

## ನಟ ಅಬ್ಬಾಸ್ ಸದ್ಯದ ಪರಿಸ್ಥಿತಿ ಯಾರಿಗೂ ಬೇಡ..?



ಭಾರತದ ಚಿತ್ರರಂಗದಲ್ಲಿ ಅತ್ಯಂತ ಬೇಡಿಕೆಯಲ್ಲಿದ್ದ ನಟ ಅಬ್ಬಾಸ್, 1990 ರ ದಶಕದಲ್ಲಿ ಮಿಂಚಿದ್ದರು. ಈ ಹೀರೋ ಒಂದೇ ಒಂದು ಸಿನಿಮಾದ ಮೂಲಕ ಸ್ಟಾರ್ ಪಟ್ಟಕ್ಕೇರಿದ ನಟ ತಮ್ ಕೆರಿಯರ್ ಅನ್ನು ಹಾಳು ಮಾಡಿಕೊಂಡರು. ಸದ್ಯ ಈ ನಟ ಯಾರಿಗೂ ಕಾಣದ, ಯಾರಿಗೂ ನೆನಪಾಗದ ಪರಿಸ್ಥಿತಿಯಲ್ಲಿ ಜೀವನವನ್ನು ಮಾಡುತ್ತಿದ್ದಾರೆ. ಈ ನಟ ಒಂದು ಕಾಲದಲ್ಲಿ 'ಕಾದಲ್ ದೇಶಂ' ಚಿತ್ರದ ಮೂಲಕ ಹುಡುಗಿಯರ ಕನಸಿನ ಹುಡುಗನಾಗಿದ್ದರು. ಈ ನಟ ಕನ್ನಡದ ಅಪ್ಪು ಪಪ್ಪು ಸಿನಿಮಾದಲ್ಲಿಯೂ ನಟಿಸಿದ್ದರು. 90 ರ ದಶಕದ ಈ ಸೂಪರ್ಸ್ಟಾರ್ ಅಬ್ಬಾಸ್, 2000ರ ,ಮೇಲೆ ಈ ನಟನ ಕೆಲವು ಸಿನಿಮಾಗಳು ಬಾಕ್ಸ್ ಆಫೀಸ್ನಲ್ಲಿ ಸೋತಾಗ ನಾಲ್ಕು ಬಾರಿ ದಿವಾಳಿಯಾದರು. ಅಂತಹ ಸಮಯದಲ್ಲಿ ಈ ನಟ ಟ್ಯಾಕ್ಸಿ ಡ್ರೈವರ್ ಮತ್ತು ಟಾಯ್ಲೆಟ್ ಕ್ಲೀನರ್ ಆಗಿ ಕೆಲಸ ಮಾಡಿದರು. ಸಂದರ್ಶನವೊಂದರಲ್ಲಿ ಈ ನಟ, ನನ್ನ ವೃತ್ತಿಜೀವನದ ಆರಂಭದಲ್ಲಿ ಕೆಲವು ಯಶಸ್ಸಿನ ನಂತರ, ನನ್ನ ಕೆಲವು ಚಿತ್ರಗಳು ವಿಫಲವಾದವು. ಇದರಿಂದ ಆರ್ಥಿಕವಾಗಿ ನೊಂದಿದ್ದೆ. ಬಾಡಿಗೆ ಮತ್ತು ಸಿಗರೇಟಿನಂತಹ ಸಣ್ಣ ಅಗತ್ಯಗಳನ್ನು ಸಹ ಪೂರೈಸಲು ಸಾಧ್ಯವಾಗಲಿಲ್ಲ ಎಂದು ಹೇಳಿಕೊಂಡಿದ್ದಾರೆ. ನಟ ಅಬ್ಬಾಸ್ ತಂದೆಗೆ ತಮ್ಮ ಮಗ ಇಂಜಿನಿಯರ್ ಆಗಬೇಕೆಂದು ಆಸೆ ಇತ್ತು. ಆದರಿಂದ ಈ ನಟ ಇಂಜಿನಿಯರಿಂಗ್ ಕಾಲೇಜಿಗೂ ಸೇರಿಕೊಂಡರು. ಆದರೆ 1994ರಲ್ಲಿ ಬೆಂಗಳೂರಿನಲ್ಲಿ ಮಾಡೆಲಿಂಗ್ ಸ್ಪರ್ಧೆ ನಡೆಯಲಿದೆ ಎಂದು ಗೊತ್ತಾಗಿ ಅದರಲ್ಲಿ ಭಾಗವಹಿಸಿ, ಆ ಸ್ಪರ್ಧೆಯಲ್ಲಿಯೂ ಗೆದ್ದರು. ಈ ನಟ ಮಾಡೆಲಿಂಗ್ ಬಳಿಕ ಗೆಳೆಯನ ಸಲಹೆ ಮೇರೆಗೆ 1995ರಲ್ಲಿ ತಮಿಳು ಚಿತ್ರವೊಂದಕ್ಕೆ ಆಡಿಷನ್ನಲ್ಲಿ ಭಾಗವಹಿಸಿದರು. ಈ ನಟನ ಅಭಿನಯದಿಂದ ಪ್ರಭಾವಿತರಾದ ಡೈರೆಕ್ಟರ್ ಕದಿರ್ 'ಕಾದಲ್ ದೇಶಂ' ಸಿನಿಮಾದಲ್ಲಿ ಸ್ಕ್ರೀನ್ ಟೆಸ್ಟ್ಗೆ ಕರೆದರು. ಈ ಪರೀಕ್ಷೆಯಲ್ಲಿ ಮಿಂಚಿದ ನಂತರ ಅಬ್ಬಾಸ್ಗೆ ಚಿತ್ರದಲ್ಲಿ ನಾಯಕನಾಗಿ ಆಯ್ಕೆಯಾದರು. 'ಕಾದಲ್ ದೇಶಂ' ಸಿನಿಮಾ ಬಾಕ್ಸ್ ಆಫೀಸ್ನಲ್ಲಿ ಸೂಪರ್ಹಿಟ್ ಆಗುತ್ತಿದ್ದಂತೆ, ಅಬ್ಬಾಸ್ ಸೂಪರ್ಸ್ಟಾರ್ ಆಗಿಬಿಟ್ಟರು. ಈ ಯಶಸ್ಸಿನ ನಂತರ ಈ ನಟನಿಗೆ ಸತತ ಚಿತ್ರಗಳ ಆಫರ್ಗಳು ಬಂದವು ಈ ನಟ 2000 ರಲ್ಲಿ ತೆರೆಕಂಡ ಕಂಡುಕೊಂಡೇನ್ ಕಂಡುಕೊಂಡೈನ್ ಸಿನಿಮಾದಲ್ಲಿ ನಟಿ ಐಶ್ವರ್ಯಾ ರೈ ಬಚ್ಚನ್ ಅವರ ಜೊತೆ ರೊಮ್ಯಾನ್ಸ್ ಮಾಡಿದರು. ಅಷ್ಟು ಮಾತ್ರವಲ್ಲದೇ ಟಬು, ರಜನಿಕಾಂತ್, ಮಮ್ಮುಟ್ಟಿ ಮುಂತಾದ ಸ್ಟಾರ್ ಗಳ ಜೊತೆ ಅಭಿನಯಿಸಿರುವ ಈ ಸೌತ್ ಸೂಪರ್ ಸ್ಟಾರ್ ಸದ್ಯ ಗ್ಲಾಮರ್ ಇಂಡಸ್ಟ್ರಿಯಿಂದ ದೂರವೇ ಬದುಕುತ್ತಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಅಧಿಕ ನಷ್ಟ, ಅಧಿಕಾರಿಗಳಿಂದ ಅನುಕೂಲ, ಶತ್ರು ದಮನ, ಕೋರ್ಟ್ ಕೇಸುಗಳಲ್ಲಿ ಜಯ.

**ವೃಷಭ:** ಆಸ್ತಿ ಸಮಸ್ಯೆಗಳು ಬಗೆಹರಿಯುವುದು, ಸಹೋದರಿಯಿಂದ ಅನುಕೂಲ,

**ಮಿಥುನ:** ಉದ್ಯೋಗ ಬದಲಾವಣೆ ಆಲೋಚನೆ, ಮಾತಿನಿಂದ ಕುಟುಂಬಸ್ಥರಿಗೆ ನೋವು, ಗುಪ್ತ ಧನಾಗಮನ.

**ಕಟಕ:** ವ್ಯವಹಾರದಲ್ಲಿ ಧನಾಗಮನ, ಅನಗತ್ಯ ತಿರುಗಾಟ, ಅಧಿಕ ಧೈರ್ಯ, ಶೌರ್ಯ. ತೊಂದರೆ.

**ಸಿಂಹ:** ಆದಾಯ ಮತ್ತು ನಷ್ಟ ಸಮ, ಉತ್ತಮ ಹೆಸರು ಗೌರವ ಕೀರ್ತಿ, ಅಭಿವೃದ್ಧಿಯ ಹಂಬಲ, ನಿದ್ರಾಭಂಗ.

**ಕನ್ಯಾ:** ಒತ್ತಡಕ್ಕೆ ಸಿಲುಕುವಿರಿ, ಉದ್ಯೋಗ ಒತ್ತಡದಿಂದ ನಿದ್ರಾಭಂಗ, ನಷ್ಟದ ಪ್ರಮಾಣ ಅಧಿಕ, ರಾಜಕೀಯ ವ್ಯಕ್ತಿ ಸಂಕಷ್ಟ.

**ತುಲಾ:** ಉದ್ಯೋಗ ಲಾಭ, ಲಾಭದ ಪ್ರಮಾಣ ಕುಂಠಿತ, ಅದೃಷ್ಟ ವಂಚಿತರಾದ ಭಾವನೆ.

**ವೃಶ್ಚಿಕ:** ಕುಟುಂಬ ಸೌಖ್ಯ, ಬಂಧು ಮಿತ್ರರ ಸಮಾಗಮ, ಮನಸ್ತಾಪ, ಆಂತರಿಕ ಕಲಹ, ಪರರಿಂದ ಮೋಸ.

**ಧನಸ್ಸು:** ವ್ಯಾಪಾರದಲ್ಲಿ ಅಭಿವೃದ್ಧಿ, ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಸ್ಥಿರಾಸ್ತಿ ಮಾರಾಟ, ಸ್ತ್ರೀ ಸೌಖ್ಯ, ನಾನಾ ರೀತಿಯ ಚಿಂತೆ.

**ಮಕರ:** ದೇವತಾ ಕಾರ್ಯಗಳಲ್ಲಿ ಭಾಗಿ, ವಿರೋಧಿಗಳಿಂದ ತೊಂದರೆ, ರೋಗಭಾದೆ, ಮನೋವ್ಯಥೆ, ಶ್ರಮಕ್ಕೆ ತಕ್ಕ ಫಲ,

**ಕುಂಭ:** ದಾಂಪತ್ಯದಲ್ಲಿ ಪ್ರೀತಿ, ಸಾಲದಿಂದ ಮುಕ್ತಿ, ಚಂಚಲ ಮನಸ್ಸು, ಕೃಷಿಯಲ್ಲಿ ಅಲ್ಪ ಲಾಭ

**ಮೀನ:** ಪ್ರೀತಿ-ಪ್ರೇಮದ ವಿಷಯಗಳಲ್ಲಿ ಸಮಸ್ಯೆ, ಮಕ್ಕಳೊಂದಿಗೆ ವಾಗ್ವಾದ ಮತ್ತು ಬೇಸರ, ಸಾಲದ ಸಮಸ್ಯೆ, ಶತ್ರು ಬಾಧೆ, ನಷ್ಟದ ಪ್ರಮಾಣ ಅಧಿಕ.

## ವಿಶ್ವ ಸೃಜನಶೀಲತೆ ಮತ್ತು ನಾವೀನ್ಯತೆ ದಿನ




ಮಾನವ ಅಭಿವೃದ್ಧಿಯ ಎಲ್ಲಾ ಅಂಶಗಳಲ್ಲಿ ಸೃಜನಶೀಲತೆ ಮತ್ತು ನಾವೀನ್ಯತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಏಪ್ರಿಲ್ 21 ರಂದು ವಿಶ್ವ ಸೃಜನಶೀಲತೆ ಮತ್ತು ನಾವೀನ್ಯತೆ ದಿನವನ್ನು ಆಚರಿಸಲಾಗುತ್ತದೆ. ವಿಶ್ವಸಂಸ್ಥೆಯ (ಯು.ಎನ್.) ನಿರ್ಣಯದಿಂದ ಈ ದಿನವನ್ನು ಅಂಗೀಕರಿಸಲಾಗಿದೆ ಮತ್ತು 2018 ರಲ್ಲಿ ಏಪ್ರಿಲ್ 21 ರಂದು ಗೊತ್ತುಪಡಿಸಲಾಗಿದೆ. ಯುಎನ್ ನಿಗದಿಪಡಿಸಿದ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವಲ್ಲಿ ಸೃಜನಶೀಲತೆ ಮತ್ತು ನಾವೀನ್ಯತೆಯು ಪ್ರಮುಖವಾಗಿದೆ, ಆದರೂ ಎರಡೂ ಪದಗಳನ್ನು ಪರಸ್ಪರ ಬದಲಿಯಾಗಿ ಬಳಸಲಾಗುತ್ತದೆ, ವಿಶ್ವ ಸೃಜನಶೀಲತೆ ಮತ್ತು ನಾವೀನ್ಯತೆ ದಿನವನ್ನು ಈಗಾಗಲೇ 2002 ರಿಂದ 50 ಕ್ಕೂ ಹೆಚ್ಚು ದೇಶಗಳಲ್ಲಿ ನಾಗರಿಕರು ಮತ್ತು ಸಂಸ್ಥೆಗಳು ಆಚರಿಸುತ್ತಿವೆ. ಯುನೈಟೆಡ್ ನೇಷನ್ಸ್ (ಯು.ಎನ್.) ಔಪಚಾರಿಕವಾಗಿ ಮಾನವ ಅಭಿವೃದ್ಧಿಯ ಎಲ್ಲಾ ಅಂಶಗಳಲ್ಲಿ ಸೃಜನಶೀಲತೆ ಮತ್ತು ನಾವೀನ್ಯತೆಗಳ ಪ್ರಾಮುಖ್ಯತೆಯನ್ನು ಉತ್ತೇಜಿಸಲು ದಿನವನ್ನು ಸ್ಥಾಪಿಸಿತು. ಗುಂಪು ಮಟ್ಟಗಳು. ಗ.ಓ. ವೆಬ್ಸೈಟ್ ಪ್ರಕಾರ - ''ಸೃಜನಶೀಲತೆಯ ಸಾರ್ವತ್ರಿಕ ತಿಳುವಳಿಕೆ ಇಲ್ಲದಿರಬಹುದು. ಪರಿಕಲ್ಪನೆಯು ಆರ್ಥಿಕ, ಸಾಮಾಜಿಕ ಮತ್ತು ಸುಸ್ಥಿರ ಅಭಿವೃದ್ಧಿಯ ಸಂದರ್ಭದಲ್ಲಿ ಕಲಾತ್ಮಕ ಅಭಿವ್ಯಕ್ತಿಯಿಂದ ಸಮಸ್ಯೆ-ಪರಿಹರಿಸುವವರೆಗೆ ವ್ಯಾಖ್ಯಾನಕ್ಕೆ ಮುಕ್ತವಾಗಿದೆ. ಈ ದಿನವು ಆರ್ಥಿಕ, ಸಾಮಾಜಿಕ ಮತ್ತು ಸುಸ್ಥಿರ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಮಸ್ಯೆ-ಪರಿಹರಣೆಗೆ ಸೃಜನಶೀಲತೆ ಮತ್ತು ನಾವೀನ್ಯತೆಯನ್ನು ಅನ್ವಯಿಸುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುತ್ತದೆ. ಎನ್ಸೈಕ್ಲೋಪೀಡಿಯಾ ಬ್ರಿಟಾನಿಕಾ ಪ್ರಕಾರ, ಸೃಜನಶೀಲತೆ ಎಂದರೆ ''ಸಮಸ್ಯೆಗೆ ಹೊಸ ಪರಿಹಾರವಾಗಲಿ, ಹೊಸ ವಿಧಾನ ಅಥವಾ ಸಾಧನವಾಗಲಿ ಅಥವಾ ಹೊಸ ಕಲಾತ್ಮಕ ವಸ್ತು ಅಥವಾ ರೂಪವಾಗಲಿ ಹೊಸದನ್ನು ಮಾಡುವ ಅಥವಾ ಅಸ್ತಿತ್ವಕ್ಕೆ ತರುವ ಸಾಮರ್ಥ್ಯ.'' ಮೆರಿಯಮ್ ವೆಬ್ಸ್ಟರ್ ಪ್ರಕಾರ, ನಾವೀನ್ಯತೆಯು ಹೊಸ ಕಲ್ಪನೆ, ವಿಧಾನ ಅಥವಾ ಸಾಧನ ವನ್ನು ಸೂಚಿಸುತ್ತದೆ. ಸೃಜನಶೀಲತೆ ಮತ್ತು ನಾವೀನ್ಯತೆ ಎರಡು ಪರಸ್ಪರ ಸಂಬಂಧ ಹೊಂದಿರುವ ಪರಿಕಲ್ಪನೆಗಳಾಗಿದ್ದರೂ, ಅವು ನಾಣ್ಯದ ಎರಡು ಬದಿಗಳಾಗಿವೆ. ಸೃಜನಶೀಲತೆಯು ಮಾನಸಿಕ ಸ್ವಭಾವವನ್ನು ಹೊಂದಿದೆ, ಇದು ಚಿಂತನೆಯ ಪ್ರಕ್ರಿಯೆಯನ್ನು ಒಳಗೊಂಡಿರುತ್ತದೆ. ಇದು ಹೊಸ ಆಲೋಚನೆಗಳನ್ನು ಕಲ್ಪಿಸುವುದು ಅಥವಾ ಹಳೆಯ ಆಲೋಚನೆಗಳ ಮೇಲೆ ಹೊಸ ಸ್ಪಿನ್ಗಳನ್ನು ಒಳಗೊಂಡಿರುತ್ತದೆ. ಇನ್ನೋವೇಶನ್, ಮತ್ತೊಂದೆಡೆ, ಕ್ರಿಯಾಶೀಲವಾಗಿದೆ. ಉಪಯುಕ್ತವಾದದ್ದನ್ನು ಉತ್ಪಾದಿಸಲು ಆಲೋಚನೆಗಳನ್ನು ಕಾರ್ಯಗತಗೊಳಿಸುವುದನ್ನು ಇದು ಒಳಗೊಂಡಿರುತ್ತದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಾಜ್ ಕುಮಾರ್ ಹುಟ್ಟುಹಬ್ಬಕ್ಕೆ 'ಮೈ ನೇಮ್ ಇಸ್ ರಾಜ್' ಗೀತ ನಮನ



ಏಪ್ರಿಲ್ 24ಕ್ಕೆ ನಟ ಸಾರ್ವಭೌಮ ರಾಜಕುಮಾರ್ ಅವರ 95 ನೇ ಹುಟ್ಟುಹಬ್ಬ. ಅಂದು ಸಂಜೆ ಚೌಡಯ್ಯ ಮೆಮೋರಿಯಲ್ ಹಾಲ್ ನಲ್ಲಿ 'ಮೈ ನೇಮ್ ಇಸ್ ರಾಜ್' ಹೆಸರಿನ ಭಾಗ 3 ಕಾರ್ಯಕ್ರಮ ನಡೆಯಲಿದೆ. ಸ್ವಾಮಿ ವಿವೇಕಾನಂದ ಟ್ರಸ್ಟ್ ಹಾಗೂ ಟೀಮ್ ಆತ್ರೇಯ ಈ ಸಮಾರಂಭವನ್ನು ಆಯೋಜಿಸಿದೆ. ಈ ಬಾರಿ ರಾಜ್ ಗೀತ ನಮನ ಎಂಬ ಹೆಸರಿನಲ್ಲಿ ಖ್ಯಾತ ಗಾಯಕ ಮನೋಜವಂ ಆತ್ರೇಯ ಅವರ ಸಾರಥ್ಯದಲ್ಲಿ ಹೆಸರಾಂತ ಗಾಯಕರು ರಾಜ್ ಅವರ ಜನಪ್ರಿಯ ಗೀತೆಗಳನ್ನು ಹಾಡಲಿದ್ದಾರೆ. ಈ ಕಾರ್ಯಕ್ರಮದ ಕುರಿತು ಪತ್ರಿಕಾಗೋಷ್ಠಿಯಲ್ಲಿ ಹೆಚ್ಚಿನ ವಿವರಣೆ ನೀಡಿದರು.

ನಾನು ಹಾಗೂ ನನ್ನ ಕುಟುಂಬದವರು ರಾಜಕುಮಾರ್ ಅವರ ಅಭಿಮಾನಿಗಳು. ಅವರ ಹುಟ್ಟುಹಬ್ಬದ ದಿನ ಏನಾದರೂ ಸಮಾರಂಭ ಮಾಡಬೇಕೆಂದುಕೊಂಡು ಟೀಮ್ ಆತ್ರೇಯ ತಂಡದಿಂದ ಪ್ರತಿವರ್ಷ ಮೈ ನೇಮ್ ಇಸ್ ರಾಜ್ ಎಂಬ ಹೆಸರಿನಲ್ಲಿ ಸಂಗೀತ ಕಾರ್ಯಕ್ರಮ ಆಯೋಜಿಸಿಕೊಂಡು ಬರುತ್ತಿದ್ದೇವೆ. ಇದರ ಜೊತೆಗೆ ಸಾಕಷ್ಟು ಸಾಮಾಜಿಕ ಕಾರ್ಯಗಳನ್ನು ಮಾಡಿದ್ದೇವೆ. ಈ ಬಾರಿ ನಮ್ಮೊಂದಿಗೆ ಸ್ವಾಮಿ ವಿವೇಕಾನಂದ ಟ್ರಸ್ಟ್ ಕೂಡ ಜೊತೆಯಾಗಿದೆ. ಏಪ್ರಿಲ್ 24 ರ ಸಂಜೆ ನಗರದ ಚೌಡಯ್ಯ ಮೆಮೋರಿಯಲ್ ಹಾಲ್ ನಲ್ಲಿ ಮೈ ನೇಮ್ ಇಸ್ ರಾಜ್ ಕಾರ್ಯಕ್ರಮ ನಡೆಯಲಿದೆ. ಸರಿಗಮಪ ಖ್ಯಾತಿಯ ಚನ್ನಪ್ಪ ಹುದ್ದರ್ , ಪೃಥ್ವಿ ಭಟ್, ಮೈತ್ರಿ ಅಯ್ಯರ್ ಸೇರಿದಂತೆ ಹೆಸರಾಂತ ಗಾಯಕರು ಅಂದು ಹಾಡಲಿದ್ದಾರೆ. ಹನ್ನೆರಡಕ್ಕೂ ಅಧಿಕ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವ ವಾದ್ಯ ಕಲಾವಿದರು ಈ ಕಾರ್ಯಕ್ರಮದಲ್ಲಿರುತ್ತಾರೆ.

ರಾಜಕುಮಾರ್ ಅವರು ಸಿನಿಮಾ, ಧ್ವನಿಸುರುಳಿ ಸೇರಿದಂತೆ 5000 ಕ್ಕೂ ಅಧಿಕ ಗೀತೆಗಳನ್ನು ಹಾಡಿದ್ದಾರೆ. ರಾಜ್, ಕೇವಲ ಹಾಡುಗಾರರಷ್ಟೇ ಆಗಿರಲಿಲ್ಲ. ಕೆಲವು ವಾದ್ಯಗಳನ್ನು ನುಡಿಸುತ್ತಿದ್ದರು. ಅವರೊಬ್ಬ ಸರಸ್ವತಿ ಪುತ್ರ ಎನ್ನುವುದರಲ್ಲಿ ಯಾವುದೇ ಸಂಶಯವಿಲ್ಲ. ಅದಕ್ಕೆ ಅವರು ಹಾಡಿರುವ ಮಾಣಿಕ್ಯ ವೀಣಾ, ನಾದಮಯ, ಮೇಘ ಬಂತು ಮೇಘ ಮುಂತಾದ ಹಾಡುಗಳೆ ಸಾಕ್ಷಿ. ಈ ಬಾರಿ ರಾಜ್ ಗೀತ ನಮನ ಎಂಬ ಹೆಸರಲ್ಲಿ ಅವರು ಹಾಡಿರುವ ಸಂಗೀತಮಯ ಹಾಡುಗಳನ್ನು ಪ್ರಸ್ತುತ ಪಡಿಸುತ್ತಾ ಅಣ್ಣವ್ರಲ್ಲಿದ್ದ ಒಬ್ಬ ಶ್ರೇಷ್ಠ ಸಂಗೀತಗಾರನನ್ನು ಗೌರವಿಸಿ ಈ ಕಾರ್ಯಕ್ರಮವನ್ನು ಸಮರ್ಪಿಸುತಿದ್ದೇವೆ.

ಹೆಚ್ಚಿನ ಜನರೂ ಈ ಕಾರ್ಯಕ್ರಮಕ್ಕೆ ಬಂದು ಯಶಸ್ವಿಗೊಳಿಸಬೇಕೆಂದು ಟೀಮ್ ಆತ್ರೇಯ ಪರವಾಗಿ ಮನೋಜವಂ ಆತ್ರೇಯ ತಿಳಿಸಿದರು. ನಾನು ಸಹ ಮೈ ನೇಮ್ ಇಸ್ ರಾಜ್ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿದ್ದೆ ಎಂದು ಮಾತಾನಾಡಿದ ಸ್ವಾಮಿ ವಿವೇಕಾನಂದ ಟ್ರಸ್ಟ್ ನ ಪಾಟೀಲ್ ಅವರು, ಈ ಬಾರಿ ನಾವು ಮನೋಜವಂ ಅವರ ಜೊತೆಯಾಗಿದ್ದೆವೆ. ರಾಜ್ ಕುಟುಂಬದ ಸದಸ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದೇವೆ. ಸಾಕಷ್ಟು ಗಣ್ಯರು ಈ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಟಿಕೇಟ್ ಗಳು ಬುಕ್ ಮೈ ಶೋ ನಲ್ಲಿ ಲಭ್ಯವಿದೆ. ನಮ್ಮ ಸಮಾರಂಭಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು. ಟೀಂ ಆತ್ರೇಯ ತಂಡದ ಮನೋಜ್ ಹೊಸಮನಿ, ಶರಣ್, ವೇದಾಂತ್ ನರಸಿಂಹ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.




# ಅದ್ದೂರಿ ಸೆಟ್‌ನಲ್ಲಿ ಮೂಡಿ ಬಂತು 'ಸಂಜು-ಗೀತಾ' ಸಾಂಗ್



ಒಂದು ಪ್ರೇಮಕಥೆ ಎಂದರೆ ಅಲ್ಲಿ ಖುಷಿ, ತ್ಯಾಗದ ಜೊತೆಗೆ ಕಾಡುವ ಕಥೆ ಇರಬೇಕು. ಇದನ್ನು ಅಚ್ಚುಕಟ್ಟಾಗಿ ತೆರೆಮೇಲೆ ತಂದವರು ನಿರ್ದೇಶಕ ನಾಗಶೇಖರ್. ಅದಕ್ಕೆ ಮೈನಾ, ಸಂಜು ವೆಡ್ಸ್ ಗೀತಾಗಿಂತ ಉದಾಹರಣೆ ಬೇಕಿಲ್ಲ. ಈಗ ಹೊಸ ಸಂಜು ಹಾಗೂ ಗೀತಾರ ನವೀನ ಪ್ರೇಮಕಥೆಯನ್ನು ನಾಗಶೇಖರ್ ಹೇಳಹೊರಟಿದ್ದಾರೆ. ಶ್ರೀನಗರ ಕಿಟ್ಟಿ ಜೊತೆ ರಮ್ಯಾ ಬದಲು ರಚಿತಾ ರಾಮ್ ಬಂದಿದ್ದಾರೆ.

ರೇಷ್ಮೆ ನೂಲಿಗೆ ಉತ್ತಮ ಬೆಲೆ ಸಿಗಬೇಕೆಂದು ಹೋರಾಡುವ ನಮ್ಮ ಮಣ್ಣಿನ ಪ್ರೇಮಿಗಳ ಅದ್ಬುತ ಪ್ರೇಮಕಾವ್ಯವಿದು. ಸದ್ಯ ಚಿತ್ರದ ಬಹುತೇಕ ಚಿತ್ರೀಕರಣ, ಎಡಿಟಿಂಗ್ ಮುಗಿದಿದ್ದು ಲೂಪ್ ಸ್ಟುಡಿಯೋದಲ್ಲಿ ಡಬ್ಬಿಂಗ್ ಕಾರ್ಯ ನಡೆದಿದೆ. ಈಗಾಗಲೇ ಸ್ವಿಟ್ಜರ್ ಲ್ಯಾಂಡ್ ನಲ್ಲಿ 15 ದಿನ ಹನ್ನೊಂದು ಲೊಕೇಶನ್ ಗಳಲ್ಲಿ ಮೂರನೇ ಹಂತದ ಚಿತ್ರೀಕರಣ ಮುಗಿಸಿದ್ದು, ಈಗ ನಾಲ್ಕನೇ ಹಂತದ ಚಿತ್ರೀಕರಣ ಶುರುವಾಗಿದೆ. ಕುಣಿಗಲ್ ನಲ್ಲಿ ಅದ್ದೂರಿ ಹಾಡೊಂದರ ಶೂಟಿಂಗ್ ನಡೆದಿದೆ.

ಈ ಹಾಡು, ಚಿತ್ರದ ಕುರಿತಂತೆ ಮಾತನಾಡಿದ ನಿರ್ಮಾಪಕ ಛಲವಾದಿ ಕುಮಾರ್, ಕುಣಿಗಲ್ ನ ಯುಬಿ ಸ್ಟಡ್ ಫಾರಂ(ಕುದುರೆ ಫಾರಂ)ನಲ್ಲಿ ಸುಮಾರು 5 ದಿನಗಳ ಕಾಲ ಪ್ರಮುಖವಾದ ಕಲರ್ ಫುಲ್ ಹಾಡಿನ ಚಿತ್ರೀಕರಣ ನಡೆಸಲಾಯಿತು. ತುಂಬಾ ಅದ್ದೂರಿಯಾಗಿ ಮೂಡಿ ಬಂದಿರುವ ಈ ಹಾಡಿಗೆ ಸುಮಾರು 45 ರಿಂದ 50 ಲಕ್ಷ ರೂ. ವರೆಗೆ ಖರ್ಚು ಮಾಡಲಾಗಿದೆ. ಇದಲ್ಲದೆ ಉಳಿದ ಹಾಡುಗಳನ್ನೂ ಸಹ ಇನ್ನೂ ಅದ್ದೂರಿಯಾಗಿ ಆಗಿ ಚಿತ್ರೀಕರಿಸುವ ಯೋಜನೆಯನ್ನು ಹಾಕಿಕೊಂಡಿದ್ದೇವೆ. ಒಟ್ಟಾರೆ ಇಡೀ ಚಿತ್ರ ವೈಭವಯುತವಾಗಿ ಮೂಡಿಬರಬೇಕು. ಅದ್ಬುತ ದೃಶ್ಯಕಾವ್ಯವಾಗಿ ಸಂಜು ವೆಡ್ಸ್ ಗೀತಾ ಮೂಡಿಬರಬೇಕು ಎನ್ನುವುದೇ ನಮ್ಮ ಉದ್ದೇಶ ಎಂದು ಹೇಳಿದರು.

ಪವಿತ್ರ ಇಂಟರ್ ನ್ಯಾಷನಲ್ ಮೂವೀಮೇಕರ್ಸ್ ಅಡಿಯಲ್ಲಿ ನಿರ್ಮಾಪಕ ಛಲವಾದಿ ಕುಮಾರ್ ಅವರು ಈ ಚಿತ್ರವನ್ನು ಅದ್ದೂರಿ ಬಜೆಟ್ ನಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ನಾಗಶೇಖರ್ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಸಂಗೀತ ನಿರ್ದೇಶಕ ಶ್ರೀಧರ ವಿ. ಸಂಭ್ರಮ 5 ಸುಂದರವಾದ ಹಾಡುಗಳನ್ನು ಮಾಡಿದ್ದು, ಸೋನು ನಿಗಂ, ಶ್ರೇಯಾ ಘೋಷಾಲ್, ಮಂಗ್ಲಿ ದನಿಯಾಗಿದ್ದಾರೆ. ರಾಗಿಣಿ ದ್ವಿವೇದಿ, ಚೇತನ್ ಚಂದ್ರ, ರಂಗಾಯಣ ರಘು, ಸಾಧು ಕೋಕಿಲ , ತಬಲಾನಾಣಿ, ಗಿಚ್ಚಿಗಿಲಿಗಿಲಿ ವಿನೋದ್ ಅಲ್ಲದೆ ಖಳನಟ ಸಂಪತ್ ಕುಮಾರ್ ಸೇರಿದಂತೆ ಹೆಸರಾಂತ ಕಲಾವಿದರ ತಾರಾಗಣ ಈ ಚಿತ್ರಕ್ಕಿದೆ. ೦ 24 ಕ್ರಿಯೇಶನ್ಸ್ ಥ್ರೂ ಗೋಕುಲ್ ಫಿಲಂಸ್ ಈ ಚಿತ್ರವನ್ನು ಪ್ರಪಂಚದಾದ್ಯಂತ ಬಿಡುಗಡೆ ಮಾಡುತ್ತಿದೆ.



# 'ಉತ್ತರಕಾಂಡ' ಚಿತ್ರಕ್ಕಾಗಿ ಬಂಡೆ ಕಾಕಾನಾದ ರಂಗಾಯಣ ರಘು

ಈಗಾಗಲೇ ಎಲ್ಲೆಡೆ ಸಂಚಲನ ಮೂಡಿಸಿರುವ ಬಹು ನಿರೀಕ್ಷಿತ 'ಉತ್ತರಕಾಂಡ' ಚಿತ್ರದಲ್ಲಿ ಅಭಿನಯಾಸುರ ರಂಗಾಯಣ ರಘು ನಟಿಸಲಿದ್ದಾರೆ. ಬಂಡೆ ಕಾಕಾ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಖ್ಯಾತ ನಿರ್ದೇಶಕ ಯೋಗರಾಜ್ ಭಟ್ ಕೂಡ ಉತ್ತರಾಕಾಂಡದಲ್ಲಿ ನಟಿಸಲಿದ್ದಾರೆ. ಪಾಟೀಲ್ ಎಂಬ ಪಾತ್ರಕ್ಕಾಗಿ ಬಣ್ಣ ಹಚ್ಚಲಿದ್ದಾರೆ. ನಿರ್ದೇಶಕರಾಗಿ ಆಕ್ಷನ್ ಕಟ್ ಹೇಳುತ್ತಿದ್ದ ಭಟ್ಟರು,ಇದೀಗ ವಿಭಿನ್ನವಾಗಿ ಆಕ್ಷನ್ ಕಟ್ ಹೇಳಿಸಿಕೊಳ್ಳಲಿದ್ದಾರೆ. ಭಟ್ಟರು ಪಾತ್ರ ಮಾಡುವುದು ಹೊಸದೇನೂ ಅಲ್ಲ. ಅವರಿಗೆ ಉತ್ತರ ಕರ್ನಾಟಕ ಭಾಷೆ ಚೆನ್ನಾಗಿಯೇ ಬರುತ್ತದೆ.

ಮೊನ್ನೆಯಷ್ಟೇ ನಟ ದೂದ್ ಪೇಡಾ ದಿಗಂತ್ ಉತ್ತರಕಾಂಡಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಮಿರ್ಚಿ ಮಲ್ಲಿಗೆ ಎಂಬ ಪಾತ್ರದಲ್ಲಿ ತೆರೆ ಮೇಲೆ ಕಾಣಿಸಿಕೊಳ್ಳಲಿದ್ದಾರೆ. ಈಗಾಗಲೇ ಪೋಸ್ಟರ್ ನಲ್ಲಿನ ಅವರ ಖಡಕ್ ಲುಕ್ ಮೂಲಕ ಕುತೂಹಲ ಕೆರಳಿಸಿದ್ದಾರೆ.

ಈ ಸಿನಿಮಾದಲ್ಲಿ ಚೈತ್ರಾ ಆಚಾರ್ಯ್ ಕೂಡ ನಟಿಸುತ್ತಿದ್ದಾರೆ. ಚೈತ್ರ ಆಚಾರ್ ಉತ್ತರಕಾಂಡ ತಾರಾಬಳಗಕ್ಕೆ ಸೇರ್ಪಡೆ ಆಗಿದ್ದು, ಇಂದು ಚಿತ್ರೀಕರಣದಲ್ಲೂ ಪಾಲ್ಗೊಳ್ಳಲಿದ್ದಾರೆ. ಈ ಸಿನಿಮಾದಲ್ಲಿ ಅವರು ಲಚ್ಚಿ ಎಂಬ ಒಂದು ಮುಖ್ಯ ಪಾತ್ರಕ್ಕಾಗಿ ಬಣ್ಣ ಹಚ್ಚಲಿದ್ದಾರೆ.

ಉತ್ತರಕಾಂಡ ರೋಹಿತ್ ಪದಕಿ ನಿರ್ದೇಶನದ ಒಂದು ಆಕ್ಷನ್ ಡ್ರಾಮಾ ಚಿತ್ರವಾಗಿದ್ದು, ಚಿತ್ರದಲ್ಲಿ ಕರುನಾಡ ಚಕ್ರವರ್ತಿ ಡಾ ಶಿವರಾಜ್ ಕುಮಾರ್ ಮತ್ತು ನಟರಾಕ್ಷಸ ಡಾಲಿ ಧನಂಜಯ ಮುಖ್ಯ ಭೂಮಿಕೆಯಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಚಿತ್ರವನ್ನು ಕಾರ್ತಿಕ್ ಗೌಡ ಮತ್ತು ಯೋಗಿ ಜಿ ರಾಜ್ ಕೆ.ಆರ್.ಜಿ.ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಿದ್ದಾರೆ.

# ಆರ್‌ಸಿಬಿ ಹಸಿರು ಅಭಿಯಾನ

## ಕೆರೆಗಳಿಗೆ ಕಾಯಕಲ್ಪಕ್ಕೆ ಮುಂದಾದ ಫ್ರಾಂಚೈಸಿಗೆ ಭೇಷ್ ಎಂದ ಫ್ಯಾನ್ಸ್




ವಿಶ್ವದ ಅತ್ಯಂತ ಶ್ರೀಮಂತ ಫ್ರಾಂಚೈಸಿ ಲೀಗ್ ಟೂರ್ನಿಯಲ್ಲಿ ಆರ್‌ಸಿಬಿ ತಂಡಕ್ಕೆ ಸಾಕಷ್ಟು ಟ್ರೆಂಡ್ ಇದೆ. ಇಲ್ಲಿಯವರೆಗೆ ಒಂದೇ ಒಂದು ಬಾರಿ ಪ್ರಶಸ್ತಿ ಗೆಲ್ಲಲು ಸಾಧ್ಯವಾಗದೇ ಇದ್ದರೂ ಆರ್ ಸಿಬಿ, ಇತರೆ ಎಲ್ಲಾ ತಂಡಗಳಿಗಿಂತಲೂ ಅತ್ಯಂತ ಹೆಚ್ಚಿನ ಅಭಿಮಾನಿಗಳನ್ನ ಹೊಂದಿದೆ. ಫೇಸ್‌ಬುಕ್, ಇನ್ಸ್ಟಾಗ್ರಾಮ್, ಟ್ವಿಟರ್ ಸೇರಿದಂತೆ ಸೋಶಿಯಲ್ ಮೀಡಿಯಾದಲ್ಲಿ ಕೋಟ್ಯಂತರ ಫಾಲೋವರ್ಸ್ ಇದ್ದಾರೆ. ಪಂದ್ಯ ಗೆದ್ದರೂ, ಸೋತರೂ ಆರ್ ಸಿಬಿ ತಂಡವನ್ನ ಬೆಂಬಲಿಸುವ ಪ್ರಾಮಾಣಿಕ ಅಭಿಮಾನಿಗಳು ಇವರಾಗಿದ್ದಾರೆ.

ಇಂದಿಗೂ ಅಭಿಮಾನಿಗಳಿಂದ ಭಾರೀ ಮೆಚ್ಚುಗೆ ಪಡೆದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಸಮಾಜ ಸೇವಾ ಕಾರ್ಯಗಳಿಗೂ ಮುಂದಾಗಿದೆ. ಪ್ರತಿ ಬಾರಿ ತನ್ನ ಆವೃತ್ತಿಯಲ್ಲಿ ಹಸಿರು ಜೆರ್ಸಿ ಧರಿಸಿ ಹಸಿರು ಪರಿಸರದ ಬಗ್ಗೆ ಜಾಗೃತಿ ಮೂಡಿಸುತ್ತಿದ್ದ ಆರ್‌ಸಿಬಿ ಕ್ರಿಕೆಟ್ ಫ್ರಾಂಚೈಸಿ, ಈ ಬಾರಿ ಬೆಂಗಳೂರಿನಲ್ಲಿ ಮೂರು ಕೆರೆಗಳನ್ನು ಮರು ಅಭಿವೃದ್ಧಿಗೊಳಿಸಲು ಮುಂದಾಗಿದೆ. ತಂಡದ ಹಸಿರು ಅಭಿಯಾನ ಯೋಜನೆಯಡಿ ಈ ಕೆಲಸಕ್ಕೆ ಫ್ರಾಂಚೈಸಿ ಮುಂದಾಗಿದೆ.

ಬೆಂಗಳೂರಿನ ಇಟ್ಟಗಾಲಪುರ ಕೆರೆ ಮತ್ತು ಸದೇನಹಳ್ಳಿ ಕೆರೆ ಮರು ಅಭಿವೃದ್ಧಿ ಕಾರ್ಯವು ಮುಕ್ತಾಯ ಹಂತ ತಲುಪಿದೆ. ಕಣ್ಣೂರು ಕೆರೆಯಲ್ಲಿ ನಾಗರಿಕರಿಗೆ ಮೂಲ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಆರ್‌ಸಿಬಿಯು ಕಳೆದ ಅಕ್ಟೋಬರ್‌ನಿಂದಲೇ ಇಎಸ್‌ಜಿ ಬದ್ಧತೆಯಡಿಯಲ್ಲಿ ಕೆರೆ ಸುಧಾರಣೆ ಕಾರ್ಯ ಯೋಜನೆಯನ್ನು ಆರಂಭಿಸಿದೆ. ಕಾವೇರಿ ನೀರಿನಿಂದ ವಂಚಿತವಾಗಿರುವ ಹಾಗೂ ಅಂತರ್ಜಲ ಮತ್ತು ಮಳೆ ನೀರಿನ ಮೂಲದ ಮೇಲೆಯೇ ಅವಲಂಬಿತವಾಗಿರುವ ಪ್ರದೇಶಗಳ ಜಲಮೂಲಗಳನ್ನು ಅಭಿವೃದ್ಧಿಪಡಿಸುವ ಗುರಿಯೂ ಇದಾಗಿದೆ.

ಇಟ್ಟಗಾಲಪುರ ಮತ್ತು ಸದೇನಹಳ್ಳಿ ಕೆರೆಗಳಿಂದ ಇದುವರೆಗೆ 1.20 ಲಕ್ಷ ಟನ್ ಹೂಳು ಮತ್ತು ಮರಳನ್ನು ಹೊರತೆಗೆಯಲಾಗಿದೆ. ಅದೇ ಮಣ್ಣನ್ನು ಕೆರೆಗಳಿಗೆ ಒಡ್ಡು ಕಟ್ಟಲು ಮತ್ತು ಕಾಲುಹಾದಿ ನಿರ್ಮಿಸಲು ಬಳಸಲಾಗಿದೆ. ಅಲ್ಲದೇ ಸುತ್ತಮುತ್ತಲಿಗೆ 52 ರೈತರು ತಮ್ಮ ಹೊಲ. ಗದ್ದೆಗಳಿಗಾಗಿ ಈ ಮಣ್ಣು ತೆಗೆದುಕೊಂಡೂ ಹೋಗಿದ್ದಾರೆ ಎಂದು ಆರ್‌ಸಿಬಿ ಪ್ರಕಟಣೆಯಲ್ಲಿ ತಿಳಿಸಿದೆ.

ಸ್ಥಳೀಯ ಸಮುದಾಯಗಳ ಕಲ್ಯಾಣ ನಮ್ಮ ಗುರಿಯಾಗಿದೆ. ಬೆಂಗಳೂರಿನ ಪ್ರಮುಖ ಕೆರೆಗಳನ್ನು ಮರಳಿ ಅಭಿವೃದ್ಧಿಪಡಿಸುವುದರಿಂದ ಅಂತರ್ಜಲ ಮಟ್ಟ ಹೆಚ್ಚಳಕ್ಕೆ ಕಾರಣವಾಗಲಿದೆ. ಅಲ್ಲದೇ ಅಕ್ಕಪಕ್ಕದ ಗ್ರಾಮಗಳಿಗೆ ಕೃಷಿ ಮತ್ತಿತರ ಕಾರ್ಯಗಳಿಗೂ ನೀರಿನ ಸೌಲಭ್ಯ ಒದಗಿಸಲಿದೆ ಎಂದು ಆರ್‌ಸಿಬಿ ಮುಖ್ಯಸ್ಥ ರಾಜೇಶ್ ಮೆನನ್ ಹೇಳಿದ್ದಾರೆ.

**ಪ್ರಕರಣ ದಿಕ್ಕು ತಪ್ಪಿಸುತ್ತಿದ್ದಾರೆ, ಸಿಎಂಗೆ ಪತ್ರ ಬರೆದು**

# ನಾವೂ ಆತ್ಮಹತ್ಯೆ ಮಾಡಿಕೊಳ್ತೇವೆ

**ಹುಬ್ಬಳ್ಳಿ:** ನನ್ನ ಮಗಳ ಹತ್ಯೆ ಪ್ರಕರಣವನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಪೊಲೀಸ್ ಆಯುಕ್ತರು ಗೃಹ ಸಚಿವರಿಗೆ ತಪ್ಪು ಮಾಹಿತಿ ನೀಡಿದ್ದಾರೆ. ಹೀಗೆ ಆದ್ರೆ, ನಾವೂ ಸಹ ಸಿಎಂಗೆ ಪತ್ರ ಬರೆದು ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಮೃತ ನೇಹಾಳ ತಂದೆ ನಿರಂಜನ್ ಹಿರೇಮಠ ಅವರು ಅಳಲು ತೋಡಿಕೊಂಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ನೇಹಾ ತಂದೆ, ನಮ್ಮದು ಕ್ರಿಮಿನಲ್ ಹಿನ್ನೆಲೆಯುಳ್ಳ ಕುಟುಂಬ ಅಲ್ಲ. ಐದು ಮಂದಿ ಸೇರಿ ನನ್ನ ಮಗಳ ಹತ್ಯೆ ಮಾಡಿದ್ದಾರೆ. ಉಳಿದ ಫಯಾಜ್‌ನನ್ನ ಮುಂದಕ್ಕೆ ಬಿಟ್ಟು ಕೊಲೆ ಮಾಡಿಸಿದ್ದಾರೆ. ಆ ಸಂದರ್ಭದಲ್ಲಿ ಉಳಿದ ನಾಲ್ಕೂ ಜನರು ಅಲ್ಲೇ ಇದ್ದರು. ಆದರೆ 100ಕ್ಕೆ ನೂರು ಪೊಲೀಸ್ ಆಯುಕ್ತರು ಗೃಹ ಸಚಿವರಿಗೆ ತಪ್ಪು ಮಾಹಿತಿ ನೀಡಿದ್ದಾರೆ. ಆಡಳಿತ ಪಕ್ಷದ ಕೆಲ ಸ್ಥಳೀಯ ಜನಪ್ರತಿನಿಧಿಗಳೂ ತಪ್ಪು ಮಾಹಿತಿ ನೀಡಿದ್ದಾರೆ. ಗೃಹಸಚಿವರನ್ನ ದಾರಿ ತಪ್ಪಿಸುವ ಕೆಲಸ ಮಾಡಿದ್ದಾರೆ. ಈ ಬೆಳೆವಣಿಗೆ ನೋಡಿದರೆ ಪ್ರಕರಣ ದಾರಿ ತಪ್ಪುವ ಹಾಗೆ ಕಾಣುತ್ತಿದೆ. ಸಿ.ಎಂ ಅವರಿಗೆ ಪತ್ರ ಬರೆದು ನಾವೂ ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಭಾವುಕರಾಗಿದ್ದಾರೆ.

ಈ ಪ್ರಕರಣದ ಹಿಂದೆ ಕಾಣದ ಕೈ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಪಕ್ಷದ ನಾಯಕರು ನನ್ನ ಬೆನ್ನಿಗೆ ನಿಂತು ಧೈರ್ಯ ಹೇಳಬೇಕು ಎಂದು ಪ್ರಕರಣ ಸತ್ಯಾಸತ್ಯತೆ ಹೊರತೆಗೆಯಬೇಕು ಎಂದು ಮನವಿ ಮಾಡಿದ್ದಾರೆ.




**ಪರಮೇಶ್ವರ್ ವಿರುದ್ಧ ಬೇಸರ:** ಗೃಹ ಸಚಿವ ಪರಮೇಶ್ವರ್ ಅವರು ವಿಷಾದ ವ್ಯಕ್ತಪಡಿಸಿದ ಹೇಳಿಕೆ ಕುರಿತು ಪ್ರತಿಕ್ರಿಯೆ ನೀಡಿದ ನಿರಂಜನ ಅವರು, ಗೃಹ ಸಚಿವರು ವಿಷಾದ ವ್ಯಕ್ತಪಡಿಸಿದ್ದು ಇರಲಿ, ಆದ್ರೆ ಅವರು ನಮ್ಮ ಮನೆಗೆ ಬಂದು ಮಾತನಾಡಬೇಕಿತ್ತಲ್ಲ. ಆ ರೀತಿಯ ಬೆಳವಣಿಗೆ ಆಗಿಲ್ಲ. ಈಗ ನಾನು ಮಾತನಾಡಿದ್ದೇನೆ ಎಂದು ಸೃಷ್ಟಿ ಮಾಡಿ ಹೇಳುತ್ತಿದ್ದಾರೆ ಎಂದು ಬೇಸರ ಹೊರಹಾಕಿದ್ದಾರೆ.

ಇದೇ ವೇಳೆ ಮಗನಿಗೆ ಶಿಕ್ಷೆ ಆಗಬೇಕೆಂಬ ಹಂತಕ ಫಯಾಜ್ ತಾಯಿ ಹೇಳಿಕೆಗೆ ಪ್ರತಿಕ್ರಿಯಿಸಿ, ಮಗಳನ್ನು ಕಳೆದುಕೊಂಡಿದ್ದೇನೆ. ಆ ಕುಟುಂಬ ಕ್ಷಮೆ ಕೇಳಿದರೆ ಸಾಲದು. ನಿಮ್ಮ ಮಗ ಇಷ್ಟು ವಿಕೃತ ಮನೋಭಾವ ಇರೋದರ ಮಾಹಿತಿ ನೀಡಬೇಕಿತ್ತು. ಮೊದಲ ಹೇಳಿದ್ದರೇ ಈ ದುರಂತ ಆಗುತ್ತಿಲ್ಲ. ನಮ್ಮ ಮಗಳನ್ನ ಉಳಿಸಿಕೊಳ್ಳುತ್ತಿದ್ದೆವು. ಅವರ ದಾರಿತಪ್ಪಿದ್ದಾನೆ ಅಂದಾಗ ಮಾಹಿತಿ ನೀಡಬೇಕಿತ್ತು ಎಂದು ಹೇಳಿದ್ದಾರೆ.

**ನಿಮ್ಮ ಮಗನನ್ನು ನೀವೇ ಕೊಲ್ಲಿ:** ಈ ಹಿಂದೆಯೇ ಫಜಾಜ್ ತನ್ನ ತಂದೆಯನ್ನ ಕೊಲ್ಲಲು ಹೋಗಿದ್ದ ಅಂತಾ ಕೇಳಿದ್ದೇನೆ. ಅವರು ಮೊದಲೇ ಪೊಲೀಸರಿಗೆ ಮಾಹಿತಿ ನೀಡಿದ್ದರೆ, ಈವತ್ತು ನನ್ನ ಮಗಳು ಉಳಿಯುತ್ತಿದ್ದಳು. ಈಗ ನಿಮ್ಮ ಮಗನಿಗೆ ನೀವೇ ಜಾಮೀನುಕೊಟ್ಟು ಹೊರಗೆ ಕರೆದುಕೊಂಡು ಬನ್ನಿ. ನನ್ನ ಮಗಳಿಗೆ ಮಾಡಿದಂತೆನೀವು ಮಾಡಿ, ಅದೇ ನಿಜವಾದ ಕ್ಷಮೆ ಎಂದು ಭಾವುಕರಾಗಿದ್ದಾರೆ.

# ಪಂಜಾಬ್ ಕಿಂಗ್ಸ್ ನಾಯಕರಾಗ್ತಾರಾ ರೋಹಿತ್ ಶರ್ಮಾ?

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ರ ಮುಕ್ತಾಯಕ್ಕೂ ಮುನ್ನವೇ ಐಪಿಎಲ್ ಮೆಗಾ ಹರಾಜು ಚರ್ಚೆಗಳು ಶುರುವಾಗಿದೆ. ಈ ಚರ್ಚೆಗಳ ನಡುವೆ ರೋಹಿತ್ ಶರ್ಮಾ ಪಂಜಾಬ್ ಕಿಂಗ್ಸ್ ಪರ ಆಡಲಿದ್ದಾರಾ? ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ. ಇದಕ್ಕೆ ಮುಖ್ಯ ಕಾರಣ ಕೆಲ ದಿನಗಳ ಹಿಂದೆ ಹರಿದಾಡಿದ ಸುದ್ದಿಗಳು.




ಈ ಬಾರಿಯ ಐಪಿಎಲ್‌ನಲ್ಲಿ ರೋಹಿತ್ ಶರ್ಮಾ ಮುಂಬೈ ಇಂಡಿಯನ್ಸ್ ಪರ ಕೇವಲ ಆಟಗಾರನಾಗಿ ಕಣಕ್ಕಿಳಿಯುತ್ತಿದ್ದಾರೆ. ಕಳೆದ 10 ವರ್ಷಗಳಿಂದ ಮುಂಬೈ ತಂಡದ ನಾಯಕರಾಗಿ ಕಾಣಿಸಿಕೊಂಡಿದ್ದ ಹಿಟ್‌ಮ್ಯಾನ್ ಅವರನ್ನು ಈ ಬಾರಿ ನಾಯಕತ್ವದಿಂದ ಕೆಳಗಿಳಿಸಲಾಗಿದೆ. ಅಲ್ಲದೆ ಅವರ ಬದಲಿಗೆ ಇದೀಗ ಹಾರ್ದಿಕ್ ಪಾಂಡ್ಯ ಮುಂಬೈ ಇಂಡಿಯನ್ಸ್ ತಂಡವನ್ನು ಮುನ್ನಡೆಸುತ್ತಿದ್ದಾರೆ.

ಹೀಗಾಗಿಯೇ ಮುಂದಿನ ವರ್ಷ ರೋಹಿತ್ ಶರ್ಮಾ ಮುಂಬೈ ಇಂಡಿಯನ್ಸ್ ಪರ ಆಡಲ್ಲ ಎಂಬ ಸುದ್ದಿಗಳು ಕೇಳಿ ಬಂದಿದ್ದವು. ಈ ಸುದ್ದಿಗಳ ನಡುವೆ ಐಪಿಎಲ್ 2025 ರಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಹಿಟ್‌ಮ್ಯಾನ್ ಮುನ್ನಡೆಸಲಿದ್ದಾರೆ ಎಂಬ ಸುದ್ದಿಯೊಂದು ಸಖತ್ ವೈರಲ್ ಆಗಿದೆ.

ಹೀಗೆ ಸುದ್ದಿ ವೈರಲ್ ಆಗಲು ಮುಖ್ಯ ಕಾರಣ, ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದ ಬಳಿಕ ಪಂಜಾಬ್ ಕಿಂಗ್ಸ್ ತಂಡದ ಮಾಲಕಿ ಪ್ರೀತಿ ಝಿಂಟಾ ರೋಹಿತ್ ಶರ್ಮಾ ಜೊತೆ ಮಾತನಾಡಿದ್ದು. ಇದರ ಬೆನ್ನಲ್ಲೇ ಹಿಟ್‌ಮ್ಯಾನ್ ಮುಂದಿನ ವರ್ಷ ಪಂಜಾಬ್ ಕಿಂಗ್ಸ್ ಪರ ಕಣಕ್ಕಿಳಿಯಲಿದ್ದಾರೆ ಎಂಬ ಸುದ್ದಿ ಮಹತ್ವ ಪಡೆದುಕೊಂಡಿದೆ.

ಇದೀಗ ಈ ವದಂತಿಗಳ ಬಗ್ಗೆ ಖುದ್ದು ಪ್ರೀತಿ ಝಿಂಟಾ ಪ್ರತಿಕ್ರಿಯಿಸಿದ್ದಾರೆ. ಸದ್ಯ ಹರಿದಾಡುತ್ತಿರುವ ಸುದ್ದಿಗಳು ಸಂಪೂರ್ಣ ಆಧಾರರಹಿತ, ಸುಳ್ಳು ಸುದ್ದಿಗಳು. ನಾನು ರೋಹಿತ್ ಶರ್ಮಾ ಅವರನ್ನು ಬಹಳ ಗೌರವದಿಂದ ಕಾಣುತ್ತೇನೆ. ಅವರ ದೊಡ್ಡ ಅಭಿಮಾನಿ ನಾನು. ಆದರೆ ಅವರ ಜೊತೆ ಪಂಜಾಬ್ ಕಿಂಗ್ಸ್ ತಂಡಕ್ಕೆ ಬರುವ ಬಗ್ಗೆಯಾಗಲಿ ನಾನು ಚರ್ಚಿಸಿಲ್ಲ ಅಥವಾ ಅಂತಹ ಹೇಳಿಕೆಯನ್ನು ನೀಡಿಲ್ಲ. ಹೀಗಾಗಿ ಅಂತಹ ಸುದ್ದಿಗಳನ್ನು ನಂಬಬೇಡಿ ಎಂದು ಪ್ರೀತಿ ಝಿಂಟಾ ತಿಳಿಸಿದ್ದಾರೆ.

ಇದಾಗ್ಯೂ, ಐಪಿಎಲ್ 2025 ಕ್ಕಾಗಿ ಮೆಗಾ ಹರಾಜು ನಡೆಯಲಿದ್ದು, ಅದಕ್ಕೂ ಮುನ್ನ ರೋಹಿತ್ ಶರ್ಮಾ ಅವರನ್ನು ಮುಂಬೈ ಇಂಡಿಯನ್ಸ್ ಬಿಡುಗಡೆ ಮಾಡಿದರೆ ಅವರು ಹರಾಜಿನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ವೇಳೆ ಹಿಟ್‌ಮ್ಯಾನ್ ಖರೀದಿಗಾಗಿ ಒಂದಷ್ಟು ಫ್ರಾಂಚೈಸಿಗಳು ಪ್ರಯತ್ನಿಸುವುದಂತು ದಿಟ. ಹೀಗೆ ರೋಹಿತ್ ಶರ್ಮಾ ಖರೀದಿಗೆ ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ಕೂಡ ಪ್ರಯತ್ನ ನಡೆಸುವುದು ಖಚಿತ ಎಂದೇ ಎನ್ನಬಹುದು.

# ಹೆಣ್ಣುಮಕ್ಕಳ ಬ್ಯಾಗ್‌ನಲ್ಲಿ ಸರ್ಕಾರ ಎಕೆ–47 ಗನ್ ಇಡಬೇಕು

**ಯಾದಗಿರಿ:** ಎಲ್ಲಾ ಹೆಣ್ಣುಮಕ್ಕಳ ಬ್ಯಾಗ್‌ನಲ್ಲಿ ಸರ್ಕಾರ ಎಕೆ-47 ಗನ್ ಇಡಬೇಕು ಎಂದು ದಾಸವಾಳ ಮಠದ ವೀರೇಶ್ವರ ಸ್ವಾಮಿಜಿ ಹೇಳಿದ್ದಾರೆ.

ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿಯಲ್ಲಿ ನಡೆದ ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ್ದಾರೆ. ಈ ವೇಳೆ, ಯಾವ ಪೋಷಕರು ಹೆಣ್ಣುಮಕ್ಕಳ ಹಿಂದೆ ರಕ್ಷಣೆಗೆ ಹೋಗಲು ಆಗುವುದಿಲ್ಲ. ಅಲ್ಲದೇ ಶಿಕ್ಷಣ ಸಂಸ್ಥೆಯವರು ಸಹ ಹೆಣ್ಣುಮಕ್ಕಳಿಗೆ ಭದ್ರತೆ ಕೊಡಲು ಆಗುತ್ತಾ? ಹೀಗಾಗಿ ಹೆಣ್ಣುಮಕ್ಕಳಿಗೆ ಸರ್ಕಾರ ದೈಹಿಕ ಸಾಮರ್ಥ್ಯದ ತರಬೇತಿ ಕೊಡಬೇಕು. ಇದಕ್ಕಾಗಿ ಒಂದು ತರಗತಿ ಮೀಸಲಿಡಬೇಕು ಎಂದು ಅವರು ಆಗ್ರಹಿಸಿದ್ದಾರೆ.




ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಏನೇ ಮಾಡಿದರೂ ವರ್ಷ ಆರು ತಿಂಗಳು ಜೈಲಿನಲ್ಲಿದ್ದು, ಮತ್ತೆ ಜಾಮೀನಿನ ಮೇಲೆ ಬರ್ತಿವಿ ಎಂದು ದುಷ್ಕೃತ್ಯ ಎಸಗುವ ಆರೋಪಿಗಳಿಗೆ ಮನದಟ್ಟಾಗಿದೆ. ಆರೋಪಿಯನ್ನು ಪೊಲೀಸರು ಹೇಗೆ ಠಾಣೆಗೆ ಕರೆತಂದ್ರೂ, ಹಾಗೆ ಸ್ಮಶಾನಕ್ಕೆ ಕರೆದುಕೊಂಡ ಹೋಗಬೇಕು ಎಂದರು.

ಸಿಎಂ ಹಾಗೂ ಗೃಹ ಸಚಿವರ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಜವಾಬ್ದಾರಿ ಸ್ಥಾನದಲ್ಲಿರುವ ವ್ಯಕ್ತಿಗಳು ಜವಾಬ್ದಾರಿ ಮರೆತು ಹೇಳಿಕೆ ಕೊಟ್ಟಿದ್ದಾರೆ. ಆಕಸ್ಮಿಕವಾದದ್ದು ಎಂಬ ಪದ ಬಹಳ ಹೇಯವಾದದ್ದು. ಇಂತಹ ಮಾತುಗಳು ಆ ವ್ಯಕ್ತಿಗೆ ಶೋಭೆ ತರುವಂತದ್ದಲ್ಲ. ಉದ್ದೇಶಪೂರ್ವಕವಾಗಿ ನೇಹಾ ಹಿರೇಮಠರನ್ನು ಒಬ್ಬರೇ ಬರುವಾಗ ಕತ್ತು ಕೊಯ್ದು ಒಂಬತ್ತು ಬಾರಿ ಚುಚ್ಚಿ ಕೊಲೆಗೈದಿದ್ದಾನೆ. ರಾಜ್ಯದಲ್ಲಿ ಮತ್ತೊಮ್ಮ ಈ ರೀತಿ ಘಟನೆ ಮರುಕಳಿಸದಂತೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದ ಅವರು ಆಗ್ರಹಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com